ಸಂಪುಟ: 04 ಸಂಚಿಕೆ: 197 ಪುಟಗಳು: 08 ಭಾನುವಾರ 29 ಸೆಪ್ಟೆಂಬರ್ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನಾಳೆಯೇ ನೀವು ಸಾಯುತ್ತೀರಿ ಎಂದೇ ಇಂದು ಬದುಕಿ. ಎಂದೆಂದಿಗೂ ಬದುಕಿಯೇ ಇರುತ್ತೀರಿ ಎಂದು ಭಾವಿಸಿಕೊಂಡು ಹೊಸದನ್ನು ಕಲಿಯಿರಿ.

## ದಾಖಲೆ ಬಿಡುಗಡೆ ಮಾಡಿದ್ರೆ ಕೈ ಸಚಿವರಿಗೆ ತಲೆದಂಡ..?



### ಐಪಿಎಸ್ ಅಧಿಕಾರಿ ಚಂದ್ರಶೇಖರ್ ವಿರುದ್ಧ ಕೇಂದ್ರ ಸಚಿವ ಕುಮಾರಸ್ವಾಮಿ ಕಿಡಿ

### ದಾಖಲೆ ಬಿಡುಗಡೆ ಮಾಡಿದ್ರೆ ಆರೇಳು ಸಚಿವರ ತಲೆದಂಡ

### ಹೊಸ ಬಾಂಬ್ ಸಿಡಿಸಿದ ಹೆಚ್ ಡಿ ಕುಮಾರಸ್ವಾಮಿ

**ಕೇಂದ್ರ ಸಚಿವ ಕೆಂಡ**

**ಸಿದ್ದು ಮುಡಾ ಎಚ್‌ಡಿಕೆ ಖೆಡ್ಡಾ**

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯ ಅವರ ಕುರಿತಾಗಿ ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ಸ್ಫೋಟಕ ಮಾಹಿತಿಯೊಂದನ್ನು ಹಂಚಿಕೊಂಡಿದ್ದಾರೆ.

1 ಮಧ್ಯ ರಾತ್ರಿ ದಿಢೀರ್ ಎದ್ದು ಡಾಕ್ಟರ್ ಕರೆಸಿದ್ದರು, ರಾಜ್ಯದ ಸಿಎಂ ಸ್ಥಿತಿ ಇಲ್ಲಿಗೆ ತಲುಪಿದೆ..! ಎಚ್‌ಡಿಕೆ ಸ್ಫೋಟಕ ಹೇಳಿಕೆ

2 ಸಿದ್ದರಾಮಯ್ಯ ವಿಡಿಯೋ ಇಲ್ಲಿದೆ ನೀವೇ ನೋಡ್ರಪ್ಪ: ಹೆಚ್ ಡಿ ಕುಮಾರಸ್ವಾಮಿ ಹೊಸ ಬಾಂಬ್

3 ಸಿಎಂ ವಿರುದ್ಧ ಕುಮಾರಸ್ವಾಮಿ ವಾಗ್ದಾಳಿ

ಜೆಡಿಎಸ್ ಕಚೇರಿಯಲ್ಲಿ ಶನಿವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಸಿಎಂ ಮಧ್ಯ ರಾತ್ರಿ ದಿಢೀರ್ ಎದ್ದು ಕುಳಿತುಕೊಂಡು, ಬಳಿಕ ಡಾಕ್ಟರ್ ಕರೆಸಿದ್ದರು. ರಾಜ್ಯದ ಸಿಎಂ ಸ್ಥಿತಿ ಇಲ್ಲಿಗೆ ತಲುಪಿದೆ ಎಂದು ಹೇಳುವ ಮೂಲಕ ಕುತೂಹಲ ಕೆರಳಿಸಿದ್ದಾರೆ.

ಸಿಎಂ ಸಿದ್ದರಾಮಯ್ಯ ಅವರು ನಾನು ಯಾರಿಗೂ ಹೆದರಲ್ಲ, ಹೆದರಲ್ಲ ಎಂದು ಹೇಳುತ್ತಾರೆ. ಮಧ್ಯರಾತ್ರಿ ದಿಢೀರನೆ ಎದ್ದು ಕುಳಿತುಕೊಂಡು ವೈದ್ಯರನ್ನು ಮನೆಗೆ ಕರೆಸಿಕೊಂಡಿದ್ದರು ಎಂಬ ಮಾಹಿತಿ ಕುಮಾರಸ್ವಾಮಿ ಹೇಳಿದ್ದಾರೆ. ಪಾಪ ನಾನು ಯಾರಿಗೂ ಹೆದರಲ್ಲ ಹೆದರಲ್ಲ ಅಂತಾರೆ. 92 ನೇ ವಯಸ್ಸಿನಲ್ಲಿ ಎಚ್ ಡಿ ದೇವೇಗೌಡರ ಕಣ್ಣಲ್ಲಿ ನೀರು ಬಿದ್ದಿದೆ. ಆ ವ್ಯಕ್ತಿಯ ನೋವು ಏನಿದೆ.. ಈ ಸರ್ಕಾರ ಯಾವ ರೀತಿಯಲ್ಲಿ ಭಸ್ಮ ಆಗಲಿದೆ. ದೇವೇಗೌಡ ಕುಟುಂಬ ಕೆದಕಿದರೆ ಕಣ್ಣಲ್ಲಿ ನೀರು ಹಾಕಿಸಿದರೆ ಭಗವಂತ ನೀಡುತ್ತಾನೆ. ಭಗವಂತ ನೀಡಿದ್ದಾರೆ ಇವಾಗಲೇ ಎಂದರು.

ಮುಂದುವರಿದು ಮೊನ್ನೆ ರಾತ್ರಿ ಸುಮಾರು 2.30,3ಗಂಟೆ ದಿಢೀರ್ ಎದ್ದು ಬಿಟ್ಟರು. ವೈದ್ಯರನ್ನು ಕರೆಸಿಕೊಂಡರು. ಬಳಿಕ ಎಲ್ಲೂ ಹೋಗಬಾರದು ಇಲ್ಲೇ ಇರಿ ಎಂದು ಕೂರಿಸಿಕೊಂಡಿದ್ದರು ಎಂದರು. ಯಾರು ಎಂಬ ಪ್ರಶ್ನೆಗೆ ಬೇರೆ ಯಾರು, ರಾಜ್ಯದ ಮುಖ್ಯಮಂತ್ರಿ ಪರಿಸ್ಥಿತಿ ಇಲ್ಲಿಗೆ ಬಂದಿದೆ ಎಂದರು. 40% ಸರ್ಕಾರ ಎಂದು ಬಿಜೆಪಿ ವಿರುದ್ಧ ಆರೋಪ ಮಾಡಿದ್ದರು. ಆದರೆ ಇವಾಗ ಅವರ ಪಕ್ಷದವರೇ ಹೇಳುತ್ತಾರೆ. 40% ಗಿಂತ ಜಾಸ್ತಿ ಕಮಿಷನ್ ನಡೆಯುತ್ತಿದೆ ಎಂದು. ಇದಕ್ಕೆ ನಿಮಗೆ ಅಧಿಕಾರ ಕೊಟ್ಟರಾ... ಎಂದು ಪ್ರಶ್ನಿಸಿದರು. ನನ್ನಲ್ಲಿ ಇರುವ ದಾಖಲೆ ಬಿಟ್ಟರೆ ಆರರಿಂದ ಏಳು ಸಚಿವರು ರಾಜೀನಾಮೆ ಕೊಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಎಚ್‌ಡಿ ಕುಮಾರಸ್ವಾಮಿ ನೀಡಿರುವ ಈ ಮಾಹಿತಿ ಕುತೂಹಲಕ್ಕೆ ಕಾರಣವಾಗಿದೆ. ಸಿಎಂ ಸಿದ್ದರಾಮಯ್ಯ ಅವರ ಕುರಿತಾಗಿ ಇದನ್ನು ಹೇಳಿದ್ದರೂ ಹೆಚ್ಚಿನ ಮಾಹಿತಿ ನೀಡಿಲ್ಲ. ಹಿರಿಯ ಐಪಿಎಸ್ ಅಧಿಕಾರಿ ಚಂದ್ರಶೇಖರ್ ಅವರ ಮೇಲಿರುವ

**ಕೆಟ್ಟ ಸಂಪ್ರದಾಯಕ್ಕೆ ನಾಂದಿ**

ಅಧಿಕಾರಿಗಳನ್ನು ದುರ್ಬಳಕೆ ಮಾಡಿಕೊಂಡು ವಿಪಕ್ಷದವರ ಮೇಲೆ ಸೇಡು ತೀರಿಸಿಕೊಳ್ಳುವ ಕೆಟ್ಟ ಸಂಪ್ರದಾಯಕ್ಕೆ ರಾಜ್ಯಸರ್ಕಾರ ನಾಂದಿ ಹಾಡಿದೆ ಎಂದು ಆರೋಪಿಸಿದರು. ಇದೇ ಪರಿಸ್ಥಿತಿ ರಾಜ್ಯದಲ್ಲಿ ಮುಂದುವರೆದರೆ ಮುಂದೆ ಜನಪ್ರತಿನಿಧಿಗಳು ಕಾರ್ಯ ನಿರ್ವಹಿಸುವುದಾದರೂ ಹೇಗೆ ಎಂದು ಪ್ರಶ್ನಿಸಿದರು. ಗಂಗೇನಹಳ್ಳಿ ಡಿ ನೋಟಿಫಿಕೇಷನ್ ನಾನು ಮಾಡಿಲ್ಲ. ಮುಖ್ಯಮಂತ್ರಿಯಾಗಿದ್ದಾಗ ಅದಕ್ಕೆ ಸಂಬಂಧಿಸಿದ ಕಡತ ನನ್ನ ಮುಂದೆ ಬಂದಾಗ ಕಾನೂನು ರೀತಿ ಕ್ರಮ ಕೈಗೊಳ್ಳಲು ಸೂಚಿಸಿದ್ದೇನೆ ಅಷ್ಟೇ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನನಗೆ ನೋಟೀಸ್ ನೀಡಿರಲಿಲ್ಲ.

**ಕುಮಾರಸ್ವಾಮಿ ಗಂಭೀರ ಆರೋಪ**

ಅಧಿಕಾರಿಗೆ ಸಂಬಂಧಿಸಿದಂತೆ ಹಲವು ಅವ್ಯವಹಾರಗಳ ಆರೋಪಗಳು ಕೇಳಿಬಂದಿವೆ. ಇವರಿಗೆ ಲೋಕಾಯುಕ್ತ ಮತ್ತು ಆಂತರಿಕ ಭದ್ರತಾ ವಿಭಾಗದ ಜವಾಬ್ದಾರಿ ನೀಡಲಾಗಿದೆ ಎಂದು ವಾಗ್ದಾಳಿ ನಡೆಸಿದರು.ಇಂತಹ ಅಧಿಕಾರಿಯನ್ನು ಮುಂದಿಟ್ಟುಕೊಂಡು ನಾವು ಹೇಳಿದಂತೆ ವಿರೋಧ ಪಕ್ಷದವರನ್ನು ಮುಗಿಸಲು ಶ್ರಮವಹಿಸಿ ಕೆಲಸ ಮಾಡುವಂತೆ ಮುಖ್ಯಮಂತ್ರಿ,ಗೃಹಸಚಿವರು ಸೂಚನೆ ಕೊಟ್ಟಿದ್ದಾರೆ. ಈ ಕಾರ್ಯ ಮಾಡುವವರಿಗೆ ಸಿಐಡಿಯ ಮುಖ್ಯಸ್ಥ ಸ್ಥಾನ ಇಲ್ಲವೇ ಬೆಂಗಳೂರು ನಗರ ಪೊಲೀಸ್ ಆಯುಕ್ತರ ಹುದ್ದೆ ನೀಡುವ ಮಾತು ಕೂಡ ಕೊಟ್ಟಿದ್ದಾರೆ ಎಂದು ಗಂಭೀರ ಆರೋಪ ಮಾಡಿದರು.

ಆರೋಪಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಕೇಂದ್ರ ಗೃಹ ಕಾರ್ಯದರ್ಶಿಗೆ ನೀಡುವುದಾಗಿ ಕೇಂದ್ರ ಭಾರೀ ಕೈಗಾರಿಕೆ ಹಾಗೂ ಉಕ್ಕು ಸಚಿವ ಎಚ್.ಡಿ.ಕುಮಾರಸ್ವಾಮಿಯವರು ತಿಳಿಸಿದರು.

ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಈ ಅಧಿಕಾರಿಯ ಕೈಕೆಳಗಿನ ಅಧಿಕಾರಿ ಹಾಗೂ ಶ್ರೀಧರ್ ಎಂಬುವವರು 20 ಕೋಟಿ ರೂ.ಗೆ ಬೇಡಿಕೆ ಇಟ್ಟಿದ್ದರು ಎಂಬ ದೂರನ್ನುನೀಡಿದ್ದಾರೆ. ಆದರೂ ರಾಜ್ಯಸರ್ಕಾರ ಅವರ ಮೇಲೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದರು.

ಅವರ ಮೇಲಿರುವ ಆರೋಪಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಕೇಂದ್ರ ಗೃಹಕಾರ್ಯದರ್ಶಿಯವರಿಗೆ ನೀಡಲಾಗುವುದು. ಚಂದ್ರಶೇಖರ್‌ರವರ ಪತ್ನಿ ಹೆಸರಿನಲ್ಲಿ 38 ಮಹಡಿಯ ಕಟ್ಟಡವನ್ನು ರಾಜಕಾಲುವೆ ಮೇಲೆ ಕಟ್ಟುತ್ತಿದ್ದಾರೆ. ಅದರ ಬಗ್ಗೆ ಯಾವುದೇ ಕ್ರಮವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಇಂತಹ ಅಧಿಕಾರಿ ಲೋಕಾಯುಕ್ತ ಸಚಿವಾಲಯದ ಅಧಿಕಾರಿ ಮತ್ತು ಸಿಬ್ಬಂದಿ ವಿಚಾರಣೆ ನಡೆಸಲು ಸರ್ಕಾರದ ಅನುಮತಿ ಕೋರುವ ಉದ್ಧಟತನ ತೋರಿದ್ದಾರೆ. ಇವರಿಗೆ ಆ ಅಧಿಕಾರ ಕೊಟ್ಟವರು ಯಾರು ಆರೋಪಗಳನ್ನು ಹೊತ್ತಿರುವ ಆ ಅಧಿಕಾರಿಯನ್ನು ಉನ್ನತ ಹುದ್ದೆಯಲ್ಲಿ ಏಕೆ ಇಟ್ಟುಕೊಂಡಿದ್ದೀರಿ.. ಎಂದು ಆಕ್ರೋಶ ವ್ಯಕ್ತಪಡಿಸಿದರು. ಸಾಂವಿಧಾನಿಕ ಸಂಸ್ಥೆಗಳ ಬಗ್ಗೆ ಯಾವ ರೀತಿ ಗೌರವ ಕೊಡುತ್ತಿದ್ದಾರೆ ಎಂಬುದಕ್ಕೆ ತಾಜಾ ನಿದರ್ಶನ. ಸಿದ್ದರಾಮಯ್ಯನವರು ವಿರೋಧಪಕ್ಷ ನಾಯಕರಾಗಿದ್ದಾಗ ರಾಜ್ಯಪಾಲರ ಕರ್ತವ್ಯ ಹಾಗೂ ಜವಾಬ್ದಾರಿ ಬಗ್ಗೆ ಮಾತನಾಡಿದ್ದಾರೆ.

ಆಗ ಸರ್ಕಾರ ತಪ್ಪು ಮಾಡಿದಾಗ ತಿದ್ದುವ ಅಧಿಕಾರ ರಾಜ್ಯಪಾಲರಿಗಿದೆ ಎಂದು ಹೇಳಿದ್ದಾರೆ. ಅದನ್ನೊಮ್ಮೆ ಕೇಳುವುದು ಒಳ್ಳೆಯದು ಎಂದರು. ಬೇರೆಯವರ ಮೇಲೆ ದೂರು ಕೊಟ್ಟ ತಕ್ಷಣ ಎಫ್‌ಐಆರ್ ಹಾಕಿ ಬಂಧಿಸಲಾಗುತ್ತದೆ. ಇಂತವರ ಮೇಲೆ ಇನ್ಸ್‌ಪೆಕ್ಟರ್‌ನವರೇ ದೂರು ಕೊಟ್ಟಿದ್ದರೂ ಏಕೆ ಕ್ರಮವಿಲ್ಲ ಎಂದು ದೂರಿನಲ್ಲಿನ ಕೆಲವು ಅಂಶಗಳನ್ನು ಉಲ್ಲೇಖಿಸಿದರು.ಆಂಧ್ರಪ್ರದೇಶದ ಮೂಲದವರಾದ ಚಂದ್ರಶೇಖರ್ ಹಿಮಾಚಲ ಪ್ರದೇಶದ ಕೇಡರ್‌ನಲ್ಲಿ ಆಯ್ಕೆಯಾದವರು. 2008-09 ರಲ್ಲಿ ಕರ್ನಾಟಕದಲ್ಲಿ ನಿಯೋಜನೆ ಮೇಲೆ ಕೆಲಸ ಮಾಡಲು ರಾಜ್ಯಕ್ಕೆ ಬಂದವರು. ಗರಿಷ್ಠ 5 ವರ್ಷ ಈ ರೀತಿ ಸೇವೆ ಸಲ್ಲಿಸಬಹುದಷ್ಟೇ. ಆದರೆ ಇವರು ಹಿಮಾಚಲ ಪ್ರದೇಶದ ಹವಾಮಾನ ತಮ ಆರೋಗ್ಯಕ್ಕೆ ಅನುಕೂಲಕರವಾಗಿಲ್ಲ ಎಂದು ತಮ ಆರೋಗ್ಯದ ಬಗ್ಗೆ ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಇಲ್ಲೇ ಉಳಿದುಕೊಂಡಿದ್ದಾರೆ ಎಂದು ಆರೋಪಿಸಿದರು.

**ಸಿಎಂ ವಿರುದ್ಧ 70 ಕ್ಕೂ ಹೆಚ್ಚು ಪ್ರಕರಣ**

ನಾನು ಬಹಳ ಕ್ಲೀನ್, ಪಾರದರ್ಶಕ, ನನ್ನ ಜೀವನ ತೆರೆದ ಪುಸ್ತಕ ಎಂದೆಲ್ಲಾ ಹೇಳುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಲೋಕಾಯುಕ್ತದಲ್ಲಿ 70ಕ್ಕೂ ಹೆಚ್ಚು ಪ್ರಕರಣಗಳು ದಾಖಲಾಗಿವೆ. ಆ ಪ್ರಕರಣಗಳ ಕಥೆ ಏನಾಗಿದೆ ಅವುಗಳ ತನಿಖೆ ಎಲ್ಲಿಗೆ ಬಂದಿದೆ ಎಂಬುದನ್ನು ಜನರಿಗೆ ಹೇಳಬೇಕಲ್ಲವೇ ಎಂದು ಕೇಂದ್ರ ಸಚಿವರು ಒತ್ತಾಯ ಮಾಡಿದರು. ಇವರು ಕ್ಲೀನ್, ಸ್ವಚ್ಛ ಆಗಿದ್ದರೆ ಇಷ್ಟು ಪ್ರಕರಣಗಳು ಇವರ ಮೇಲೆ ಏಕೆ ದಾಖಲಾಗುತ್ತಿದ್ದವು ಇಂಥ ಪ್ರಕರಣಗಳನ್ನು ಮುಚ್ಚಿ ಹಾಕಿಕೊಳ್ಳಲು ಹಿಂದೆ ಲೋಕಾಯುಕ್ತವನ್ನು ಮುಗಿಸಿ ಎಸಿಬಿಯನ್ನು ರಚನೆ ಮಾಡಿಕೊಂಡಿದ್ದರು ಎಂದು ಅವರು ಹೇಳಿದರು.

## ಶಾಸಕ ಮುನಿರತ್ನ ನಿವಾಸದ ಮೇಲೆ ಎಸ್ ಐಟಿ ತಂಡ ದಾಳಿ

• ಉದಯವಾಹಿನಿ, ಬೆಂಗಳೂರು

ಅತ್ಯಾಚಾರ, ಜಾತಿ ನಿಂದನೆ ಪ್ರಕರಣ ಎದುರಿಸುತ್ತಿರುವ ರಾಜರಾಜೇಶ್ವರಿ ನಗರ ಕ್ಷೇತ್ರದ ಶಾಸಕ ಮುನಿರತ್ನ ಅವರ ನಿವಾಸದ ಮೇಲೆ ಎಸ್ ಐಟಿ ಅಧಿಕಾರಿಗಳು ಶನಿವಾರ ದಿಢೀರ್ ದಾಳಿ ನಡೆಸಿ, ಪರಿಶೀಲನೆ ನಡೆಸುತ್ತಿರುವುದಾಗಿ ಮೂಲಗಳು ತಿಳಿಸಿವೆ. ವೈಯಾಲಿಕಾವಲ್ ನಲ್ಲಿರುವ ಮುನಿರತ್ನ ಅವರ ಮನೆ ಹಾಗೂ ಕಚೇರಿ ಸೇರಿದಂತೆ 12ಕ್ಕೂ ಅಧಿಕ ಸ್ಥಳಗಳಲ್ಲಿ ಎಸಿಪಿ ಕವಿತಾ ನೇತೃತ್ವದ ಎಸ್ ಐಟಿ ತಂಡ ದಾಳಿ ನಡೆಸಿರುವುದಾಗಿ ವರದಿ ತಿಳಿಸಿದೆ. ಮುನಿರತ್ನ ಅವರ ಸಂಬಂಧಿಕರ ಮನೆಗಳ ಮೇಲೂ ದಾಳಿ ನಡೆಸಿದ್ದು, ಪರಿಶೀಲನೆ ನಡೆಸುತ್ತಿರುವುದಾಗಿ ವರದಿ ವಿವರಿಸಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಸಾಕ್ಷ್ಯಾಧಾರಗಳ ಕಲೆ ಹಾಕುತ್ತಿದ್ದಾರೆಂದು ಮೂಲಗಳು ತಿಳಿಸಿವೆ. ಇತ್ತೀಚೆಗಷ್ಟೇ ಗುತ್ತಿಗೆದಾರ ಚಲುವರಾಜು ಎಂಬವರು ತನ್ನ ಮೇಲೆ ಜೀವ ಬೆದರಿಕೆ ಹಾಕಿ, ಜಾತಿ ನಿಂದನೆ ಮಾಡಿರುವುದಾಗಿ ಆರೋಪಿಸಿದ್ದ ಪ್ರಕರಣದಲ್ಲಿ ಮುನಿರತ್ನ ಬಂಧನಕ್ಕೊಳಗಾಗಿದ್ದರು. ನಂತರ ಜಾಮೀನಿನ ಮೇಲೆ ಬಿಡುಗಡೆಗೊಂಡಿದ್ದ ಮುನಿರತ್ನ ವಿರುದ್ಧ ಮಹಿಳೆಯೊಬ್ಬರು ಅತ್ಯಾಚಾರ ಎಸಗಿರುವುದಾಗಿ ಆರೋಪಿಸಿ ದೂರು ನೀಡಿದ್ದರು. ಬಳಿಕ ಬಿಡುಗಡೆಗೊಂಡಿದ್ದ ಮುನಿರತ್ನ ಅವರನ್ನು ಪೊಲೀಸರು ಈ ಪ್ರಕರಣದಲ್ಲಿ ಬಂಧಿಸಿದ್ದರು.

## ಸಿದ್ದರಾಮಯ್ಯ ಸಿಎಂ ಸ್ಥಾನದಲ್ಲಿದ್ದರೆ ತನಿಖೆ ಸರಿಯಾಗಿ ನಡೆಯದು

• ಉದಯವಾಹಿನಿ, ಶಿವಮೊಗ್ಗ

ಸಿದ್ದರಾಮಯ್ಯ ರಾಜೀನಾಮೆ ಕೊಟ್ಟು ತನಿಖೆ ಎದುರಿಸಬೇಕು. ಸಿಎಂ ಸ್ಥಾನ ಪ್ರಭಾವ ಇರುವ ಸ್ಥಾನ. ಹಾಗಾಗಿ ಅವರು ರಾಜೀನಾಮೆ ಕೊಟ್ಟು ತನಿಖೆ ಎದುರಿಸಬೇಕು. ಹಗರಣ ನಡೆದಿರುವ ಬಗ್ಗೆ ಎಲ್ಲಾವೂ ಸ್ಪಷ್ಟವಾಗಿದೆ. ಸಿದ್ದರಾಮಯ್ಯ ಸಿಎಂ ಸ್ಥಾನದಲ್ಲಿದ್ದರೆ ತನಿಖೆ ಸರಿಯಾಗಿ ನಡೆಯುವುದಿಲ್ಲ. ಹಾಗಾಗಿ ಅವರು ಸಿಎಂ ಸ್ಥಾನಕ್ಕೆ ರಾಜೀನಾಮೆ ಕೊಟ್ಟು ತನಿಖೆ ಎದುರಿಸಬೇಕು ಎಂದು ಮೈಸೂರು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹೇಳಿದರು.ಪ್ರತಿ ಗ್ರಾಮ ಪಂಚಾಯತಿಯಲ್ಲಿ ಸಹಕಾರ ಸಂಘ ಸ್ಥಾಪಿಸಬೇಕು ಎನ್ನುವುದು ಪ್ರಧಾನಿ ಅವರ ಕನಸು. ಹಾಗಾಗಿ ಈಗಾಗಲೇ ಪ್ರಧಾನಿಯವರು ಘೋಷಣೆ ಮಾಡಿದ್ದಾರೆ ಎಂದರು. ವಿಐಎಸ್ ಎಲ್ ಕನ್ನಡಿಗರ ಹೆಮ್ಮೆಯ ಸಂಸ್ಥೆ ಅದು. ಅದರ ಉಳಿವಿಗಾಗಿ ನಮ್ಮ ಪ್ರಯತ್ನ ಇರುತ್ತದೆ ಎಂದು ಯದುವೀರ್ ಹೇಳಿದರು.

## ಹಣಕಾಸು ಸಂಸದೀಯ ಸ್ಥಾಯಿ ಸಮಿತಿ ಸದಸ್ಯರಾಗಿ ಸುಧಾಕರ್

• ಉದಯವಾಹಿನಿ, ಚಿಕ್ಕಬಳಾಪುರ

ಕೇಂದ್ರ ಸರ್ಕಾರದಿಂದ ಸಂಸದೀಯ ಸ್ಥಾಯಿ ಸಮಿತಿಗಳಿಗೆ ನೇಮಕಾತಿ ನಡೆದಿದ್ದು, ಈ ಪೈಕಿ ಸಂಸದ ಡಾ.ಕೆ.ಸುಧಾಕರ್ ಅವರನ್ನು ಹಣಕಾಸು ಸಂಸದೀಯ ಸ್ಥಾಯಿ ಸಮಿತಿಯ ಸದಸ್ಯರನ್ನಾಗಿ ನೇಮಕ ಮಾಡಲಾಗಿದೆ. ಡಾ.ಕೆ.ಸುಧಾಕರ್ ಅವರು ಮೊದಲ ಬಾರಿಗೆ ಸಂಸದರಾಗಿ ಕಾರ್ಯ ನಿರ್ವಹಿಸುತ್ತಿದ್ದು, ಈ ಅವಧಿಯಲ್ಲೇ ಅವರನ್ನು ಸ್ಥಾಯಿ ಸಮಿತಿಗೆ ನೇಮಿಸಿ ಮಹತ್ವದ ಹೊಣೆ ವಹಿಸಲಾಗಿದೆ. ಈ ಕುರಿತು ಸಂಸದ ಡಾ.ಕೆ.ಸುಧಾಕರ್ ಸಂತಸ ವ್ಯಕ್ತಪಡಿಸಿದ್ದಾರೆ. ಸಂಸತ್ತಿನ ಹಣಕಾಸು ಸ್ಥಾಯಿ ಸಮಿತಿಯ ಸದಸ್ಯನಾಗಿ ಆಯ್ಕೆಯಾಗಿರುವುದು ಅತ್ಯಂತ ಹೆಮೆ ಮತ್ತು ಸಂತಸದ ವಿಷಯ. ಈ ಅವಕಾಶ ನೀಡಿದ ಪ್ರಧಾನಿ ನರೇಂದ್ರ ಮೋದಿ, ಲೋಕಸಭಾಧ್ಯಕ್ಷರಾದ ಓಂ ಬಿರ್ಲಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಪಕ್ಷದ ಹಿರಿಯ ನಾಯಕರಾದ ಅಮಿತ್ ಶಾ ಹಾಗೂ ಬಿ.ಎಲ್.ಸಂತೋಷ್ ಅವರಿಗೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದು ಅವರು ಹೇಳಿದ್ದಾರೆ.

## ಕ್ಲೀನ್ ಚಿಟ್ ತಗೊಂಡು ಹೊರ ಬನ್ನಿ, ಸಿಎಂಗೆ ಈಶ್ವರಪ್ಪ ಸವಾಲ್!

• ಉದಯವಾಹಿನಿ, ಶಿವಮೊಗ್ಗ

'ಮೊದಲು ರಾಜೀನಾಮೆ ನೀಡುವ ಮೂಲಕ ತನಿಖೆ ಎದುರಿಸಿ, ನಂತರ ನೀವು ತಪ್ಪಿತಸ್ಥರಲ್ಲ ಎಂದು ಕ್ಲೀನ್ ಚಿಟ್ ತಗೊಂಡು ಬನ್ನಿ' ಎಂದು ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ ಅವರು ಸಿಎಂ ಸಿದ್ದರಾಮಯ್ಯ ಅವರಿಗೆ ಸವಾಲ್ ಹಾಕಿದರು.ಮುಡಾ ಪ್ರಕರಣ ಸಂಬಂಧ ಸಿಎಂ ಮತ್ತವರ ಕುಟುಂಬಸ್ಥರ ವಿರುದ್ಧ ಈಗಾಗಲೇ ಮೈಸೂರು ಲೋಕಾಯುಕ್ತ ಕಚೇರಿಯಲ್ಲಿ ಎಫ್‌ಐಆರ್ ದಾಖಲಾಗಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, 'ನಾನು ಸಚಿವನಾಗಿದ್ದಾಗ ನನ್ನ ವಿರುದ್ಧ ಕೇಳಿ ಬಂದಿದ್ದ ಆರೋಪ ಸಂಬಂಧ ರಾಜೀನಾಮೆ ನೀಡಿ ತನಿಖೆ ಎದುರಿಸಿದ್ದೆ. ಬಳಿಕ ನಾನು ತಪ್ಪಿತಸ್ಥನಲ್ಲ ಎಂದು ಹೊರಗೆ ಬಂದೆ. ನೀವು ಸಹ ಹಾಗೇ ಮಾಡಿ. ಸಿದ್ದರಾಮಯ್ಯನವರೇ, ನಿಮಗೊಂದು ಕಾನೂನು ನಮಗೊಂದು ಕಾನೂನು ಇಲ್ಲ' ಎಂದರು. ಇನ್ನು ನೀವು ತಪ್ಪಿತಸ್ಥರು ಎಂದು ಸ್ಪಷ್ಟವಾಗಿ ರಾಜ್ಯದ ಜನರಿಗೆ ಗೊತ್ತಾಗಿದೆ. ನಿಮ್ಮ ಶ್ರೀಮತಿ ಮುಗ್ಧೆಯಾಗಿದ್ದು, ಅವರು ಎಂದೂ ಹೊರಗೆ ಬಂದವರಲ್ಲ. ಆ ತಾಯಿಗೆ ಅನ್ಯಾಯ ಆಗಬಾರದು ಎಂದು ಈಶ್ವರಪ್ಪ ಇದೇ ವೇಳೆ ಒತ್ತಿ ಹೇಳಿದರು.

## ಚುನಾವಣಾ ಬಾಂಡ್: ಎಲ್ಲಾ ಪಕ್ಷಗಳು ದೇಣಿಗೆ ಪಡೆದಿವೆ

• ಉದಯವಾಹಿನಿ, ಬೆಂಗಳೂರು

ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಹಾಗೂ ಇತರರ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಆದೇಶಿಸಿರುವುದಕ್ಕೂ, ಸಿಎಂ ಸಿದ್ದರಾಮಯ್ಯ ಅವರ ಮುಡಾ ಹಗರಣಕ್ಕೂ ಅಜಗಜಾಂತರ ವ್ಯತ್ಯಾಸವಿದೆ ಎಂದು ವಿಪಕ್ಷ ನಾಯಕ ಆರ್.ಅಶೋಕ ಹೇಳಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಆರ್.ಅಶೋಕ್, ನಿರ್ಮಲಾ ಸೀತಾರಾಮನ್ ಹಾಗೂ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಆದೇಶಿಸಿರುವುದಕ್ಕೂ, ಸಿಎಂ ಸಿದ್ದರಾಮಯ್ಯ ಅವರ ಮುಡಾ ಹಗರಣಕ್ಕೂ ವ್ಯತ್ಯಾಸವಿದೆ. ಸಿದ್ದರಾಮಯ್ಯ ಸ್ವಜನ ಪಕ್ಷಪಾತ ಮಾಡಿದ್ದಾರೆ.



ಕೋಟ್ಯಂತರ ರೂಪಾಯಿ ಬೆಲೆಬಾಳುವ ಜಮೀನನ್ನು ಸಿಎಂ ಕಬಳಿಸಿದ್ದಾರೆ. ನಿರ್ಮಲಾ ಸೀತಾರಾಮನ್ ಅವರು ತಮ್ಮ ಸ್ವಂತಕ್ಕಾಗಿ ಏನೂ ಮಾಡಿಲ್ಲ. ಆ ಹಣ ಪಕ್ಷಕ್ಕೆ ಬಂದಿದೆ. ಕಾಂಗ್ರೆಸ್ ಪಕ್ಷಕ್ಕೂ 1,200 ಕೋಟಿ ರೂ.ಗೂ ಅಧಿಕ ಹಣ ಬಂದಿದೆ. ಆ ಹಣವನ್ನು ಮೊದಲು ವಾಪಸ್ ನೀಡಲಿ, ಆ ನಂತರ ಸಚಿವರ ರಾಜೀನಾಮೆ ಕೇಳಲಿ ಎಂದರು.

ಎಲ್ಲಾ ಪಕ್ಷಗಳು ದೇಣಿಗೆ ಸಂಗ್ರಹ ಮಾಡಿವೆ. ಹೀಗೆ ಹಣ ತೆಗೆದುಕೊಂಡವರ ಮೇಲೆ ಎಫ್‌ಐಆರ್ ದಾಖಲಿಸುವುದಾದರೆ, ಎಲ್ಲಾರ ಮೇಲೂ ದಾಖಲಿಸ ಬೇಕಾಗುತ್ತದೆ. ಸಿಎಂ ಸಿದ್ದರಾಮಯ್ಯ ಅವರೇಯಾರಿಂದಲೋ ಹೇಳಿಸಿ ದೂರು ದಾಖಲಿಸಿದ್ದಾರೆ ಎಂಬುದು ಇದರಿಂದ ಸ್ಪಷ್ಟವಾಗುತ್ತದೆ. ಹೀಗೆ ದೂರು ದಾಖಲಿಸಿರುವುದು ರಾಜಕೀಯ ಪ್ರೇರಿತ ಎಂದು ವಾಗ್ದಾಳಿ ನಡೆಸಿದರು.

## ಭೂಮಿ ನೀಡಲು ರಕ್ಷಣಾ ಇಲಾಖೆ ಒಪ್ಪಿಗೆ

• ಉದಯವಾಹಿನಿ, ಬೆಂಗಳೂರು

ರಸ್ತೆ ನಿರ್ಮಾಣಕ್ಕಾಗಿ ಬರೋಬ್ಬರಿ 22 ಎಕರೆ ಜಾಗವನ್ನು ಬಿಬಿಎಂಪಿಗೆ ಬಿಟ್ಟುಕೊಡಲು ರಕ್ಷಣಾ ಇಲಾಖೆ ತೀರ್ಮಾನಿಸಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ತಿಳಿಸಿದರು.

ಬೆಂಗಳೂರಿನ ಎಎಸ್‌ಸಿ ಸೆಂಟರ್ ಮತ್ತು ಕಾಲೇಜಿನ ಕಮಾಂಡೆಂಟ್ ಲೆಫ್ಟಿನೆಂಟ್ ಜನರಲ್ ಬಸಂತ್ ಕುಮಾರ್ ರೆಪ್ಸ್ವಾಲ್ ಅವರೊಂದಿಗೆ ಇಂದು ಡಿಕೆಶಿ ಅವರು ವಿಧಾನಸೌಧದಲ್ಲಿ ಸಮಾಲೋಚನೆ ನಡೆಸಿದರು.

ಬಳಿಕ ಮಾತನಾಡಿದ ಅವರು, ಲೋವರ್ ಆಗರಂನಿಂದ ಸರ್ಜಾಪುರವರೆಗೆ ರಸ್ತೆ ಅಗಲೀಕರಣಕ್ಕಾಗಿ 12.34 ಎಕರೆ ಜಮೀನನ್ನು ರಕ್ಷಣಾ ಇಲಾಖೆ ಬಿಬಿಎಂಪಿಗೆ ನೀಡಿದೆ. ಇನ್ನು 10.77 ಎಕರೆ ನೀಡಲು ತಾತ್ವಿಕ ಒಪ್ಪಿಗೆಯೂ ನೀಡಿದೆ ಎಂದರು.

ಎಂಜಿ ರಸ್ತೆಯಿಂದ ಬೆಳ್ಳಂದೂರು ಭಾಗಕ್ಕೆ ತೆರಳಲು ಸುಮಾರು 1 ಗಂಟೆ ಸಮಯ ಬೇಕಾಗಿತ್ತು. ಈ ರಸ್ತೆ ನಿರ್ಮಾಣದ ನಂತರ 5-8 ನಿಮಿಷಗಳ ಅಂತರದಲ್ಲಿ ಕ್ರಮಿಸಬಹುದು ಎಂದು ವಿವರಿಸಿದರು.




ರಸ್ತೆ ನಿರ್ಮಾಣದ ಮೊದಲ ಹಂತದಲ್ಲಿ ಒಟ್ಟು 3.50 ಕಿ.ಮೀ ಕಾಮಗಾರಿಗಾಗಿ 35 ಕೋಟಿ ರೂಪಾಯಿ ವೆಚ್ಚದ ಟೆಂಡರ್ ಅನ್ನು ಕರೆಯಲಾಗಿದೆ. ಟ್ರಿನಿಟಿ ಸರ್ಕಲ್, ಈಜಿಪುರ ರಸ್ತೆ ನಿರ್ಮಾಣಕ್ಕೆ ಇನ್ನು 10.77 ಎಕರೆ ಜಾಗ ರಕ್ಷಣಾ ಇಲಾಖೆ ನೀಡಬೇಕಿದೆ. ಇದು ಕೈಗೂಡಿದಲ್ಲಿ ಐಟಿ ಹಬ್‌ಗೆ ತೆರಳುವವರಿಗೆ ಸಂಚಾರ ದಟ್ಟಣೆ ಸಮಸ್ಯೆ ನಿವಾರಣೆಯಾಗಲಿದೆ ಎಂದರು.


## ಎಫ್‌ಐಆರ್‌ನಲ್ಲಿ ನಿರ್ಮಲಾ, ನಳಿನ್, ವಿಜಯೇಂದ್ರ ಹೆಸರು

### ಪ್ರಕರಣಕ್ಕೆ ಸಂಬಂಧಪಟ್ಟಂತೆ ಎಫ್‌ಐಆರ್ ದಾಖಲಿಸಲು ಬೆಂಗಳೂರಿನ ಜನಪ್ರತಿನಿಧಿ ನ್ಯಾಯಾಲಯ ಆದೇಶ

• ಉದಯವಾಹಿನಿ, ಬೆಂಗಳೂರು

ಚುನಾವಣಾ ಬಾಂಡ್ ಮೂಲಕ ಹಣ ಸುಲಿಗೆ ಮಾಡಿದ ಆರೋಪದಲ್ಲಿ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಗೆ ಸಂಕಷ್ಟ ಎದುರಾಗಿದೆ. ಪ್ರಕರಣಕ್ಕೆ ಸಂಬಂಧಪಟ್ಟಂತೆ ಎಫ್‌ಐಆರ್ ದಾಖಲಿಸಲು ಬೆಂಗಳೂರಿನ ಜನಪ್ರತಿನಿಧಿ ನ್ಯಾಯಾಲಯ ಆದೇಶ ನೀಡಿದೆ. ನ್ಯಾಯಾಲಯದ ಆದೇಶದ ಬೆನ್ನಲ್ಲೇ ತಿಲಕ್ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಎಫ್‌ಐಆರ್‌ನಲ್ಲಿ ನಿರ್ಮಲಾ ಸೀತಾರಾಮನ್ ಜೊತೆಗೆ ನಳಿನ್ ಕುಮಾರ್ ಮತ್ತು ಬಿವೈ ವಿಜಯೇಂದ್ರ ಹೆಸರು ಕೂಡ ಇದೆ.

ಪ್ರಕರಣದಲ್ಲಿ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್‌ರನ್ನು ಎ1 ಆರೋಪಿಯಾಗಿ ಹೆಸರಿಸಲಾಗಿದೆ. ಇಡಿ ಅಧಿಕಾರಿಗಳು ಎ2, ರಾಷ್ಟ್ರೀಯ ಜನತಾ ಪಕ್ಷದ ಕಚೇರಿ ಎ3, ನಳಿನ್ ಕುಮಾರ್ ಕಟೀಲ್ ಎ4, ಬಿವೈ ವಿಜಯೇಂದ್ರ ಎ5 ಎಂದು ದಾಖಲಿಸಲಾಗಿದೆ.




**ಚುನಾವಣಾ ಬಾಂಡ್ ಪ್ರಕರಣ**

ಜನಾಧಿಕಾರ ಸಂಘರ್ಷ ಪರಿಷತ್ (ಜೆಎಸ್‌ಪಿ) ಸಹ ಅಧ್ಯಕ್ಷ ಆದರ್ಶ ಅಯ್ಯರ್ ನೀಡಿದ್ದ ಖಾಸಗಿ ದೂರನ್ನು ದಾಖಲಿಸಿ ವಿಚಾರಣೆ ನಡೆಸಿದ ನಗರದ 42ನೇ ಎಸಿಎಂಎಂ ನ್ಯಾಯಾಲಯ ಠಾಣೆಗೆ ದೂರಿನ ಪ್ರತಿ ಮತ್ತು ದಾಖಲೆಯನ್ನು ಕಳಿಸುವಂತೆ ಸೂಚನೆ ನೀಡಿ ಆದೇಶ ಹೊರಡಿಸಿತ್ತು. ಕೋರ್ಟ್ ಆದೇಶ ತಲುಪುತ್ತಿದ್ದಂತೆ ತಿಲಕ್ ನಗರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ.

ಅರ್ಜಿದಾರ ಆದರ್ಶ ಅಯ್ಯರ್ ಪರವಾಗಿ ಹಿರಿಯ ವಕೀಲ ಬಾಲನ್ ವಾದ ಮಂಡಿಸಿದ್ದರು. ಪ್ರಕರಣದ ವಿಚಾರಣೆಯನ್ನು ಅಕ್ಟೋಬರ್ 10 ಕ್ಕೆ ಮುಂದೂಡಲಾಗಿದೆ. ಐಪಿಸಿ 120 ಬಿ, ಐಪಿಸಿ 34, ಐಪಿಸಿ 384,120 ಬಿ ಸೆಕ್ಷನ್‌ಗಳ ಆಧಾರದಲ್ಲಿ ಎಫ್‌ಐಆರ್ ದಾಖಲು ಮಾಡಲಾಗಿದೆ.

**ಸುಪ್ರೀಂಕೋರ್ಟ್ ಚುನಾವಣಾ ಬಾಂಡ್‌ಗಳನ್ನು ರದ್ದು ಮಾಡಿ ಆದೇಶ**

**ದೇಣಿಗೆ ನೀಡಿದವರ ಹೆಸರು ಬಹಿರಂಗಪಡಿಸಲು ಬ್ಯಾಂಕ್‌ಗಳು ನಿರಾಕರಿಸಿದ್ದವು. ಆದರೆ 2024ರ ಫೆಬ್ರವರಿ 15ರಂದು ಸುಪ್ರೀಂಕೋರ್ಟ್ ಚುನಾವಣಾ ಬಾಂಡ್‌ಗಳನ್ನು ರದ್ದು ಮಾಡಿ ಆದೇಶ ನೀಡಿತ್ತು, ದೇಣಿಗೆ ನೀಡಿದವರ ಪಟ್ಟಿಯನ್ನು ಬಿಡುಗಡೆ ಮಾಡಲು ಸೂಚನೆ ಕೊಟ್ಟಿತ್ತು. ಎಸ್‌ಬಿಐ ನೀಡಿದ ಅಂಕಿಅಂಶಗಳ ಪ್ರಕಾರ 2018 ರಿಂದ 2022ರವರೆಗೆ 9,208 ಚುನಾವಣಾ ಬಾಂಡ್‌ಗಳನ್ನು ಖರೀದಿ ಮಾಡಲಾಗಿದ್ದು, ಚುನಾವಣಾ ಮೂಲಕ ಬಿಜೆಪಿ 6,986.5 ಕೋಟಿ ರೂಪಾಯಿ ದೇಣಿಗೆ ಪಡೆದಿರುವದು ಬೆಳಕಿಗೆ ಬಂದಿತ್ತು.**

ರಾಜಕೀಯ ಪಕ್ಷಗಳು ಕಪ್ಪು ಹಣ ಪಡೆಯುವುದನ್ನು ತಪ್ಪಿಸಲು ಮತ್ತು ರಾಜಕೀಯ ಪಕ್ಷಗಳಿಗೆ ಬರುವ ದೇಣಿಗೆಗಳನ್ನು ಪಡೆಯಲು 2018ರ ಬಜೆಟ್‌ನಲ್ಲಿ ಚುನಾವಣಾ ಬಾಂಡ್‌ಗಳನ್ನು ಕೇಂದ್ರ ಸರ್ಕಾರ ಪರಿಚಯಿಸಿತ್ತು. ಬ್ಯಾಂಕ್ ಮೂಲಕ ಹಣ ಪಾವತಿ ಮಾಡಿ ಬಾಂಡ್‌ಗಳನ್ನು ಖರೀದಿ ಮಾಡುವ ಮೂಲಕ ಪಕ್ಷಗಳಿಗೆ ಹಣ ನೀಡಲು ಅವಕಾಶ ನೀಡಿದ್ದರಿಂದ, ಇದು ಪಾರದರ್ಶಕ ಪ್ರಕ್ರಿಯೆ ಎಂದು ಹೇಳಲಾಗಿತ್ತು.

## ಹಿಂದೂ ದೇವಾಲಯಗಳಿಗೆ ಭೇಟಿ ಸಾಬ್ರರ ಅಭಿವೃದ್ಧಿ ಮಾಡೋದು

• ಉದಯವಾಹಿನಿ, ಬೆಂಗಳೂರು

ಅಧಿಕಾರ ಹಿಡಿಯಲು ಹಿಂದೂ ದೇವಾಲಯಗಳಿಗೆ ಭೇಟಿ ಕೊಡೋದು, ಅಧಿಕಾರ ಸಿಕ್ಕಾಗ ಸಾಬ್ರರ ಅಭಿವೃದ್ಧಿ ಮಾಡೋದು ಎಂದು ಸಿದ್ದರಾಮಯ್ಯ ವಿರುದ್ಧ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಾಗ್ದಾಳಿ ನಡೆಸಿದ್ದಾರೆ. ಮುಂದಿನ ಸಲ ಗಣೇಶ ಹಬ್ಬಕ್ಕೆ ಗಣೇಶ ಕೂರಿಸಲು ಪರ್ಮಿಷನ್ ಬೇಡ. ಯಾಕೆಂದರೆ ಮುಂದಿನ ಸಲ ನಾವೇ ಅಧಿಕಾರದಲ್ಲಿರ್ತೇವೆ. ನಾವು ಅಧಿಕಾರಕ್ಕೆ ಬಂದ ಮೇಲೆ ಗಣೇಶ ಹಬ್ಬಕ್ಕೆ ಫುಲ್ ಸೆಕ್ಯುರಿಟಿ ಕೊಡ್ತೇವೆ. ಅವರ ಕೆಲಸ ಮಸೀದಿಯಿಂದ ಕಲ್ಲು ತೂರಾಟವಾಗದಂತೆ ನೋಡಿಕೊಳ್ಳೋದು ಅಷ್ಟೇ ಎಂದು ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದ್ದಾರೆ.

ನಾನೇನಾದರೂ ಮುಖ್ಯಮಂತ್ರಿಯಾದರೆ ಪೊಲೀಸರಿಗೆ ಎಕೆ47 ಗನ್ ಕೊಡ್ತೇನೆ. ಯಾರದ್ರೂ ಪಾಕಿಸ್ತಾನ್ ಜಿಂದಾಬಾದ್ ಎನ್ನಬೇಕು. ಅಲ್ಲಿಗೇ ಅವರ ಕತೆ ಮುಗಿಯುತ್ತದೆ. ಪಾಕಿಸ್ತಾನ್ ಜಿಂದಾಬಾದ್ ಎನ್ನುವವರು ಅಲ್ಲಿಗೇ ಹೋಗಲಿ ಎಂದು ಯತ್ನಾಳ್ ಖಡಕ್ ಆಗಿ ಹೇಳಿದ್ದಾರೆ.



**ಈ ದಿನದ ದರ** ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,740/Gram24ct ₹7,095/Gram22ct | ಬೆಳ್ಳಿ: ₹95.00/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ**
**ರಾಮೋಹಳ್ಳಿ**

## ಕುತಸ್ತ್ವಾ ಕಶ್ಮಲಮಿದಂ


ನಿನ್ನೆ ಹೆಚ್ ಸದಾಶಿವ ಅವರ ಜನತಾ ಸೇನಾ ದಳ ಬೆಂಗಳೂರಿನ ನಯನದಲ್ಲಿ ಏರ್ಪಡಿಸಿದ ಸ್ವಾತಂತ್ರ್ಯಯೋಧರ ಕಾರ್ಗಿಲ್ ಯೋಧರ ಸಂಸ್ಕರಣೆ ಹಾಗೂ ಭಾರತ ಮಹಾನ್ ರತ್ನ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿದ್ದೆ. ಮಾಜಿ ಗೃಹ ಸಚಿವ ಪಿಜಿಆರ್ ಸಿಂಧ್ಯ ಅವರು ಸಿದ್ಧಾರೂಢರ ಏಕತೆಯ ಸಂದೇಶ ಅರುಹಿದರು. ನಿವೃತ್ತ ಯೋಧ ಡಾ. ಎನ್. ನಾರಾಯಣ ಅವರು ಕಾರ್ಗಿಲ್ ಯುದ್ಧದಲ್ಲಿ ನಮ್ಮ ಭಾರತೀಯ ಯೋಧರು ಹೋರಾಡಿದ, ಸತ್ತ ಬಳಿಕವೂ ಕನಸಿನಲ್ಲಿ ಬಂದು ಮಾರ್ಗದರ್ಶನ ಮಾಡಿದ ಯಶೋಗಾಥೆಗಳನ್ನು ಕಣ್ಣಿಗೆ ಕಟ್ಟುವಂತೆ ವಿವರಿಸಿದರು. ಹುಲಿಬಾಯಿಯಲ್ಲಿ ಕೈ ಇಟ್ಟು ಆಡಿದ ವೀರ ಭರತನ ವಂಶಸ್ಥರು ನಾವು ಭಾರತೀಯರು. ನಾವು ಅಹಿಂಸಾವಾದಿಗಳಾದರೂ ಕ್ಷಾತ್ರಧರ್ಮ ಮರೆದವರು. ರಣರಂಗದಲ್ಲಿ ಶಸ್ತ್ರ ತ್ಯಜಿಸಿದ ಅರ್ಜುನನಿಗೆ ಕೃಷ್ಣ ಗುಡುಗಿದ ಈ ಹೊಲಸು ಎಲ್ಲಿಂದ ನಿನಗಂಟಿತು ಈ ದೌರ್ಬಲ್ಯ ತ್ಯಜಿಸಿ ಎದ್ದೇಳು! ಸ್ವಾತಂತ್ರ್ಯಕ್ಕಾಗಿ ತಮ್ಮ ಬಲಿದಾನಗೈದವರು ಅಸಂಖ್ಯರು. ತಿಲಕರ ಗಾಂಧೀಜಿಯ ಜೊತೆ ಸ್ವಾತಂತ್ರ್ಯ ಹೋರಾಟದಲ್ಲಿ ಪಾಲ್ಗೊಂಡಿದ್ದ ಸಿದ್ಧಾರೂಢರು ದೇಶವಿದ್ದರೆ ಬದುಕು ಧರ್ಮ ಮತ್ತೊಂದು, ಸ್ವಾತಂತ್ರ್ಯಕ್ಕಾಗಿ ಹೋರಾಡಿ ಎಂದರು. ಪವಿತ್ರ ಸ್ವಾತಂತ್ರ್ಯವನ್ನು ನಾವು ಮಲಿನ ಮಾಡಿದ್ದೇವೆ. ಸ್ವಾತಂತ್ರ್ಯವೆಂದರೆ ಸ್ವೇಚ್ಛಾಚಾರವಲ್ಲ. ಇನ್ನೊಬ್ಬರು ಬೊಟ್ಟು ಮಾಡಿ ತೋರದಂಥ ಘನಗಂಭೀರ ನಡೆ ಚಾರಿತ್ರ್ಯ ಸ್ವಾಭಿಮಾನದ ಬದುಕು. ದೇಶಕ್ಕಾಗಿ ಹೋರಾಡಿ ಮಡಿದ, ನಮ್ಮೊಂದಿಗಿರುವ ಯೋಧರಿಗೆ ಯೋಧ ಕುಟುಂಬದವರಿಗೆ ಗೌರವದ ವಂದನೆಗಳು. ಸಾವಿರದ ಇನ್ನೂರೈವತ್ತು ಪುಸ್ತಕ ಬರೆದ ಬೇ. ಗೂ. ರಮೇಶ್ ಇತರರಿದ್ದರು.

## ಕಾರ್ಯಕ್ರಮಕ್ಕೆ ಪಕ್ಷಾತೀತವಾಗಿ ಜನಪ್ರತಿನಿಧಿಗಳ ಆಹ್ವಾನ

### ಅ.2ರಂದು ರಾಜ್ಯಾದ್ಯಂತ ಗಾಂಧಿ ನಡಿಗೆ, ಸ್ವಚ್ಛತೆ ಬಗ್ಗೆ ಪ್ರತಿಜ್ಞಾ ಸ್ವೀಕಾರ ಕಾರ್ಯಕ್ರಮ: ಡಿಸಿಎಂ ಡಿ.ಕೆ. ಶಿವಕುಮಾರ್

• **ಉದಯವಾಹಿನಿ, ಬೆಂಗಳೂರು**

ಮಹಾತ್ಮ ಗಾಂಧೀಜಿ ಅವರು ಬೆಳಗಾವಿಯಲ್ಲಿ ಸ್ವಾತಂತ್ರ್ಯ ಸಂಗ್ರಾಮದ ನೇತೃತ್ವ ವಹಿಸಿಕೊಂಡು 100 ವರ್ಷವಾಗಿರುವ ಹಿನ್ನೆಲೆಯಲ್ಲಿ ಒಂದು ವರ್ಷಗಳ ಕಾಲ ವಿಭಿನ್ನ ಕಾರ್ಯಕ್ರಮಗಳನ್ನು ನಡೆಸಲಾಗುವುದು. ಅಕ್ಟೋಬರ್ 2 ರಂದು ರಾಜ್ಯಾದ್ಯಂತ 'ಗಾಂಧಿ ನಡಿಗೆ', ಸ್ವಚ್ಛತೆಯ ಪ್ರತಿಜ್ಞಾ ಸ್ವೀಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ತಿಳಿಸಿದರು.



ವಿಧಾನ ನಸೌಧದಲ್ಲಿ ಮಾಧ್ಯಮಗೋಷ್ಠಿ ನಡೆಸಿದ ಶಿವಕುಮಾರ್ ಅವರು ಶನಿವಾರ ಈ ಮಾಹಿತಿ ನೀಡಿದರು. ಕಾರ್ಯಕ್ರಮದ ಮೊದಲ ಭಾಗವಾಗಿ ಅಕ್ಟೋಬರ್ 2 ರ ಗಾಂಧಿ ಜಯಂತಿ ಯಂದು 1 ಕಿ.ಮೀ. ಗಾಂಧಿ ನಡಿಗೆ ಮತ್ತು ಸ್ವಚ್ಛತಾ ಪ್ರತಿಜ್ಞಾ ಸ್ವೀಕಾರ ಅಭಿಯಾನ ಹಮ್ಮಿಕೊಳ್ಳಲಾಗಿದೆ. ರಾಜ್ಯಾದ್ಯಂತ ಜಿಲ್ಲಾ, ತಾಲ್ಲೂಕು ಕೇಂದ್ರ, ಪಾಲಿಕೆ ಮಟ್ಟದಲ್ಲಿ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ.

ಬೆಂಗಳೂರಿನಲ್ಲಿಯೂ ಬರುವ ಬುಧವಾರ ಬೆಳಗ್ಗೆ 9 ಗಂಟೆಗೆ ಗಾಂಧಿ ಭವನದಿಂದ ವಿಧಾನ ಸೌಧದ ಗಾಂಧಿ ಪ್ರತಿಮೆವರೆಗೂ ನಡಿಗೆ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮಕ್ಕೆ ಪಕ್ಷಾತೀತವಾಗಿ ಜನಪ್ರತಿನಿಧಿಗಳನ್ನು ಆಹ್ವಾನಿಸಲಾಗುವುದು ಎಂದು ತಿಳಿಸಿದರು. ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಇಬ್ಬರ ಜನ್ಮದಿನವೂ ಒಂದೇ ದಿನ ಆಗಿರುವ ಕಾರಣ ಇಬ್ಬರ ಪ್ರತಿಮೆಗೂ ಮಾಲಾರ್ಪಣೆ ಮಾಡಲಾಗುವುದು. ನಂತರ ನಡಿಗೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ಹಾಗೂ ಬೆಂಗಳೂರಿನ 500 ಶಾಲಾ, ಕಾಲೇಜು ಮಕ್ಕಳಿಗೆ ಜೂಮ್ ಮೂಲಕ ಪ್ರತಿಜ್ಞಾ ವಿಧಿ ಬೋಧನೆ ಮಾಡಲಾಗುವುದು. ಇದು ಸರ್ಕಾರದ ಕಾರ್ಯಕ್ರಮ, ಗಾಂಧಿ ಅವರ ಆದರ್ಶವನ್ನು ಯುವ ಪೀಳಿಗೆಗೆ ತಲುಪಿಸಲು ಈ ಕಾರ್ಯಕ್ರಮ ರೂಪಿಸಿದೆ ಎಂದರು.

ಗಾಂಧಿ ಜಯಂತಿಯನ್ನು ವಿಶಿಷ್ಟವಾಗಿ ಆಚರಣೆ ಮಾಡುತ್ತಿದ್ದು, ಇಡೀ ವರ್ಷ ಗಾಂಧೀಜಿ ಅವರ ಆಚಾರ ವಿಚಾರವನ್ನು ಯುವ ಪೀಳಿಗೆಗೆ ತಿಳಿಸಲು ಸರ್ಕಾರ, ಕಾಂಗ್ರೆಸ್ ಪಕ್ಷದ ವತಿಯಿಂದ ಪ್ರತ್ಯೇಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

> **ಜಿಲ್ಲಾ ಕೇಂದ್ರದ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು, ತಾಲೂಕು ಮಟ್ಟದಲ್ಲಿ ಸ್ಥಳೀಯ ಶಾಸಕರು ಭಾಗವಹಿಸಲಿದ್ದಾರೆ. ಈ ನಡಿಗೆ ವೇಳೆ ಬಿಳಿ ವಸ್ತ್ರ ಗಾಂಧಿ ಟೋಪಿ ಧರಿಸಿ ಹೆಜ್ಜೆ ಹಾಕುವಂತೆ ಮನವಿ ಮಾಡಲಾಗುವುದು**
> -**ಡಿ.ಕೆ. ಶಿವಕುಮಾರ್**, ಡಿಸಿಎಂ

**ಗಾಂಧಿ ಟೋಪಿ ಧರಿಸಿ ಹೆಜ್ಜೆ**

**ಆನ್ ಲೈನ್‌ನಲ್ಲೇ ಪ್ರಮಾಣಪತ್ರ**

**ಇನ್ನು ರಾಜ್ಯದಲ್ಲಿ ಸಾರ್ವಜನಿಕರು ಪ್ರತಿಜ್ಞಾ ವಿಧಿ ತೆಗೆದುಕೊಳ್ಳಲು ಒಂದು ಆಪ್ ಸಿದ್ಧಪಡಿಸಲಾಗಿದ್ದು, ಈಗಾಗಲೇ 35 ಸಾವಿರ ಮಂದಿ ಈ ಆಪ್ ನಲ್ಲಿ ನೋಂದಣಿ ಮಾಡಿಕೊಂಡಿದ್ದಾರೆ. ಪ್ರತಿಜ್ಞಾ ವಿಧಿ ಪಡೆದವರಿಗೆ ಆನ್ ಲೈನ್‌ನಲ್ಲೇ ಪ್ರಮಾಣಪತ್ರ ನೀಡಲಾಗುವುದು. ಇದು ಮೊದಲ ಹಂತದ ಕಾರ್ಯಕ್ರಮವಾಗಿದ್ದು, ಇಡೀ ವರ್ಷ ಬೇರೆ ಬೇರೆ ಕಾರ್ಯಕ್ರಮ ಮಾಡಲಾಗುವುದು.**

## ಪಂಚತಾರಾ ಹೊಟೇಲ್ ತಾಜ್ ವೆಸ್ಟ್ ಎಂಡ್‌ಗೆ ಬಾಂಬ್ ಬೆದರಿಕೆ: ತನಿಖೆ ತೀವ್ರ

• **ಉದಯವಾಹಿನಿ, ಬೆಂಗಳೂರು**

ನಗರದ ಪ್ರಮುಖ ಹೋಟೆಲ್ ತಾಜ್ ವೆಸ್ಟ್ ಎಂಡ್‌ಗೆ ಇ ಮೇಲ್ ಮೂಲಕ ಶನಿವಾರ ಬಾಂಬ್ ಬೆದರಿಕೆ ಒಡ್ಡಲಾಗಿದೆ. ಅಪರಿಚಿತ ದುಷ್ಕರ್ಮಿಗಳು ಸಂದೇಶ ಕಳುಹಿಸಿದ್ದಾರೆ ಎಂದು ಎಎನ್‌ಐ ವರದಿ ಮಾಡಿದೆ. ನಗರದ ಹಲವು ಖಾಸಗಿ ಶಾಲೆಗಳಿಗೆ ಈ ಹಿಂದೆ ಬಾಂಬ್ ಬೆದರಿಕೆ ಕರೆಗಳು ಬಂದಿದ್ದವು. ಇದೀಗ ನಗರದ ಪ್ರತಿಷ್ಠಿತ ತಾಜ್ ವೆಸ್ಟ್ ಎಂಡ್ ಹೋಟೇಲ್ ಗೆ ಬಾಂಬ್ ಬೆದರಿಕೆ ಇ-ಮೇಲ್ ಬಂದಿದೆ. ಹೊಟೇಲ್ ನಲ್ಲಿ ಬಾಂಬ್ ಇಟ್ಟು ಸ್ಫೋಟಿಸುವುದಾಗಿ ಕಿಡಿಗೇಡಿಗಳು ಇ-ಮೇಲ್ ಮಾಡಿದ್ದಾರೆ. ಇದು ಗಮನಕ್ಕೆ ಬಂದ ಕೂಡಲೇ ಹೋಟೆಲ್ ಸಿಬ್ಬಂದಿ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಕೂಡಲೇ ಸ್ಥಳಕ್ಕೆ ಪೊಲೀಸರು, ಬಾಂಬ್ ಸ್ಕ್ವಾಡ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ನಂತರ ಅದೊಂದು ಹುಸಿ ಬಾಂಬ್ ಬೆದರಿಕೆ ಎಂದು ದೃಢವಾಗಿದೆ. ಹೈಗ್ರೌಂಡ್ಸ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

ನಗರದ ಖ್ಯಾತ ಪಂಚತಾರಾ ಹೋಟೇಲ್‌ಗಳಲ್ಲಿ ತಾಜ್ ವೆಸ್ಟ್ ಎಂಡ್ ಪ್ರಮುಖವಾಗಿದ್ದು, ಇಲ್ಲಿ ರಾಜಕಾರಣಿಗಳು, ಕ್ರಿಕೆಟರ್‌ಗಳು, ಉದ್ಯಮಿಗಳು ಆಗಾಗ ವಾಸ್ತವ್ಯ ಹೂಡುತ್ತಾರೆ. ಘಟನೆ ಬಗ್ಗೆ ಮತ್ತಷ್ಟು ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

## ಅರೆಸ್ಟ್ ಆದರೂ ಇದೇ ಉದ್ಧಟತನ ತೋರುತ್ತೀರಾ: ಬಿಜೆಪಿ ಪ್ರಶ್ನೆ

• **ಉದಯವಾಹಿನಿ, ಬೆಂಗಳೂರು**

A1 ಆರೋಪಿ ಸಿದ್ದರಾಮಯ್ಯ ವಿರುದ್ಧ ಮೈಸೂರು ಲೋಕಾಯುಕ್ತ ಪೊಲೀಸ್ ಠಾಣೆಯಲ್ಲಿ ಕೊನೆಗೂ ಎಫ್‌ಐಆರ್ ದಾಖಲಾಗಿದೆ. ಆದರೂ ಸಿಎಂ ಸಿದ್ದರಾಮಯ್ಯ ತಾನು ರಾಜೀನಾಮೆ ಕೊಡುವುದಿಲ್ಲ ಎಂದು ಮತ್ತೆ ಮತ್ತೆ ಪುನರುಚ್ಚರಿಸುತ್ತಿದ್ದಾರೆ. ಈ ಬಗ್ಗೆ ರಾಜ್ಯ ಬಿಜೆಪಿ ಕಿಡಿಕಾರಿದೆ. ಮುಡಾ ಹಗರಣದಲ್ಲಿ A2 ಆಗಿ A1 ಆರೋಪಿಯ ಪತ್ನಿ ಬಿ.ಎಂ.ಪಾರ್ವತಿ, A3 ಆಗಿ A1 ಆರೋಪಿಯ ಭಾಮೈದ ಮಲ್ಲಿಕಾರ್ಜುನ ಸ್ವಾಮಿ ಹಾಗೂ A4 ಜಮೀನು ಮಾರಾಟ ಮಾಡಿದ ದೇವರಾಜು ವಿರುದ್ಧ ಪ್ರಕರಣ ದಾಖಲಾಗಿದೆ. ಎಫ್‌ಐಆರ್ ರಿಜಿಸ್ಟರ್ ಆದಮೇಲೂ ರಾಜೀನಾಮೆ ನೀಡದೆ ಮೊಂಡುವಾದ ಮಾಡುತ್ತಿರುವ A1 ಆರೋಪಿ ಸಿದ್ದರಾಮಯ್ಯ ಅವರೇ, ಬಂಧನಕ್ಕೆ ಒಳಗಾದರೂ ಇದೇ ಉದ್ದಟತನ ತೋರುತ್ತೀರಾ? ಎಂದು ಪ್ರಶ್ನಿಸಿದೆ.

## A1 ಆರೋಪಿ ಸಿದ್ದರಾಮಯ್ಯರೇ ರಾಜೀನಾಮೆ ಕೊಟ್ಟು, ನುಡಿದಂತೆ ನಡೆಯಿರಿ: ಜೆಡಿಎಸ್

• **ಉದಯವಾಹಿನಿ, ಬೆಂಗಳೂರು**

A1 ಆರೋಪಿ ಸಿದ್ದರಾಮಯ್ಯರೇ ರಾಜೀನಾಮೆ ಕೊಟ್ಟು, ನುಡಿದಂತೆ ನಡೆಯಿರಿ ಎಂದು ಜೆಡಿಎಸ್ ಆಗ್ರಹಿಸಿದೆ.ಟ್ವೀಟ್ ಮಾಡಿರುವ ಜೆಡಿಎಸ್ ಸಿದ್ದರಾಮಯ್ಯ ಅವರೇ ನಿಮಗೆಷ್ಟು ನಾಲಿಗೆ.. ವಿರೋಧ ಪಕ್ಷದಲ್ಲಿದ್ದಾಗ ಒಂದು ನಾಲಿಗೆ ಆಡಳಿತ ನಡೆಸುವಾಗ ಒಂದು ನಾಲಿಗೆಯೇ ರಾಷ್ಟ್ರಪತಿಗಳು ಸಂವಿಧಾನದ ಮುಖ್ಯಸ್ಥರು, ಅವರ ಪ್ರತಿನಿಧಿಗಳಾಗಿ ರಾಜ್ಯಾಪಾಲರು ಪ್ರತಿಯೊಂದು ರಾಜ್ಯದಲ್ಲಿ ಕೆಲಸ ಮಾಡುತ್ತಾರೆ. ಒಂದು ಸರ್ಕಾರ ಸಂವಿಧಾನದ ಚೌಕಟ್ಟಿನಲ್ಲಿ ಕೆಲಸ ಮಾಡುತ್ತಿದೆಯಾ ಎಂಬ ಉಸ್ತುವಾರಿ ನೋಡಿಕೊಳ್ಳುತ್ತಿರುತ್ತಾರೆ.

ಸರ್ಕಾರ ತಪ್ಪು ಮಾಡಿದರೆ ಎಚ್ಚರಿಕೆ ಕೊಡುವ ಕೆಲಸ ಮಾಡುತ್ತಾರೆ. ಅವರಿಗೆ ಬುದ್ಧಿ ಹೇಳುವ ಹಾಗೂ ಕ್ರಮ ಕೈಗೊಳ್ಳುವ ಅಧಿಕಾರ ರಾಜ್ಯಪಾಲರಿಗೆ ಇದೆ. ಗವರ್ನರ್ ಅಧಿಕಾರ ಚಲಾಯಿಸಿದಾಗ ಅದು ರಾಜಕೀಯ ಪ್ರೇರಿತ, ದುರುದ್ದೇಶದಿಂದ ಮಾಡಿದ್ದಾರೆ, ಇದು ಪೂರ್ವನಿಯೋಜಿತ ಎಂದರೆ ಜನರು ನಂಬುವುದಿಲ್ಲ. ಎಂದು ವಿರೋಧ ಪಕ್ಷದಲ್ಲಿದ್ದಾಗ (2011ರಲ್ಲಿ) ನೀವೇ ಆಡಿದ್ದ ಮಾತು. ಈಗ ಏನು ಹೇಳುತ್ತೀರಿ. ಮುಡಾ ಪ್ರಕರಣದಲ್ಲಿ A1 ಆರೋಪಿಯಾಗಿರುವ ನೀವು ರಾಜೀನಾಮೆ ಕೊಟ್ಟು, ನುಡಿದಂತೆ ನಡೆಯಿರಿ ಎಂದು ಜೆಡಿಎಸ್ ಆಗ್ರಹಿಸಿದೆ.

## ಮುಂದಿನ ಕೆಲವು ದಿನ ಕಾಲ ರಾಜ್ಯದಲ್ಲಿ ಭಾರಿ ಮಳೆ: ಇಲ್ಲಿದೆ ಸಂಪೂರ್ಣ ಮಾಹಿತಿ

• **ಉದಯವಾಹಿನಿ, ಬೆಂಗಳೂರು**

ಮುಂದಿನ ಐದು ದಿನಗಳ ಕಾಲ ರಾಜ್ಯದ ಕರಾವಳಿ ಮತ್ತು ಕರಾವಳಿ ಜಿಲ್ಲೆಗಳಿಗೆ ಹೊಂದಿಕೊಂಡಂತ ಮಲೆನಾಡು ಜಿಲ್ಲೆಗಳಿಗೆ ವ್ಯಾಪಕವಾಗಿ ಮಳೆಯಾಗುವ ನಿರೀಕ್ಷೆಯಿದೆ ಎಂದು ಹವಾಮಾನ ಇಲಾಖೆ ಮಾಹಿತಿಯನ್ನ ನೀಡಿದೆ. ದಕ್ಷಿಣ ಒಳನಾಡು ಜಿಲ್ಲೆಗಳಲ್ಲಿ ಅಲ್ಲಲ್ಲಿ ಚದುರಿದಂತೆ ತುಂತುರು ಮಳೆ ಮತ್ತು ಸೆಪ್ಟೆಂಬರ್ 29 ಮತ್ತು 30 ರಂದು ಗುಡುಗು ಸಹಿತ ಮಳೆಯಾಗಲಿದೆ.



ಉದಯವಾಹಿನಿ ಚಿತ್ರ

ಕಳೆದ ಎರಡು ವಾರಗಳಿಂದ ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ಉತ್ತಮ ಮಳೆಯಾಗುತ್ತಿದೆ. ಶನಿವಾರ ರಾಜಧಾನಿ ಬೆಂಗಳೂರು ಹಾಗೂ ಕರಾವಳಿ ಜಿಲ್ಲೆಗಳಲ್ಲಿ ಮೋಡ ಕವಿದ ವಾತಾವರಣ ಹಾಗೂ ತುಂತುರು ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ರಾಜ್ಯದ ದಕ್ಷಿಣ ಒಳನಾಡು ಜಿಲ್ಲೆಗಳಲ್ಲಿ ವ್ಯಾಪಕವಾಗಿ ಮಳೆಯಾಗಲಿದ್ದು, ಕರಾವಳಿ ಮತ್ತು ಕರಾವಳಿ ಜಿಲ್ಲೆಗಳಿಗೆ ಹೊಂದಿಕೊಂಡಂತ ಮಲೆನಾಡು ಜಿಲ್ಲೆಗಳಲ್ಲಿ ಅಲ್ಲಲ್ಲಿ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಇನ್ನೂ

ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡದಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ದಕ್ಷಿಣ ಒಳನಾಡಿನ ಕೆಲವು ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಂಭವವಿದೆ. ಕರಾವಳಿ ಹಾಗೂ ಉತ್ತರ ಒಳನಾಡಿನ ಜಿಲ್ಲೆಗಳಲ್ಲಿ ಮತ್ತೆ ಮಳೆಯಾಗುತ್ತಿದೆ. ಇನ್ನು ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಬೀದರ್, ಕಲಬುರಗಿ, ವಿಜಯಪುರ, ಯಾದಗಿರಿ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

## ಗೃಹಲಕ್ಷ್ಮಿ ಹಣ ಯಾವಾಗ ಖಾತೆಗೆ ಬರುತ್ತದೆ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕೊಟ್ರು ಗುಡ್ ನ್ಯೂಸ್

• **ಉದಯವಾಹಿನಿ, ಬೆಂಗಳೂರು**

ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳ ಪೈಕಿ ಗೃಹಲಕ್ಷ್ಮಿ ಯೋಜನೆಯೂ ಒಂದು. ಈ ಯೋಜನೆಯ ಅಂಗವಾಗಿ ಮಹಿಳೆಯರ ಖಾತೆಗೆ ಪ್ರತೀ ತಿಂಗಳು 2,000 ರೂ. ಜಮೆ ಮಾಡಲಾಗುತ್ತದೆ. ಆದರೆ ಕಳೆದ ಎರಡು ತಿಂಗಳಿನಿಂದ ಹಣ ಬಂದಿಲ್ಲ. ಅದಕ್ಕೀಗ ಸ್ವತಃ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸ್ಪಷ್ಟನೆ ನೀಡಿದ್ದಾರೆ.

ಜೂನ್ ತಿಂಗಳಿನಲ್ಲಿ ಗೃಹಲಕ್ಷ್ಮಿ ಹಣದ ಕಂತು ಮನೆ ಯಜಮಾನಿಯ ಖಾತೆಗೆ ಜಮೆ ಆಗಿತ್ತು. ಆದರೆ ಅದಾದ ಬಳಿಕ ಎರಡು ತಿಂಗಳಿನಿಂದ ಹಣ ಬಂದಿಲ್ಲ. ಈ ಬಗ್ಗೆ ಸಾಕಷ್ಟು ಟೀಕೆಗಳೂ ಕೇಳಿ ಬಂದಿದ್ದವು. ಕಾಂಗ್ರೆಸ್ ಬಳಿ ಗ್ಯಾರಂಟಿ ಯೋಜನೆಗಳಿಗೆ ಬೊಕ್ಕಸದಲ್ಲಿ ದುಡ್ಡಿಲ್ಲ ಎಂದು ಆರೋಪ ಕೇಳಿಬರುತ್ತಿದೆ. ಈ ನಡುವೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹಣ ಯಾವಾಗ ಖಾತೆಗೆ ಬರುತ್ತದೆ ಎಂದು ಮಾಧ್ಯಮಗಳಿಗೆ ಸ್ಪಷ್ಟನೆ ನೀಡಿದ್ದಾರೆ. ಈಗಾಗಲೇ ಹಣ ಜಮೆ ಮಾಡುವ ಪ್ರಕ್ರಿಯೆ ಆರಂಭವಾಗಿದೆ. ಒಂದು ವಾರದಲ್ಲಿ ಜುಲೈ ತಿಂಗಳ ಹಣ ಜಮೆ ಆಗುತ್ತದೆ. ಅಕ್ಟೋಬರ್ ತಿಂಗಳಲ್ಲಿ ಸೆಪ್ಟೆಂಬರ್ ಹಣ ಜಮೆ ಆಗಲಿದೆ.

ಅದೇ ರೀತಿ ಈ ತಿಂಗಳ ಹಣ ಮುಂದಿನ ತಿಂಗಳು ಜಮೆ ಆಗಲಿದೆ ಎಂದು ಸಚಿವರು ಹೇಳಿದ್ದಾರೆ.

> **ಬಿಜೆಪಿಯವರು ಗ್ಯಾರಂಟಿ ಘೋಷಣೆ ಮಾಡಿದಾಗ ಇದೆಲ್ಲಾ ಆಗೋ ಕೆಲಸವಲ್ಲ ಎಂದು ಕುಹಕ ಮಾಡಿದ್ದರು. ಆಡಿಕೊಳ್ಳುವವರಿಗೇನು ಆಡಿಕೊಳ್ಳುತ್ತಾರೆ. ಈಗ ಗ್ಯಾರಂಟಿ ಕೊಡಲು ಪ್ರಾರಂಭಿಸಿದ ಮೇಲೆ ಅಪಪ್ರಚಾರ ಮಾಡುತ್ತಿದ್ದಾರೆ. ಅವರು ಹೇಳಿಕೊಳ್ಳಲಿ, ನಾವು ನಮ್ಮ ಕೆಲಸ ಮಾಡುತ್ತಿರಬೇಕಷ್ಟೇ**
> -**ಲಕ್ಷ್ಮಿ ಹೆಬ್ಬಾಳ್ಕರ್**, ಸಚಿವೆ



## ಆಹಾರ ಸಿಗದ ಬೀದಿ ನಾಯಿಗಳಿಗಾಗಿ ಹೊಸ ಯೋಜನೆ

• **ಉದಯವಾಹಿನಿ, ಬೆಂಗಳೂರು**

ಬೀದಿ ನಾಯಿಗಳಿಗೆ ಆಹಾರ ಸಿಗದಂತಹ ಪ್ರದೇಶದಲ್ಲಿ ಆಹಾರದ ವ್ಯವಸ್ಥೆ ಮಾಡುವ ನಿಟ್ಟಿನಲ್ಲಿ, ಪಾಲಿಕೆಯ ಪಶುಸಂಗೋಪನಾ ವಿಭಾಗದಿಂದ ಪ್ರಾಯೋಗಿಕವಾಗಿ ಹೊಸ ಯೋಜನೆಯನ್ನು ರೂಪಿಸಲಾಗುತ್ತಿದೆ. ಈ ಬಗ್ಗೆ ಪಶುಸಂಗೋಪನಾ ವಿಭಾಗದ ವಿಶೇಷ ಆಯುಕ್ತರಾದ ಸುರಳ್ಕರ್ ವಿಕಾಸ್ ಕಿಶೋರ್ ರವರು ತಿಳಿಸಿದ್ದಾರೆ. ನಗರದಲ್ಲಿ ಅನೇಕ ಸ್ಥಳಗಳಲ್ಲಿ ಬೀದಿ ನಾಯಿಗಳಿಗೆ ದಿನಕ್ಕೆ ಒಂದು ಹೊತ್ತಿನ ಆಹಾರವೂ ಸಹ ಸಿಗದಿರುವುದು ಪಾಲಿಕೆಯ ಗಮನಕ್ಕೆ ಬಂದಿರುತ್ತದೆ. ಇದರಿಂದ ಬೀದಿ ನಾಯಿಗಳು ಆಕ್ರಮಣಕಾರಿಯಾಗಿ ವರ್ತಿಸುತ್ತವೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.



ಬೀದಿ ನಾಯಿಗಳು ಸಾರ್ವಜನಿಕರಿಗೆ ಕಚ್ಚುವ ಪ್ರಕರಣಗಳನ್ನು ನಿಯಂತ್ರಿಸುವ ಉದ್ದೇಶದಿಂದ ಅವುಗಳಿಗೆ ಸರಿಯಾಗಿ ಆಹಾರ ಸಿಗುವಂತೆ ಮಾಡಲು ಪಾಲಿಕೆಯು ಪ್ರಾಣಿ ಪಾಲಕರು, ಪೌರಕಾರ್ಮಿಕರು, ಹೋಟೆಲ್ ಮಾಲಿಕರು, ಆರೋಗ್ಯ ವಿಭಾಗದ ಸಿಬ್ಬಂದಿ ಹಾಗೂ ಇತರ ಆಸಕ್ತರೊಂದಿಗೆ ಸಮನ್ವಯ ಸಾಧಿಸಿ ಯೋಜನೆಯನ್ನು ರೂಪಿಸಲಾಗುತ್ತಿದೆ.

ಪ್ರಾಣಿಗಳಿಗೆ ಆಹಾರ ನೀಡುವ ಪ್ರಾಣಿ ಪ್ರಿಯರ ನೋಂದಣಿಗೆ ಅವಕಾಶ ಕಲ್ಪಿಸಲಾಗುತ್ತಿದೆ. ನಂತರ ಪೌರ ಕಾರ್ಮಿಕರು ಮತ್ತು ಖಾಸಗಿ ಹೋಟೆಲ್ ಮಾಲಿಕರನ್ನು ಇದರಲ್ಲಿ ಪಾಲ್ಗೊಳ್ಳುವಂತೆ ಮಾಡಿ, ಆಹಾರ ನೀಡುವ ಸ್ಥಳಗಳನ್ನು ಗುರುತಿಸಿ, ಬೀದಿ ನಾಯಿಗಳಿಗೆ ಸರಿಯಾಗಿ ಆಹಾರ ಸಿಗುವಂತೆ ಮಾಡಲಾಗುತ್ತದೆ.

ಅದಾದ ಬಳಿಕ ಈ ಅಭಿಯಾನವನ್ನು ಪ್ರಾಯೋಗಿಕವಾಗಿ ಆಯ್ದ ಸ್ಥಳಗಳಲ್ಲಿ ಅನುಷ್ಠಾನಗೊಳಿಸಿ ಎಲ್ಲಾ ಪಾಲುದಾರರ ಪ್ರತಿಕ್ರಿಯೆಯನ್ನು ಸಂಗ್ರಹಿಸಲಾಗುತ್ತದೆ.

ಯೋಜನೆ ಯಶಸ್ವಿಯಾದಲ್ಲಿ ಪಾಲಿಕೆಯ ಎಲ್ಲಾ ವಾರ್ಡ್‌ಗಳಲ್ಲಿ ಈ ಅಭಿಯಾನವನ್ನು ಅನುಷ್ಠಾನಗೊಳಿಸಲಾಗುತ್ತದೆ.

**ಬೀದಿ ನಾಯಿಗಳಿಗೆ ಸಂಬಂಧಿಸಿದಂತೆ ಪಾಲಿಕೆಯ ಪಶಸಂಗೋಪನಾ ವಿಭಾಗದಿಂದ ಸಾಕಷ್ಟು ಉಪಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು, ನಾಗರೀಕರಿಗೆ ಅಗತ್ಯವಿರುವ ಯಾವುದೇ ಸಹಾಯಕ್ಕಾಗಿ ಬಿಬಿಎಂಪಿ ಸಹಾಯವಾಣಿ ಸಂಖ್ಯೆಯಾದ 1533 ಗೆ ಸಂಪರ್ಕಿಸಬಹುದು ಎಂದು ಮಾಹಿತಿ ನೀಡಿದೆ.**

ಇದಕ್ಕೆ ನೋಂದಣಿ ಮಾಡಿಕೊಳ್ಳಲು ಬಯಸುವವರು ಪಶಸಂಗೋಪನೆ ವಿಭಾಗದ ಸಾಮಾಜಿಕ ಜಾಲತಾಣವಾದ X, Facebook, Instagram (@bbmp_animalhusbandry) ಪುಟಗಳಲ್ಲಿ ನೋಂದಣಿಯ ಮಾಡಿಕೊಳ್ಳುವ ಲಿಂಕ್ ಅನ್ನು ನೀಡಲಾಗುತ್ತದೆ. ನೋಂದಣಿಯಾಗಲು 2ನೇ ಅಕ್ಟೋಬರ್ ನಿಂದ ಪ್ರಾರಂಭವಾಗಿ 31ನೇ ಅಕ್ಟೋಬರ್ ವರೆಗೆ ಅವಕಾಶವಿರುತ್ತದೆ. ಪ್ರಾಣಿ ಪಾಲಕರ ನೋಂದಣಿ ಕಡ್ಡಾಯವಿಲ್ಲ.

## ಮುಡಾ ಹಗರಣಕ್ಕೂ ನಿರ್ಮಲಾ ಪ್ರಕರಣಕ್ಕೂ ಅಜಗಜಾಂತರ ವ್ಯತ್ಯಾಸ

• **ಉದಯವಾಹಿನಿ, ಬೆಂಗಳೂರು**

ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಹಾಗೂ ಇತರರ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಆದೇಶಿಸಿರುವುದಕ್ಕೂ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮುಡಾ ಹಗರಣಕ್ಕೂ ಅಜಗಜಾಂತರ ವ್ಯತ್ಯಾಸವಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಹಾಗೂ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಆದೇಶಿಸಿರುವುದಕ್ಕೂ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮುಡಾ ಹಗರಣಕ್ಕೂ ಅಜಗಜಾಂತರ ವ್ಯತ್ಯಾಸವಿದೆ.


ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ವಜನ ಪಕ್ಷಪಾತ ಮಾಡಿದ್ದಾರೆ. ಕೋಟ್ಯಂತರ ರೂಪಾಯಿ ಬೆಲೆಬಾಳುವ ಜಮೀನನ್ನು ಸಿಎಂ ಕಬಳಿಸಿದ್ದಾರೆ. ನಿರ್ಮಲಾ ಸೀತಾರಾಮನ್ ಅವರು ತಮ ಸ್ವಂತಕ್ಕಾಗಿ ಏನೂ ಮಾಡಿಲ್ಲ. ಆ ಹಣ ಪಕ್ಷಕ್ಕೆ ಬಂದಿದೆ. ಕಾಂಗ್ರೆಸ್ ಪಕ್ಷಕ್ಕೂ 1,200 ಕೋಟಿ ರೂ.ಗೂ ಅಧಿಕ ಹಣ ಬಂದಿದೆ. ಆ ಹಣವನ್ನು ಮೊದಲು ವಾಪಸ್ ನೀಡಲಿ, ಆ ನಂತರ ಸಚಿವರ ರಾಜೀನಾಮೆ ಕೇಳಲಿ ಎಂದರು. ಎಲ್ಲಾ ಪಕ್ಷಗಳು ದೇಣಿಗೆ ಸಂಗ್ರಹ ಮಾಡಿವೆ. ಹೀಗೆ ಹಣ ತೆಗೆದುಕೊಂಡವರ ಮೇಲೆ ಎಫ್‌ಐಆರ್ ದಾಖಲಿಸುವುದಾದರೆ, ಎಲ್ಲರ ಮೇಲೂ ದಾಖಲಿಸಬೇಕಾಗುತ್ತದೆ. ಸಿಎಂ ಸಿದ್ದರಾಮಯ್ಯ ಅವರೇ ಯಾರಿಂದಲೋ ಹೇಳಿಸಿ ದೂರು ದಾಖಲಿಸಿದ್ದಾರೆ ಎಂಬುದು ಇದರಿಂದ ಸ್ಪಷ್ಟವಾಗುತ್ತದೆ. ಹೀಗೆ ದೂರು ದಾಖಲಿಸಿರುವುದು ರಾಜಕೀಯ ಪ್ರೇರಿತ ಎಂದು ತಿಳಿಸಿದರು. ಸಿಎಂ ಸಿದ್ದರಾಮಯ್ಯನವರ ಪ್ರಕರಣ ಕ್ಯಾಬಿನೆಟ್‌ನಲ್ಲಿ ಚರ್ಚೆಯಾಗಿರಲಿಲ್ಲ. ಆದರೆ ಚುನಾವಣಾ ಬಾಂಡ್ ಬಗ್ಗೆ ಕ್ಯಾಬಿನೆಟ್‌ನಲ್ಲೇ ಚರ್ಚೆಯಾಗಿ ಸರ್ಕಾರಿ ಆದೇಶ ಹೊರಡಿಸಲಾಗಿದೆ.



> **ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರಿಗೂ ರಾಜ್ಯ ಪೊಲೀಸರಿಗೂ ಸಂಬಂಧವಿಲ್ಲ. ಕುಮಾರಸ್ವಾಮಿ ಅಧಿಕಾರ ದುರ್ಬಳಕೆ ಮಾಡಲು ಆಗುವುದಿಲ್ಲ. ಯಾವ್ಯಾವುದೋ ಪ್ರಕರಣಕ್ಕೆ ಮುಡಾ ಹಗರಣವನ್ನು ಹೋಲಿಸುವುದು ಬೇಡ**
> – **ಆರ್.ಅಶೋಕ್**, ಪ್ರತಿಪಕ್ಷ ನಾಯಕ

## ಹತ್ತು ಜನ ಸೈಬರ್ ವಂಚಕರು ಅರೆಸ್ಟ್

• **ಉದಯವಾಹಿನಿ, ಬೆಂಗಳೂರು**



ದೇಶಾದ್ಯಂತ 122 ಪ್ರಕರಣಗಳಲ್ಲಿ ಭಾಗಿಯಾಗಿದ್ದ 10 ಜನ ಸೈಬರ್ ವಂಚಕರನ್ನು ಬೆಂಗಳೂರು ಕ್ರೈಂ ಬ್ರ್ಯಾಂಚ್ ಪೊಲೀಸರು ಬಂಧಿಸಿದ್ದಾರೆ.

ಆರೋಪಿಗಳು ಆನ್ ಲೈನ್ ಟಾಸ್ಕ್ ಫ್ರಾಡ್, ಆನ್ ಲೈನ್ ಉದ್ಯೋಗ ವಂಚನೆ ಜಾಲದ ಮೂಲಕ ಜನರನ್ನು ವಂಚಿಸುತ್ತಿದ್ದರು. ಈ ವಂಚನೆ ಜಾಲದ ಕಿಂಗ್ ಪಿನ್ ಗಳು ಚೀನಾದಿಂದ ನಿರ್ವಹಿಸುತ್ತಿದ್ದಾರೆ ಎಂದು ತಿಳಿದುಬಂದಿದೆ.

10 ವಂಚಕರ ಪೈಕಿ ಮೂವರನ್ನು ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಲುಕ್ ಔಟ್ ನೋಟೀಸ್ ಮೂಲಕ ಬಂಧಿಸಲಾಗಿದೆ. ಆರೋಪಿಗಳು ಪೀಣ್ಯದ ನೆಲಗದರನಹಳ್ಳಿಯ ಕಚೇರಿ ಜಾಗದಲ್ಲಿ ಆಕ್ಟೀವ್ ಆಗಿದ್ದರು. 25 ಲಕ್ಷ ರೂಪಾಯಿ ಕಳೆದುಕೊಂಡಿದ್ದ ಮಹಿಳೆಯೊಬ್ಬರು ಜುಲೈನಲ್ಲಿ ಸೈಬರ್ ಕ್ರೈಂ ಗೆ ದೂರು ನೀಡಿದ್ದರು. ಇದರ ಆಧಾರದಲ್ಲಿ ಪೊಲೀಸರು ಕಾರ್ಯಾಚರಣೆ ನಡೆಸಿದ್ದರು,.

ಬಂಧಿತ ಆರೋಪಿಗಳಿಂದ 72 ಮೊಬೈಲ್ ಫೋನ್, 182 ಡೆಬಿಟ್ ಕಾರ್ಡ್‌ಗಳು, ವಿವಿಧ ಟೆಲಿಕಾಂ ಆಪರೇಟರ್‌ಗಳ 133 ಸಿಮ್ ಕಾರ್ಡ್ ಗಳು, 127 ಬ್ಯಾಂಕ್ ಪಾಸ್ ಬುಕ್ ಗಳು ಮತ್ತು 1.74 ಲಕ್ಷ ರೂ. ನಗದು ವಶಪಡಿಸಿಕೊಂಡಿದ್ದಾರೆ.

ಆರೋಪಿಗಳು ಸಂತ್ರಸ್ತರಿಗೆ ವಂಚಿಸಲು ಬಳಸಿದ ಖಾತೆಗಳಲ್ಲಿದ್ದ 7.34 ಲಕ್ಷ ರೂ. ಮೊತ್ತವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ.

ಬಂಧಿತರನ್ನು ಸೈಯದ್ ಯಾಹ್ಯಾ, ಉಮರ್ ಫಾರೂಕ್, ಮೊಹಮ್ಮದ್ ಮಾಹೀನ್, ಮೊಹಮ್ಮದ್ ಮುಝುಮ್ಮಿಲ್, ತೇಜಸ್, ಚೇತನ್, ವಾಸಿಂ, ಸೈಯದ್ ಜೈದ್, ಸಾಹಿ ಅಬ್ದುಲ್ ಅನಸ್ ಮತ್ತು ಓಂ ಪ್ರಕಾಶ್ ಎಂದು ಗುರುತಿಸಲಾಗಿದೆ.

## ಮತ್ತೆ 'ಸಿಎಂ' ಆಸೆ ವ್ಯಕ್ತಪಡಿಸಿದ್ರಾ ಡಿಸಿಎಂ?

• **ಉದಯವಾಹಿನಿ, ಬೆಂಗಳೂರು**

ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಮೈಸೂರು ಲೋಕಾಯುಕ್ತ ಕಚೇರಿಯಲ್ಲಿ ಎಫ್‌ಐಆರ್ ದಾಖಲಾಗಿದೆ. ಹೀಗಾಗಿ ಕೂಡಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಲೋಕಾಯುಕ್ತ ಅಧಿಕಾರಿಗಳು ತನಿಖೆಗೆ ಒಳಪಡಿಸಲಿದ್ದಾರೆ. ಇದರ ಮಧ್ಯ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ಹೇಳಿಕೆ ತೀವ್ರ ಕುತೂಹಲ ಮೂಡಿಸಿದೆ.

ರಾಮನಗರ ಜಿಲ್ಲೆಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯದ ಸೇವೆ ಮಾಡಬೇಕು ಅಂತ ಅಂದುಕೊಂಡಿದ್ದೇನೆ. ಜೊತೆಗೆ ದೊಡ್ಡ ಹೋರಾಟವೂ ಕೂಡ ನಡೆಯುತ್ತಿದೆ ಈಗ ಮಾತನಾಡಿದರೆ ವಿವಿಧ ರೀತಿಯಲ್ಲಿ ಬಿಂಬಿಸುತ್ತಾರೆ. ಕನಕಪುರ ಜನ ನನಗೆ ಆಶೀರ್ವಾದ ಮಾಡಿದ್ದಾರೆ. ಹಾಗಾಗಿ ರಾಜ್ಯದ ಸೇವೆ ಮಾಡಬೇಕು ಅಂತ ದೊಡ್ಡ ಪ್ರಯತ್ನ ನಡೆಯುತ್ತಿದೆ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಿಳಿಸಿದರು. ಹಾಗಾಗಿ ಮತ್ತೆ ಪರೋಕ್ಷವಾಗಿ ಸಿಎಂ ಆಗುವ ಆಸೆ ವ್ಯಕ್ತಪಡಿಸಿದ್ದರಾ ಎಂಬ ಅನುಮಾನ ದಟ್ಟವಾಗಿದೆ. ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿಕೆ ಇದೀಗ ತೀವ್ರ ಕುತೂಹಲ ಮೂಡಿಸಿದೆ.

ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಲವಾರು ಬಾರಿ ನಾನು ಯಾವುದೇ ಕಾರಣಕ್ಕೂ ರಾಜೀನಾಮೆ ನೀಡಲ್ಲ ಎಂದು ಪದೇಪದೇ ಸ್ಪಷ್ಟನೆ ನೀಡಿದ್ದಾರೆ. ಅದು ಅಲ್ಲದೆ ವಿಪಕ್ಷಗಳು ಸಹ ಸಿದ್ದರಾಮಯ್ಯಗೆ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿ ಎಂದು ಪಟ್ಟು ಹಿಡಿದಿವೆ. ಇದರ ಮಧ್ಯ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಈ ಒಂದು ಹೇಳಿಕೆ ನೀಡಿದ್ದು ಭಾರಿ ಕುತೂಹಲಕ್ಕೆ ಕಾರಣವಾಗಿದೆ.



ಉದಯವಾಹಿನಿ ಚಿತ್ರ

## ದಸರಾ, ದೀಪಾವಳಿ ಪ್ರಯುಕ್ತ 6,000 ವಿಶೇಷ ರೈಲುಗಳ ಸಂಚಾರ

• **ಉದಯವಾಹಿನಿ, ಬೆಂಗಳೂರು**

ದುರ್ಗಾ ಪೂಜೆ, ದೀಪಾವಳಿ ಮತ್ತು ಛತ್ ಪೂಜೆಯ ಸಮಯದಲ್ಲಿ ಪ್ರಯಾಣಿಕರ ಸುಗಮ ಸಂಚಾರಕ್ಕಾಗಿ ಈ ವರ್ಷ ಭಾರತೀಯ ರೈಲ್ವೆಯಿಂದ 6000 ಕ್ಕೂ ಹೆಚ್ಚು ವಿಶೇಷ ರೈಲುಗಳನ್ನು ಓಡಿಸಲಾಗುವುದು ಎಂದು ರೈಲ್ವೆ ಸಚಿವರು ಹೇಳಿದ್ದಾರೆ. ಈ ವಿಶೇಷ ರೈಲುಗಳು ಅಕ್ಟೋಬರ್ 1 ರಿಂದ ನವೆಂಬರ್ 30ರ ನಡುವೆ ಕಾರ್ಯನಿರ್ವಹಿಸಲಿವೆ.

ಪ್ರಯಾಣಿಕರಿಗೆ ಅನುಕೂಲವಾಗುವಂತೆ ಭಾರತೀಯ ರೈಲ್ವೆ ಪ್ರತಿ ವರ್ಷ ಹಬ್ಬಗಳ ಸಂದರ್ಭದಲ್ಲಿ ವಿಶೇಷ ರೈಲುಗಳನ್ನು ಓಡಿಸಲಾಗುತ್ತಿದೆ. ಈ ವರ್ಷ ವಿಶೇಷ ರೈಲುಗಳ ಸಂಖ್ಯೆಯಲ್ಲಿ ಭಾರಿ ಹೆಚ್ಚಳವಾಗಿದೆ. ದುರ್ಗಾಪೂಜೆ, ದೀಪಾವಳಿ ಮತ್ತು ಛತ್ ಹಬ್ಬಗಳಲ್ಲಿ ಲಕ್ಷಗಟ್ಟಲೆ ಪ್ರಯಾಣಿಕರು ಮನೆಗೆ ತೆರಳಲು ಪ್ರಯಾಣಿಸುತ್ತಾರೆ ಎಂಬುದು ಗಮನಾರ್ಹ. ಅಪಾರ ಸಂಖ್ಯೆಯ ಪ್ರಯಾಣಿಕರಿಗೆ ಸುಲಭ ಮತ್ತು ಆರಾಮದಾಯಕ ಪ್ರಯಾಣವನ್ನು ಒದಗಿಸಲು, ಈ ವರ್ಷವೂ ವಿಶೇಷ ರೈಲುಗಳನ್ನು ಓಡಿಸಲು ರೈಲ್ವೆ ಸಿದ್ಧತೆಗಳನ್ನು ಮಾಡಿದೆ. ಎರಡು ತಿಂಗಳ ಅವಧಿಯಲ್ಲಿ, ಈ ವಿಶೇಷ ರೈಲುಗಳು 6000 ಕ್ಕೂ ಹೆಚ್ಚು ಟ್ರಿಪ್‌ಗಳನ್ನು ಮಾಡುತ್ತವೆ ಮತ್ತು ಹೆಚ್ಚಿನ ಸಂಖ್ಯೆಯ ಪ್ರಯಾಣಿಕರನ್ನು ಅವರ ಗಮ್ಯಸ್ಥಾನಕ್ಕೆ ಸಾಗಿಸಲು ಅನುಕೂಲವಾಗುತ್ತದೆ.

ಕಳೆದ ವರ್ಷವೂ ಭಾರತೀಯ ರೈಲ್ವೆಯಿಂದ ಹೆಚ್ಚಿನ ಸಂಖ್ಯೆಯ ಹಬ್ಬದ ವಿಶೇಷ ರೈಲುಗಳನ್ನು ನಡೆಸಲಾಯಿತು ಮತ್ತು ಈ ರೈಲುಗಳು ಒಟ್ಟು 4,429 ಟ್ರಿಪ್‌ಗಳನ್ನು ಮಾಡಿದ್ದು, ಇದರ ಮೂಲಕ ಲಕ್ಷಗಟ್ಟಲೆ ಪ್ರಯಾಣಿಕರು ಆರಾಮದಾಯಕ ಪ್ರಯಾಣ ಸೌಲಭ್ಯಗಳನ್ನು ಪಡೆದರು.



ಉದಯವಾಹಿನಿ ಚಿತ್ರ

**ನಿಸ್ಸಂಶಯವಾಗಿ, ಪ್ರತಿ ವರ್ಷ ದುರ್ಗಾ ಪೂಜೆ, ದೀಪಾವಳಿ ಮತ್ತು ಛತ್ ಪೂಜೆಯ ಸಂದರ್ಭದಲ್ಲಿ, ದೇಶದಾದ್ಯಂತ ಹೆಚ್ಚಿನ ಸಂಖ್ಯೆಯ ಜನರು ಉತ್ತರ ಪ್ರದೇಶ ಮತ್ತು ಬಿಹಾರಕ್ಕೆ ತೆರಳುತ್ತಾರೆ. ಉತ್ತರ ಪ್ರದೇಶ ಮತ್ತು ಬಿಹಾರದ ಜನರಿಗೆ, ಈ ಹಬ್ಬಗಳು ಕೇವಲ ಧಾರ್ಮಿಕ ಮಹತ್ವವನ್ನು ಹೊಂದಿಲ್ಲ, ಆದರೆ ಕುಟುಂಬಗಳನ್ನು ಭೇಟಿ ಮಾಡುವ ಪ್ರಮುಖ ಸಂದರ್ಭವಾಗಿದೆ. ಪ್ರತಿ ವರ್ಷ ಹಬ್ಬ ಹರಿದಿನಗಳಲ್ಲಿ ಪ್ರಯಾಣಿಕರ ದಟ್ಟಣೆಯಿಂದಾಗಿ ಬಹುತೇಕ ರೈಲುಗಳಲ್ಲಿ ಎರಡು-ಮೂರು ತಿಂಗಳ ಮೊದಲೇ ಟಿಕೆಟ್‌ಗಳು ವೇಟಿಂಗ್ ಲಿಸ್ಟ್‌ಗೆ ಹೋಗುತ್ತವೆ. ಇದನ್ನು ಗಮನದಲ್ಲಿಟ್ಟುಕೊಂಡು ಈ ವರ್ಷವೂ ರೈಲ್ವೆ ವಿಶೇಷ ರೈಲುಗಳನ್ನು ಹಬ್ಬ ಹರಿದಿನಗಳ ಸಂದರ್ಭದಲ್ಲಿ ಓಡಿಸಲು ನಿರ್ಧರಿಸಿದೆ.**

## ಕಡ್ಡಾಯವಾಗಿ ಗಾಂಧಿ ಜಯಂತಿ ಆಚರಿಸುವಂತೆ ಶಿಕ್ಷಣ ಇಲಾಖೆ ಸುತ್ತೋಲೆ

### ರಾಜ್ಯದ ಶಾಲೆಗಳಲ್ಲಿ 'ಗಾಂಧಿ ಜಯಂತಿ' ಆಚರಣೆಗೆ 'ಶಿಕ್ಷಣ ಇಲಾಖೆ'ಯಿಂದ ಮಾರ್ಗಸೂಚಿ ಪ್ರಕಟ

• **ಉದಯವಾಹಿನಿ, ಬೆಂಗಳೂರು**

ರಾಜ್ಯದ ಎಲ್ಲಾ ಶಾಲೆಗಳಲ್ಲಿ ಅ. 2 ರಂದು ಕಡ್ಡಾಯವಾಗಿ 'ಗಾಂಧಿ ಜಯಂತಿ' ಆಚರಿಸುವಂತೆ ಶಿಕ್ಷಣ ಇಲಾಖೆ ಸುತ್ತೋಲೆ ಹೊರಡಿಸಿದೆ.ಹಾಗೂ ಆಚರಣೆಗೆ ಶಿಕ್ಷಣ ಇಲಾಖೆ ಮಾರ್ಗಸೂಚಿ ಬಿಡುಗಡೆ ಮಾಡಿದೆ. ದಿನಾಂಕ:02.10.2024 ರಂದು ರಾಷ್ಟ್ರಪಿತ ಮಹಾತ್ಮ ಗಾಂಧಿಯವರ 155ನೇ ಜಯಂತಿಯನ್ನು, ದೇಶದ ಸ್ವಾತಂತ್ರ್ಯ ಸಂಗ್ರಾಮದ ಸಮಯದಲ್ಲಿ 1924 ರಲ್ಲಿ ಬೆಳಗಾವಿಯಲ್ಲಿ ನಡೆದ ರಾಷ್ಟ್ರೀಯ ಕಾಂಗ್ರೆಸ್ ಅಧಿವೇಶನದ ಅಧ್ಯಕ್ಷತೆಯನ್ನು ಮಹಾತ್ಮ ಗಾಂಧಿಯವರು ವಹಿಸಿದ್ದು, ಈ ಐತಿಹಾಸಿಕ ಘಟನೆಯ ಶತಮಾನೋತ್ಸವ ಸಂಭ್ರಮವನ್ನು ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನ ರಹಿತ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಅರ್ಥಪೂರ್ಣವಾಗಿ, ಸಂಭ್ರಮಯುತವಾಗಿ ಮತ್ತು ವೈಶಿಷ್ಟ್ಯಪೂರ್ಣವಾಗಿ ಕೆಳಕಂಡಂತೆ ಕಡ್ಡಾಯವಾಗಿ ಆಚರಿಸಲು ಅಗತ್ಯ ಕ್ರಮಗಳನ್ನು ವಹಿಸುವಂತೆ ಸಂಬಂಧಿಸಿದ ಇಲಾಖಾಧಿಕಾರಿಗಳಿಗೆ ಹಾಗೂ ರಾಜ್ಯದ ಎಲ್ಲಾ ಶಾಲೆಗಳ ಮುಖ್ಯಸ್ಥರಿಗೆ ಸೂಚಿಸಲಾಗಿದೆ.



• ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನ ರಹಿತ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ದಿನಾಂಕ:02.10.2024 ರಂದು ಬೆಳಿಗ್ಗೆ 09:00 ಗಂಟೆಗೆ ವಿದ್ಯಾರ್ಥಿಗಳ, ಶಿಕ್ಷಕರ ಮತ್ತು ಎಸ್.ಡಿ.ಎಂ.ಸಿಗಳ ಸಮ್ಮುಖದಲ್ಲಿ ರಾಷ್ಟ್ರ ಪಿತ ಮಹಾತ್ಮ ಗಾಂಧಿಯವರ ಭಾವಚಿತ್ರಕ್ಕೆ ಗೌರವ ಪೂರ್ವಕವಾಗಿ ಪುಷ್ಪನಮನ ಸಲ್ಲಿಸುವುದು.

• ಈ ಸಂದರ್ಭದಲ್ಲಿ ಮಹಾತ್ಮ ಗಾಂಧಿಯವರ ಗೌರವಾರ್ಥ ಬಿಳಿ ಗಾಂಧಿ ಟೋಪಿಯನ್ನು ಸ್ವಯಂ ಪ್ರೇರಿತರಾಗಿ ಧರಿಸಬಹುದಾಗಿರುತ್ತದೆ. ಸಂಗ್ರಾಮದ ಐತಿಹಾಸಿಕ ಘಟನೆಗಳ ಕುರಿತು ಸ್ಮರಿಸುವುದು ಹಾಗೂ ದೇಶಪ್ರೇಮ, ಸ್ವಾತಂತ್ರ್ಯ, ಸಮಾನತೆ, ಶಾಂತಿ, ಅಹಿಂಸೆ, ಸತ್ಯನಿಷ್ಠೆ, ಪ್ರಾಮಾಣಿಕತೆ, ಶಿಸ್ತು, ಜಾತ್ಯಾತೀತತೆ, ಅಸ್ಪೃಶ್ಯತೆ ನಿವಾರಣೆ, ಸ್ವಚ್ಛತೆ, ಶ್ರಮದಾನ ಹಾಗೂ ತಂಬಾಕು ಮತ್ತು ಮಾದಕ ವಸ್ತುಗಳಿಂದ ದೂರವಿರುವುದು ಮುಂತಾದ ಆದರ್ಶ ತತ್ವಗಳ, ಜೀವನ ಮೌಲ್ಯಗಳ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವುದು ಹಾಗೂ ಈ ತತ್ವಗಳನ್ನು ಹಾಗೂ ಜೀವನ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಅತ್ಯವಶ್ಯವಾಗಿದ್ದು ಪ್ರೇರೇಪಿಸುವುದು.

• ದೇಶದ ಸ್ವಾತಂತ್ರ್ಯ ಸಂಗ್ರಾಮದ ಸಮಯದಲ್ಲಿ 1924 ರಲ್ಲಿ ಬೆಳಗಾವಿಯಲ್ಲಿ ನಡೆದ ರಾಷ್ಟ್ರೀಯ ಕಾಂಗ್ರೆಸ್ ಅಧಿವೇಶನದ ಅಧ್ಯಕ್ಷತೆಯನ್ನು ಮಹಾತ್ಮ ಗಾಂಧಿಯವರು ವಹಿಸಿದ್ದು, ಈ ಐತಿಹಾಸಿಕ ಘಟನೆ ಶತಮಾನೋತ್ಸವನ್ನು ಪೂರೈಸುತ್ತಿರುವ ಹಿನ್ನಲೆಯಲ್ಲಿ ಈ ಕುರಿತು ಹಾಗೂ ಮಹಾತ್ಮ ಗಾಂಧಿಯವರ ಜನ್ಮ ದಿನ ಅಕ್ಟೋಬರ್-02 ಅನ್ನು ಪ್ರತಿ ವರ್ಷ ಅಂತರಾಷ್ಟ್ರೀಯ ಅಹಿಂಸಾ ದಿನವನ್ನಾಗಿ ವಿಶ್ವಸಂಸ್ಥೆಯಿಂದ ಆಚರಿಸಲಾಗುತ್ತಿರುವ ಬಗ್ಗೆ, ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸುವುದು.

• ಮೇಲ್ಕಂಡ ಅಂಶಗಳ ಕುರಿತು ವಿದ್ಯಾರ್ಥಿಗಳಿಂದ ಭಾಷಣ ಮತ್ತು ನಾಟಕ ಮುಂತಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.

• ಸದರಿ ದಿನದಂದು ಶ್ರಮದಾನವನ್ನು ಕೈಗೊಂಡು ಆಯಾ ಶಾಲೆಗಳ ಆವರಣ, ಸುತ್ತ-ಮುತ್ತ ಹಾಗೂ ಸಾರ್ವಜನಿಕ ಸ್ಥಳಗಳ ಸ್ವಚ್ಛತಾ ಆಂದೋಲನವನ್ನು ಹಮ್ಮಿಕೊಳ್ಳುವುದು. ಈ ಸಂದರ್ಭದಲ್ಲಿ ಅಗತ್ಯಾನುಸಾರ ಸ್ಥಳೀಯ ಸಂಸ್ಥೆಗಳ ಸಹಕಾರವನ್ನು ಪಡೆದುಕೊಳ್ಳುವುದು.

• ಮಹಾತ್ಮ ಗಾಂಧಿಯವರ ಜಯಂತಿಯ ಮಹತ್ವವನ್ನು ಹಾಗೂ ತತ್ವಗಳನ್ನು ಮತ್ತು ಸಂದೇಶವನ್ನು ಸಾರ್ವಜನಿಕರಿಗೆ ವ್ಯಾಪಕವಾಗಿ ತಲುಪಿಸಲು ಆಯಾ ಊರಿನಲ್ಲಿ, ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರಗಳಲ್ಲಿ 6 ರಿಂದ 10ನೇ ತರಗತಿಗಳ ವಿದ್ಯಾರ್ಥಿಗಳು ಮತ್ತು ಶಿಕ್ಷಕರು ರಾಷ್ಟ್ರಧ್ವಜದೊಂದಿಗೆ, ರಾಷ್ಟ್ರಪ್ರೇಮವನ್ನು ಸಾರುವ ಘೋಷಣಾ ವಾಕ್ಯಗಳು ಉದ್ಧರಿಸುತ್ತಾ 1 ಕಿ.ಮೀ ಗೆ ಕಡಿಮೆಯಿಲ್ಲದಂತೆ ಜಾಥಾವನ್ನು ಕೈಗೊಳ್ಳತಕ್ಕದ್ದು ಹಾಗೂ ಕಡೆಯಲ್ಲಿ ಅಹಿಂಸೆಯನ್ನು ಪಾಲಿಸುವ ಬಗ್ಗೆ ಮತ್ತು ತಂಬಾಕು ಮತ್ತು ಮಾದಕ ವಸ್ತುಗಳಿಂದ ದೂರವಿರುವ ಕುರಿತಾದ ಪ್ರತಿಜ್ಞಾವಿಧಿಯನ್ನು ಕೈಗೊಳ್ಳತಕ್ಕದ್ದು.

• ಈ ದಿನದಂದು ರಾಜ್ಯದ ಎಲ್ಲಾ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಸಿಹಿಯನ್ನು ಹಾಗೂ ಉಪಾಹಾರ ಮತ್ತು ಅಕ್ಷರ ದಾಸೋಹ ಯೋಜನೆಯಡಿಯ ಬಿಸಿಯೂಟವನ್ನು ವಿತರಿಸತಕ್ಕದ್ದು.

> **ಬೃಹತ್ ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿರುವ ಶಾಲೆಗಳಲ್ಲಿ ಮೇಲ್ಕಂಡ ಸೂಚನೆಗಳೊಂದಿಗೆ ಉಲ್ಲೇಖ-02 03 ರಲ್ಲಿನ ಅಂಶಗಳನ್ನು ಸಹ ಪಾಲಿಸುವಂತೆ ಸಂಬಂಧಿಸಿದ ಇಲಾಖಾಧಿಕಾರಿಗಳಿಗೆ ಮತ್ತು ಶಾಲಾ ಮುಖ್ಯ ಶಿಕ್ಷಕರಿಗೆ ತಿಳಿಸಲಾಗಿದೆ.**

ಅಂತರಾಳದಿಂದ... EDITORIAL

# ಠಾಣೆ ಎನ್‌ಕೌಂಟರ್ ಪ್ರಕರಣ
## ಪೊಲೀಸರ ಮೇಲೆ ಬಲವಾದ ಸಂದೇಹ



ಮಹಾರಾಷ್ಟ್ರದ ಠಾಣೆ ಜಿಲ್ಲೆಯ ಬದ್ಲಾಪುರದ ಶಾಲೆಯೊಂದರಲ್ಲಿ ಇಬ್ಬರು ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪ ಹೊತ್ತಿದ್ದ ಅಕ್ಷಯ್ ಶಿಂದೆಯನ್ನು ಮಹಾರಾಷ್ಟ್ರ ಪೊಲೀಸರು ಎನ್‌ಕೌಂಟರ್ ಮಾಡಿದ್ದಾರೆ. ಆದರೆ, ಇದು ಉದ್ದೇಶಪೂರ್ವಕ ಹತ್ಯೆ, ನಕಲಿ ಎನ್‌ಕೌಂಟರ್ ಎಂಬ ಬಲವಾದ ಸಂಶಯ ಮೂಡಿದೆ. ಇದು ನಕಲಿ ಎನ್‌ಕೌಂಟರ್ ಅಲ್ಲ ಎನ್ನುವುದಕ್ಕೆ ಕಾರಣಗಳೇನೂ ಕಾಣಿಸುತ್ತಿಲ್ಲ. ಆರೋಪಿಯನ್ನು ತನಿಖೆಗಾಗಿ ಜೈಲಿನಿಂದ ಕರೆದೊಯ್ಯಲಾಗುತ್ತಿತ್ತು. ಆಗ ಆತ ಪೊಲೀಸರ ಕೈಯಲ್ಲಿದ್ದ ರಿವಾಲ್ವರ್ ಕಸಿದುಕೊಂಡು ಗುಂಡು ಹಾರಿಸಿದ್ದಾನೆ. ಪೊಲೀಸರು ನಡೆಸಿದ ಪ್ರತಿದಾಳಿಯಲ್ಲಿ ಆತ ಮೃತಪಟ್ಟಿದ್ದಾನೆ. ಆದರೆ ಇಲ್ಲಿ ಹಲವು ಪ್ರಶ್ನೆಗಳು ಇವೆ: ಗುತ್ತಿಗೆ ಕಾರ್ಮಿಕ, ಶಾಲೆಯೊಂದರ ಸ್ವೀಪರ್ ಆಗಿದ್ದ ವ್ಯಕ್ತಿ ಜೀವಮಾನದಲ್ಲಿ ಒಮ್ಮೆಯೂ ರಿವಾಲ್ವರ್ ಮುಟ್ಟಿರಲೂ ಸಾಧ್ಯವಿಲ್ಲ; ಅಂತಹ ವ್ಯಕ್ತಿ, ಕೈಕೋಳ ತೊಡಿಸಿದ್ದರೂ ಪೊಲೀಸರ ರಿವಾಲ್ವರ್ ಸೆಳೆದುಕೊಂಡು ಅವರತ್ತ ಗುಂಡು ಹಾರಿಸಿ ತಪ್ಪಿಸಿಕೊಳ್ಳುವ ಕುರಿತು ಯೋಚಿಸುವುದಕ್ಕಾದರೂ ಸಾಧ್ಯವೇ? ಹೆಚ್ಚಿನ ಸಂಖ್ಯೆಯಲ್ಲಿದ್ದ ಪೊಲೀಸರು, ಶಿಷ್ಟಾಚಾರಕ್ಕೆ ವಿರುದ್ಧವಾಗಿ ಆತ ಸಾಯುವಂತೆ ಗುಂಡು ಹಾರಿಸಿದ್ದು ಏಕೆ ಎಂಬ ಪ್ರಶ್ನೆಯನ್ನೂ ಕೇಳಬೇಕಿದೆ.

> ವಿರೋಧ ಪಕ್ಷಗಳದ್ದು ಅತ್ಯಾಚಾರಿಗಳನ್ನು ರಕ್ಷಿಸುವ ಮೈತ್ರಿಕೂಟ'ವೇ ಎಂದು ಬಿಜೆಪಿ ಪ್ರಶ್ನಿಸಿದೆ. ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಯ್ದುಕೊಳ್ಳುವ ಹೊಣೆಗಾರಿಕೆ ಇರುವ ಸರ್ಕಾರ ಮತ್ತು ಆಡಳಿತ ಪಕ್ಷವು ಪ್ರಾಥಮಿಕ ತನಿಖೆ ಕೂಡ ಮುಗಿಯುವ ಮುನ್ನ, ತೀವ್ರ ಅನುಮಾನಾಸ್ಪದವಾದ ಹತ್ಯೆಯನ್ನು ಸಮರ್ಥಿಸಿಕೊಳ್ಳುವುದು ಸರಿಯೇ? ಕಾನೂನನ್ನು ಕೈಗೆತ್ತಿಕೊಳ್ಳುವ ಅಧಿಕಾರ ಪೊಲೀಸರಿಗೆ ಇಲ್ಲ. ಬಂದೂಕಿನ ಮೂಲಕ ಕಾನೂನು ಜಾರಿಗೆ ಅವಕಾಶ ಇಲ್ಲ.

ಸಂದೇಹಗಳನ್ನು ದೃಢಪಡಿಸಲು ಬಲವಾದ ಕಾರಣಗಳಿವೆ. ಮಹಾರಾಷ್ಟ್ರ ವಿಧಾನಸಭೆಗೆ ಕೆಲವೇ ವಾರಗಳಲ್ಲಿ ಚುನಾವಣೆ ನಡೆಯಲಿದೆ. ಅಕ್ಷಯ್ ಹತ್ಯೆಯ ಸನ್ನಿವೇಶವನ್ನು ಗಮನಿಸಿದರೆ, ಸರ್ಕಾರಕ್ಕೆ ಚುನಾವಣೆಯಲ್ಲಿ ಅನುಕೂಲ ಮಾಡಿಕೊಡಲು ಕೃತ್ಯ ಎಸಗಲಾಗಿದೆ ಎಂದು ಅನುಮಾನಿಸಿದರೆ ಅದನ್ನು ತಪ್ಪು ಎನ್ನಲಾಗದು. ರಾಜಕೀಯ ನಂಟುಗಳನ್ನು ಹೊಂದಿರುವ ಶಾಲಾ ಆಡಳಿತ ಮಂಡಳಿಗೂ ಈ ಹತ್ಯೆಯಿಂದ ಅನುಕೂಲವಿದೆ ಎಂದು ಆರೋಪಿಸಲಾಗಿದೆ. ಇಬ್ಬರು ಬಾಲಕಿಯರ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣವು ಜನರಲ್ಲಿ ಆಕ್ರೋಶ ಮೂಡಿಸಿತ್ತು ಮತ್ತು ಸರ್ಕಾರದ ವಿರುದ್ಧ ಜನರು ಪ್ರತಿಭಟನೆಯನ್ನೂ ನಡೆಸಿದ್ದರು. ಆರೋಪಿಯ ಹತ್ಯೆಯಿಂದಾಗಿ ತಕ್ಷಣವೇ ನ್ಯಾಯ ದೊರಕಿತು ಎಂದು ಜನರು ಸಂಭ್ರಮಿಸುತ್ತಾರೆ. ಇದರಿಂದ ಆಡಳಿತಾರೂಢ ಪಕ್ಷಕ್ಕೆ ಲಾಭವಿದೆ. ಶಿವಸೇನಾದ ನಾಯಕರು ಹತ್ಯೆಯನ್ನು ಸ್ವಾಗತಿಸಿದ್ದಾರೆ ಮತ್ತು ಪೊಲೀಸರು ಹೇಳಿದ ಹುರುಳಿಲ್ಲದ ಕತೆಯನ್ನು ಸಮರ್ಥಿಸಿಕೊಂಡಿದ್ದಾರೆ.

ಆರೋಪಿಯನ್ನು ಗಲ್ಲಿಗೇರಿಸಬೇಕು ಎಂದು ಹೇಳುತ್ತಿದ್ದ ವಿರೋಧ ಪಕ್ಷಗಳು ಹತ್ಯೆಯನ್ನು ವಿರೋಧಿಸುತ್ತಿರುವುದು ಏಕೆ ಎಂದೂ ಸರ್ಕಾರವು ಪ್ರಶ್ನಿಸಿದೆ. ವಿರೋಧ ಪಕ್ಷಗಳದ್ದು ಅತ್ಯಾಚಾರಿಗಳನ್ನು ರಕ್ಷಿಸುವ ಮೈತ್ರಿಕೂಟ'ವೇ ಎಂದು ಬಿಜೆಪಿ ಪ್ರಶ್ನಿಸಿದೆ. ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಯ್ದುಕೊಳ್ಳುವ ಹೊಣೆಗಾರಿಕೆ ಇರುವ ಸರ್ಕಾರ ಮತ್ತು ಆಡಳಿತ ಪಕ್ಷವು ಪ್ರಾಥಮಿಕ ತನಿಖೆ ಕೂಡ ಮುಗಿಯುವ ಮುನ್ನ, ತೀವ್ರ ಅನುಮಾನಾಸ್ಪದವಾದ ಹತ್ಯೆಯನ್ನು ಸಮರ್ಥಿಸಿಕೊಳ್ಳುವುದು ಸರಿಯೇ? ಕಾನೂನನ್ನು ಕೈಗೆತ್ತಿಕೊಳ್ಳುವ ಅಧಿಕಾರ ಪೊಲೀಸರಿಗೆ ಇಲ್ಲ. ಬಂದೂಕಿನ ಮೂಲಕ ಕಾನೂನು ಜಾರಿಗೆ ಅವಕಾಶ ಇಲ್ಲ. ಸಂವಿಧಾನ ಮತ್ತು ಕಾನೂನಿನ ಆಳ್ವಿಕೆ ಇರುವ ದೇಶದಲ್ಲಿ ಸಮರ್ಪಕ ಪ್ರಕ್ರಿಯೆ ಅನುಸರಿಸದೆ ಶಿಕ್ಷೆ ನೀಡಲು ಆಗದು. ತಕ್ಷಣವೇ ನ್ಯಾಯ ಸಿಗಬೇಕು ಎಂಬ ಹುಯಿಲು ನ್ಯಾಯ ವ್ಯವಸ್ಥೆ ಮತ್ತು ಕಾನೂನಿನ ಆಳ್ವಿಕೆಯು ಮುರಿದುಬಿದ್ದಿದೆ ಎಂಬುದರ ಸೂಚನೆಯಾಗಿದೆ. ಆರೋಪಿಯು ಅತ್ಯಂತ ಹೀನವಾದ ಕೃತ್ಯ ಎಸಗಿದ್ದರೂ ಆತನಿಗೆ ಶಿಕ್ಷೆ ನೀಡುವ ಮುನ್ನ ನ್ಯಾಯಸಮ್ಮತವಾದ ವಿಚಾರಣೆ ನಡೆಯಲೇಬೇಕು. ತಕ್ಷಣ ನ್ಯಾಯದ ಸಂಸ್ಕೃತಿಯನ್ನು ನಾವು ಅಪ್ಪಿಕೊಂಡರೆ, ಮನುಷ್ಯರಾಗಿ, ನಾಗರಿಕರಾಗಿ ಮತ್ತು ಒಂದು ಸಮಾಜವಾಗಿ ನಾವು ವಿಫಲರಾಗುತ್ತೇವೆ. ಇಂತಹ ಪ್ರಕರಣಗಳಲ್ಲಿ ಸ್ವಯಂಪ್ರೇರಿತ ತನಿಖೆಗೆ ಸುಪ್ರೀಂ ಕೋರ್ಟ್ ಈ ಹಿಂದೆ ಆದೇಶ ಮಾಡಿದ್ದಿದೆ. ಈ ಎನ್‌ಕೌಂಟರ್ ಪ್ರಕರಣದ ಕುರಿತು ನ್ಯಾಯಾಲಯದ ಮೇಲ್ವಿಚಾರಣೆಯಲ್ಲಿ ತನಿಖೆ ನಡೆಸಬೇಕಾದ ಅಗತ್ಯ ಇದೆ. ತಪ್ಪು ಎಸಗಿಲ್ಲ ಎಂಬುದು ಸಾಬೀತಾಗುವವರೆಗೆ ಪೊಲೀಸರು ತಪ್ಪಿತಸ್ಥರಂತೆಯೇ ಮೇಲ್ನೋಟಕ್ಕೆ ಕಾಣುತ್ತಾರೆ.




• ಹಿಂದಿನ ಸಂಚಿಕೆಯಿಂದ **7ನೆಯ ಅಧ್ಯಾಯ**

ಸುಮಂತ್ರನು ದಶರಥರಾಯನನ್ನು ನೋಡಿ ಮಹಾರಾಜ, ಸನತ್ಕುಮಾರನು ಮೊದಲು ಋಷಿಗಳನ್ನು ಕುರಿತು ಇಕ್ಷ್ವಾಕುವಂಶದಲ್ಲಿ ಸತ್ಯಸಂಧನೂ ಜಯಶ್ವರ್ಯಸಂಪನ್ನನೂ ಮತ್ತು ಧರ್ಮಿಷ್ಠನೂ ಆದ ದಶರಥನೆಂಬ ಮಹಾರಾಜನು ಅವತರಿಸಿ ಅಂಗದೇಶದ ರಾಜನಾದ ರೋಮಪಾದನೊಡನೆ ಸ್ನೇಹವನ್ನು ಮಾಡಿಕೊಂಡು ಆ ರಾಜನ ಬಳಿಗೆ ಹೋಗಿ ಆತನನ್ನು ಕುರಿತು ಎಲ್ಲೆ ರೋಮಪಾದರಾಜನೆ, ನಾನು ಸಂತಾನವಿಲ್ಲದಿರಬಾರದೆಂಬ ಬುದ್ಧಿಯಿಂದ ಅಶ್ವಮೇಧ ಯಾಗವನ್ನು ಮಾಡಬೇಕೆಂದಿದ್ದೇನೆ. ಯಾಗವನ್ನು ನೋಡುವುದಕ್ಕೆ ನಿನ್ನ ಮಗಳಾದ ಶಾಂತಾದೇವಿಯನ್ನೂ ಆಕೆಯ ಪತಿಯಾದ ಯಷ್ಯಶೃಂಗಮುನೀಶ್ವರನನ್ನೂ ಕಳುಹಿಸಿದೆಯಾದರೆ ನನ್ನ ಇಷ್ಟಾರ್ಥವು ಸಿದ್ಧಿಸುವುದು ' ಎಂದು ಕೇಳಿದರೆ ರೋಮಪಾದರಾಜನು ತನ್ನ ಮಗಳಾದ ಶಾಂತಾದೇವಿಯನ್ನೂ ಆಕೆಯ ಪತಿಯಾದ ಯಷ್ಯಶೃಂಗನನ್ನೂ ಕಳುಹಿಸುವನು. ಆಮೇಲೆ ದಶರಥರಾಜನು ಆವರನ್ನು ತನ್ನ ಪಟ್ಟಣಕ್ಕೆ ಕರೆತಂದು ಹರ್ಷದಿಂದ ಋಷ್ಯಶೃಂಗನಿಗೆ ಆರ್ತ್ವಿಜ್ಯವನ್ನು ಕೊಟ್ಟು ಯಾಗವನ್ನು ಸಮಾಪ್ತಿಮಾಡಿ ಸಂತಾನವನ್ನು ಪಡೆದು ತನ್ನ ಇಷ್ಟಾರ್ಥವನ್ನು ಸಲ್ಲಿಸಿಕೊಳುವನು. ದಶರಥ ಮಹಾರಾಜನಿಗೆ ವಂಶೋದ್ಧಾರಕರಾಗಿ ಅಪರಿಮಿತ ಪರಾಕ್ರಮವುಳ್ಳವ.

### ಶ್ರೀಚಾನುರಾಜೋಕ್ತಿ ನಿಲಾಸವೆಂಬ ಕನ್ನಡ ರಾಮಾಯಣ

ಸಮಸ್ತ ಲೋಕಗಳಲ್ಲಿಯೂ ಪ್ರಸಿದ್ಧರಾದ ನಾಲ್ಕು ಮಕ್ಕಳು ಅವಶರಿಸುವರು ಎಂಬ ವೃತ್ತಾಂತವನ್ನು ಕೃತಯುಗದಲ್ಲಿ ಹೇಳಿದನು. ಆ ವೃತ್ತಾಂತವನ್ನು ನಾನು ನಿನಗೆ ಬಿನ್ನಹಮಾಡಿದೆನು. ದಶರಥರಾಜನೆ, ಜುಷ್ಕಶೃಂಗನು ಬರುವ ಉಪಾಯವನ್ನು ಕಂಡು ಆತನನ್ನು ಕರೆತಂದ ಪಕ್ಷದಲ್ಲಿ ನಿನ್ನ ಇಷ್ಟಾರ್ಥವು ಲಭಿಸುವುದು ಎಂದು ಹೇಳಿದನು. ದಶರಥರಾಜನು ಅತಿಸಂತೋಷದಿಂದ ವಸಿಷ್ಠಮುನೀಶ್ವರನಿಗೆ ಸತ್ಕಾರವನ್ನು ಮಾಡಿ ತನ್ನ ಸಂಗಡ ಅವರನ್ನು ಕರೆದುಕೊಂಡು ಪ್ರಧಾನಿಗಳು ಮತ್ತು ಚತುರಂಗಬಲದಿಂದ ಸಮೇತನಾಗಿ ಅನೇಕ ವನವನಾಂತರಗಳನ್ನು ದಾಟಿ ಯಷ್ಯಶೃಂಗಮುನೀಂದ್ರನಿರುವ ರೋಮಪಾದರಾಜನ ಪಟ್ಟಣಕ್ಕೆ ಹೋದನು. ಮೊದಲು ಆ ಮನೀಶ್ವರನನ್ನು ಕಂಡು ಆಮೇಲೆ ರೋಮಪಾದರಾಜನನ್ನು ಕಂಡನು. ಆತನು ದಶರಥರಾಜನಿಗೆ ಅರ್ಘ್ಯಪಾದ್ಯಾಚಮನಾಧಿಗಳನ್ನು ಕೊಟ್ಟು ತನ್ನ ಅಳಿಯನಾದ ಯಷ್ಯಶೃಂಗಮುನಿಯ ಕೂಡ ಆ ರಾಜನ ಪೂರ್ವೋತ್ತರಗಳನ್ನೂ ಸಖ್ಯವನ್ನೂ ಬಂಧುತ್ವವನ್ನೂ ತಿಳುಹಿಸಲು ಆ ಮುನೀಶ್ವರನು ಆ ರಾಜನಿಗೆ ಅನೇಕ ಸತ್ಕಾರವನ್ನು ಮಾಡಿದನು, ಅವರ ಸತ್ಕಾರಗಳನ್ನು ಕೈಗೊಂಡು ದಶರಥ ರಾಜನು ಆ ರಾಜನ ಅರಮನೆಯಲ್ಲಿ ಎಂಟು ದಿವಸಗಳಿದ್ದು ಆಮೇಲೆ ರೋಮಪಾದರಾಜನನ್ನು ನೋಡಿ ''ನಿನ್ನ ಮಗಳಾದ ಶಾಂತಾದೇವಿಯು ತನ್ನ ಪತಿಯಾದ ಯಷ್ಕಶೃಂಗನನ್ನು ಕರೆದುಕೊಂಡು ನನ್ನ ಪಟ್ಟಣಕ್ಕೆ ಬರಬೇಕು. ನಾನು ಮುಂದೆ ಇವರಿಂದ ಉದ್ಧಾರವಾದೇನು ಎಂದು ಹೇಳಿದನು.

ರೋಮಪಾದರಾಜನು ತನ್ನ ಅಳಿಯನಾದ ಯಷ್ಯಶೃಂಗಮುನಿಯನ್ನು ಕರೆದು ''ನೀನು ನಿನ್ನ ಪಶ್ನೆಸಮೇತನಾಗಿ ಈ ರಾಜನ ಯಾಗವನ್ನು ಮಾಡಿಸುವುದಕ್ಕೆ ಹೋಗು ಎಂದನು. ಋಷ್ಕಶೃಂಗಮುನಿಯು ಸಂತೋಷಪಟ್ಟು ತನ್ನ ಪತ್ನಿಸಮೇತನಾಗಿ ಅಯೋಧ್ಯಾಪಟ್ಟಣಕ್ಕೆ ತೆರಳಿದನು. ದಶರಥರಾಜನು ರೋಮಪಾದರಾಜನಿಗೆ ಕೈಮುಗಿದು ತಬ್ಬಿಕೊಂಡು ಅವನ ಅಪ್ಪಣೆಯನ್ನು ಪಡೆದು ಅಯೋಧ್ಯಾಪಟ್ಟಣದ ಸಮೀಪಕ್ಕೆ ಬಂದು ಅತ್ಯಂತ ವೇಗವುಳ್ಳ ದೂತರನ್ನು ಪಟ್ಟಣವನ್ನು ಅಲಂಕಾರಮಾಡುವುದಕ್ಕಾಗಿ ಮೊದಲೇ ಕಳುಹಿಸಿದನು. ಆ ದೂತರು ಹೋಗಿ ಹೇಳಲು ಪೌರಜನಗಳು ಪಟ್ಟಣವನ್ನು ಶೃಂಗಾರಮಾಡಿದರು.

ಮುಂದುವರಿಯುವುದು...

# ವ್ಯಾಯಾಮಕ್ಕೆ ಸಮಯವಿಲ್ಲವೇ?



ವಿಶ್ವಾಸ್. ಡಿ. ಗೌಡ
• ಉದಯವಾಹಿನಿ ವಿಶೇಷ

ದಿನ ಬೆಳಗಾದರೆ ಖಾಲಿ ಹೊಟ್ಟೆಯಲ್ಲಿ ತಿಂಡಿ, ಅಡುಗೆ ಮಾಡಿ ಎಲ್ಲರ ತಿಂಡಿ, ಮಕ್ಕಳ ಹೊದಿಕೆ, ಸ್ವಚ್ಛತೆಯ ಕೆಲಸ ಮಾಡಿ ಆಫೀಸಿಗೆ ಹೊರಡುವ ಧಾವಂತ. ಮತ್ತೆ ಆಫೀಸ್ ಬಿಟ್ಟ ಮೇಲೆ ಅಡುಗೆ ಮಾಡಲೇಬೇಕು ಅಂತ ಮನೆ ತಲುಪುವ ತರಾತುರಿ. ಈ ಎಲ್ಲಾ ಧಾವಂತದಲ್ಲಿ ಮಹಿಳೆಯರಿಗೆ ತಮ್ಮತ್ತ ಗಮನ ಹರಿಸಲು ಸಮಯವಿಲ್ಲ. ಮನೆಯಲ್ಲಿರುವ ಎಲ್ಲರನ್ನೂ ನೋಡಿಕೊಳ್ಳುವಾಗ ತಮ್ಮನ್ನೇ ತಾವು ನಿರ್ಲಕ್ಷಿಸುತ್ತಾರೆ. ಸಾಮಾನ್ಯವಾಗಿ ಅವರಿಗೆ ನೆಮ್ಮದಿಯಿಂದ ಕುಳಿತು ಊಟ ಮಾಡಲು ಕೂಡ ಸಮಯ ಇರುವುದಿಲ್ಲ. ಆದ್ದರಿಂದ, ವ್ಯಾಯಾಮಕ್ಕೆ ಸಮಯ ಸಿಗುವುದೇ ಇಲ್ಲ.

ಇದು ಉದ್ಯೋಗಸ್ಥ ಮಹಿಳೆಯರ ಪಾಡಾದರೆ ಪುರುಷರ ಪಾಡು ಇದಕ್ಕಿಂತ ಭಿನ್ನವೇನಿಲ್ಲ ವಿಶೇಷವಾಗಿ ನಗರ ಪ್ರದೇಶಗಳಲ್ಲಿ ನೌಕರಸ್ಥ ಪುರುಷರ ಜೀವನ ತುಂಬಾ ಧಾವಂತವಾಗಿರುತ್ತದೆ ಕಚೇರಿ ಮತ್ತು ಮನೆಯ ಮಧ್ಯೆ ಹೋರಾಟದಲ್ಲಿಯೇ ಅನೇಕ ಗಂಟೆಗಳ ಸಮಯ ವ್ಯರ್ಥವಾಗುತ್ತದೆ. ಕುಟುಂಬದ ಅಗತ್ಯಗಳನ್ನು ಮತ್ತು ಬೇಡಿಕೆಗಳನ್ನು ಪೂರೈಸಬೇಕಾದ ಒತ್ತಡದಲ್ಲಿ ಹೆಚ್ಚಿನ ಮಧ್ಯಮ ವರ್ಗದ ಜನರಿಗೆ ಹೆಚ್ಚುವರಿ ಸಮಯ ಕಚೇರಿ ಕೆಲಸವು ಸಾಮಾನ್ಯವಾಗಿರುತ್ತದೆ. ಇದರಿಂದ ಸ್ವಂತ ಅಗತ್ಯಗಳು ಮತ್ತು ಆರೋಗ್ಯದತ್ತ ಯಜಮಾನ ಕೊಡಲು ಬಿಡುವೇ ಇರುವುದಿಲ್ಲ.



ಆಧುನಿಕ ಮನೆಗೆಲಸ ಅಥವಾ ಕಚೇರಿ ಕೆಲಸ ವ್ಯಾಯಾಮವಲ್ಲ. ದಿನವಿಡೀ ಕುಳಿತು ಕೆಲಸ ಮಾಡಿದರೂ ದೇಹ ಅಷ್ಟಾಗಿ ಚಲಿಸುವುದಿಲ್ಲ. ಈ ಕಾರಣದಿಂದಾಗಿ, ಜೀರ್ಣಕಾರಿ ಸಮಸ್ಯೆಗಳು, ಬೊಜ್ಜು, ಕೀಲು ನೋವು, ಕಾಲಾನಂತರದಲ್ಲಿ ಉದ್ಭವಿಸಲು ಪ್ರಾರಂಭಿಸುತ್ತವೆ. ಇತ್ತೀಚಿನ ದಿನಗಳಲ್ಲಿ, ಈ ಎಲ್ಲಾ ಸಮಸ್ಯೆಗಳು ಚಿಕ್ಕ ವಯಸ್ಸಿನಲ್ಲಿಯೇ ಆಗುವುದರಿಂದ, ನಾವು ನಮ್ಮ ಕೈಯಿಂದಲೇ ಅನಾರೋಗ್ಯವನ್ನು ಬೆನ್ನಟ್ಟುತ್ತಿದ್ದೇವೆ ಎಂದು ತೋರುತ್ತದೆ. ದೇಹವು ಸರಾಗವಾಗಿ ಕಾರ್ಯನಿರ್ವಹಿಸಬೇಕೆಂದರೆ, ದೇಹಕ್ಕೆ ಕನಿಷ್ಠ ವ್ಯಾಯಾಮದ ಅಗತ್ಯವಿದೆ. ಇದಕ್ಕಾಗಿ ದಿನಚರಿಯಲ್ಲಿ ಸುಲಭವಾಗಿ ಮಾಡಬಹುದಾದ ಕೆಲಸಗಳು ಯಾವುವು ಎಂಬುದನ್ನು ನೋಡೋಣ.

### ಸೂರ್ಯ ನಮಸ್ಕಾರ

ನೀವು ಬೆಳಿಗ್ಗೆ ಎದ್ದು ಮುಖ ತೊಳೆದು ಹೊಟ್ಟೆಯನ್ನು ತೆರವುಗೊಳಿಸಿದ ನಂತರ 12 ಸೂರ್ಯ ನಮಸ್ಕಾರಗಳನ್ನು ಮಾಡಿ. ಇದು ಇಡೀ ದೇಹವನ್ನು ಹಿಗ್ಗಿಸಲು ಸಹಾಯ ಮಾಡುತ್ತದೆ. 12 ಸೂರ್ಯ ನಮಸ್ಕಾರಗಳನ್ನು ಮಾಡಲು ಸುಮಾರು 12 ರಿಂದ 15 ನಿಮಿಷಗಳನ್ನು ತೆಗೆದುಕೊಳ್ಳುತ್ತದೆ. ಆದ್ದರಿಂದ, ಬೇರೆ ಕೆಲಸಗಳಂತೆ ಇದಕ್ಕೂ 10 ನಿಮಿಷ ನೀವು ಬಿಡುವು ಮಾಡಿಕೊಳ್ಳಬೇಕು. ಇದು ಖಂಡಿತವಾಗಿಯೂ ದಿನವಿಡೀ ನಿಮಗೆ ತಾಜಾತನವನ್ನು ನೀಡುತ್ತದೆ.

**ನಡಿಗೆ:** ದಿನವಿಡೀ ಕಚೇರಿ ಕೆಲಸ ಮತ್ತೆ ಸಂಜೆ ಅಡುಗೆ, ಮನೆಗೆಲಸ ಮಾಡಿ ಮರುದಿನದ ತಯಾರಿಯಲ್ಲಿ ಸುಸ್ತಾಗುತ್ತದೆ. ಹಾಗಾಗಿ ಕೆಲವೊಮ್ಮೆ ಊಟ ಮಾಡಿ ಮಲಗಿದರೆ ಸಾಕಾಗಿರುತ್ತದೆ. ಅಂತಹ ಸಂದರ್ಭಗಳಲ್ಲಿ, ಬೇಸರವನ್ನು ನಿವಾರಿಸಲು ನಾವು ಟಿವಿ ನೋಡುವುದನ್ನು ಅಥವಾ ಪರಸ್ಪರ ಚಾಟ್ ಮಾಡುವುದನ್ನು ಆಶ್ರಯಿಸುತ್ತೇವೆ. ಆ ಸಮಯದಲ್ಲಿ ನಾವು ಮನೆಯ ಸುತ್ತಮುತ್ತ 15 ನಿಮಿಷ ನಡೆದಾಡಿದರೆ ದಿನದ ಒತ್ತಡ ದೂರವಾಗುತ್ತದೆ. ಅಲ್ಲದೆ

### ಮೆಟ್ಟಿಲು ಏರಿಳಿತಗಳು


ನೀವು ಮೇಲಿನ ಮಹಡಿಯಲ್ಲಿ ವಾಸಿಸುತ್ತಿದ್ದರೆ, ನೀವು ಎಲಿವೇಟರ್ ಬದಲಿಗೆ ಮೆಟ್ಟಿಲುಗಳನ್ನು ಬಳಸಬೇಕು. ಕಛೇರಿಯಲ್ಲಿಯೂ ಲಿಫ್ಟ್ ಬದಲು ಮೆಟ್ಟಿಲುಗಳ ಮೂಲಕ ಹತ್ತಿ ಇಳಿಯಬೇಕು. ಇದರಿಂದ ಪ್ರತಿದಿನ ಸ್ವಲ್ಪವಾದರೂ ದೇಹಕ್ಕೆ ವ್ಯಾಯಾಮದ ಪೂರೈಕೆಯಾಗುತ್ತದೆ. ದಿನಕ್ಕೆ ಕನಿಷ್ಠ 3 ರಿಂದ 4 ಬಾರಿ ಕನಿಷ್ಠ 30 ಮೆಟ್ಟಿಲುಗಳನ್ನು ಹತ್ತುವುದು ಬೆಳೆಯುವುದು ಉತ್ತಮ ಸಹಿಷ್ಣುತೆಯನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ ಮತ್ತು ತ್ರಾಣವನ್ನು ಹೆಚ್ಚಿಸುತ್ತದೆ.

ಆಹಾರ ಜೀರ್ಣವಾಗಲು ಕೂಡ ಸಹಾಯವಾಗುತ್ತದೆ. ದೇಹದ ಚಲನೆಯು ಆಳವಾದ ನಿದ್ರೆಯನ್ನು ಪಡೆಯಲು ಸಹ ಸಹಾಯ ಮಾಡುತ್ತದೆ. ಕಚೇರಿಯ ಹಾಗೂ ಮನೆಗಳ ಮಧ್ಯೆ ಪ್ರಯಾಣಿಸುವಾಗ ತಪ್ಪದೆ ಒಂದು ಕಿಲೋಮೀಟರ್ ಆದರೂ ನಡೆಯುವ ಅಭ್ಯಾಸ ಮಾಡಿಕೊಳ್ಳಿ. ಕಚೇರಿಯು ಮನೆಯಿಂದ ಹತ್ತಿರವಿದ್ದರೆ ವಾಹನಗಳನ್ನು ಬಳಸಲೇಬೇಡಿ.

# ಶ್ರೀ ಮಹೇಶ್ವರಿ ದೇವಸ್ಥಾನದಲ್ಲಿ 113ನೇ ಶರನ್ನವರಾತ್ರೋತ್ಸವ

• ಉದಯವಾಹಿನಿ, ಬೆಂಗಳೂರು

ಮಲ್ಲೇಶ್ವರದ ಸಂಪಿಗೆ ರಸ್ತೆಯ 8ನೇ ತಿರುವಿನಲ್ಲಿರುವ ಶ್ರೀ ಮಹೇಶ್ವರಿ ಅಮ್ಮನವರ ದೇವಸ್ಥಾನದಲ್ಲಿ ಅಕ್ಟೋಬರ್ 3 ರಿಂದ 12ರ ವರೆಗೆ 113ನೇ ಶರನ್ನವರಾತ್ರೋತ್ಸವ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಇದರ ಅಂಗವಾಗಿ ಉತ್ಸವದ ಎಲ್ಲಾ ದಿನಗಳಲ್ಲೂ ದೇವಿಗೆ ವಿಶೇಷ ಅಲಂಕಾರ ಇರುತ್ತದೆ.



**ಸಾಂಸ್ಕೃತಿಕ ಕಾರ್ಯಕ್ರಮಗಳು:** ಪ್ರತಿದಿನ ಸಂಜೆ 6–30ಕ್ಕೆ :- ಅಕ್ಟೋಬರ್ 3 – ವಿದ್ವಾನ್ ಶ್ರೀಧರ್ ಸಾಗರ್ ಮತ್ತು ಸಂಗಡಿಗರಿಂದ ಸ್ಯಾಕ್ಸೋಫೋನ್ ವಾದನ, ಅಕ್ಟೋಬರ್ 4 – ಅನನ್ಯ ತರಂಗ ಶಾಲೆಯ ವಿದ್ಯಾರ್ಥಿಗಳಿಂದ ಭರತನಾಟ್ಯ, ಅಕ್ಟೋಬರ್ 5 – ಪ್ರಣವಾಂಜಲಿ ಅಕಾಡೆಮಿ ಫಾರ್ ಪರ್ಫಾರ್ಮಿಂಗ್ ಆರ್ಟ್ಸ್‌ನ ವಿದ್ಯಾರ್ಥಿಗಳಿಂದ ಭರತನಾಟ್ಯ (ನಿರ್ದೇಶನ : ವಿದುಷಿ ಶ್ರೀಮತಿ ಪವಿತ್ರ ಪ್ರಶಾಂತ್. ಅಕ್ಟೋಬರ್ 6 – ಪದ್ಮಪ್ರಿಯಾ ನೃತ್ಯ ಕಲಾ ಅಕಾಡೆಮಿಯ ವಿದ್ಯಾರ್ಥಿಗಳಿಂದ ನೃತ್ಯಾಂಜಲಿ (ನಿರ್ದೇಶನ ವಿದುಷಿ ಶ್ರೀಮತಿ ಉಷಾ ಬಸಪ್ಪ). ಅಕ್ಟೋಬರ್ 7 – ಶ್ರೀಮತಿ ವಾಣಿ ಸುಂದರೇಶ್, ಶಿಷ್ಯವೃಂದದವರಿಂದ ಸಂಗೀತ ಮತ್ತು ನೃತ್ಯ. ಅಕ್ಟೋಬರ್ 8 – ಲಲಿತ ಕಲಾ ಸಂಘದವರಿಂದ ಸಂಗೀತ ಮತ್ತು ನೃತ್ಯ. ಅಕ್ಟೋಬರ್ 9 – ಗಾನಪ್ರಿಯ ಮ್ಯೂಸಿಕ್ ಅಕಾಡೆಮಿಯ ಶಿಕ್ಷಕ ಮತ್ತು ವಿದ್ಯಾರ್ಥಿಗಳಿಂದ ಭರತ ನಾಟ್ಯ ಮತ್ತು ಸಂಗೀತ. ಅಕ್ಟೋಬರ್ 10 – ಪುಷ್ಪಲತಾ ಕಲಾ ಶಾಲೆ ಇವರಿಂದ ಭರತನಾಟ್ಯ. ಅಕ್ಟೋಬರ್ 11 – ಶ್ರೀಮತಿ ಅರ್ಚನಾ ಭಟ್ ಇವರಿಂದ ನೃತ್ಯ ವೈವಿಧ್ಯ. ಅಕ್ಟೋಬರ್ 12 – ಸಮಾರೋಪ ಸಮಾರಂಭ.

# ಬೆಂಗಳೂರಿನ ಈ ಭಾಗದಲ್ಲಿ ಟ್ರಾಫಿಕ್‌ಗೆ ಮುಕ್ತಿ

• ಉದಯವಾಹಿನಿ, ಬೆಂಗಳೂರು



ಡಿಸಿಎಂ ಕೊಟ್ರು ಸಿಹಿಸುದ್ದಿ

ಸಿಲಿಕಾನ್ ಸಿಟಿ ಹಾಗೂ ಐಟಿ ಹಬ್ ಖ್ಯಾತಿ ಪಡೆದಿರುವ ಬೆಂಗಳೂರಿಗೆ ಟ್ರಾಫಿಕ್ ಸಿಟಿ ಎನ್ನುವ ಮತ್ತೊಂದು ಹೆಸರೂ ಇದೆ. ಬೆಂಗಳೂರಿನ ಬೆಳ್ಳಂದೂರು ಭಾಗದಲ್ಲಿ ಐಟಿ ಕಂಪನಿಗಳು ಹೆಚ್ಚಾಗಿರುವುದರಿಂದ ಇಲ್ಲಿ ಟ್ರಾಫಿಕ್ ಸಮಸ್ಯೆ ಕೂಡ ಹೆಚ್ಚಾಗಿತ್ತು. ಇದಕ್ಕೆ ಕಡಿವಾಣ ಹಾಕಲು ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಡಿಸಿಎಂ ಡಿ.ಕೆ.ಶಿವಕುಮಾರ್ ಪಣತೊಟ್ಟಿದ್ದಾರೆ. ಈ ಬಗ್ಗೆ ಸಿಹಿಸುದ್ದಿ ನೀಡಿರುವ ಡಿ.ಕೆ.ಶಿವಕುಮಾರ್ ಅವರು, ಬೆಳ್ಳಂದೂರಿನ ಟ್ರಾಫಿಕ್ ಸಮಸ್ಯೆಗೆ ಕಡಿವಾಣ ಹಾಕಲು ರಕ್ಷಣಾ ಇಲಾಖೆಯ 22 ಎಕರೆ ಜಮೀನನ್ನು ಸರ್ಕಾರ ಖರೀದಿಸುತ್ತಿದೆ ಎಂದು ಹೇಳಿದ್ದಾರೆ. ಈ ಸಂಬಂಧ ಶನಿವಾರ ವಿಧಾನಸೌಧದಲ್ಲಿನ ಡೆದ ಸಭೆಯಲ್ಲಿ ಹಿರಿಯ ಸೇನಾಧಿಕಾರಿ, ಲೆಫ್ಟಿನೆಂಟ್ ಜನರಲ್ ಬಸಂತ್ ಕುಮಾರ್ ರೆಪ್ಸ್‌ವಾಲ್ ಕೂಡ ಇದ್ದರು. ಟ್ರಾಫಿಕ್‌ಗೆ ಮುಕ್ತಿ ನೀಡಲು ಜಮೀನು ಖರೀದಿಸುವ ಬಗ್ಗೆ ರಕ್ಷಣಾ ಇಲಾಖೆ ಸಚಿವರು ಹಾಗೂ ಸಂಬಂಧಪಟ್ಟ ಅಧಿಕಾರಿಗಳನ್ನು ಭೇಟಿಯಾಗಿದ್ದೇನೆ.

ಜಮೀನು ನೀಡುವ ಬಗ್ಗೆ ಮನವಿಯೂ ಮಾಡಿದ್ದೇನೆ. ಹಾಗಾಗಿ ಈ ಭಾಗದಲ್ಲಿ ಟ್ರಾಫಿಕ್ ಸಮಸ್ಯೆ ನಿವಾರಿಸಲು ಪರ್ಯಾಯ ರಸ್ತೆ ನಿರ್ಮಿಸಲು ನಿರ್ಧರಿಸಿದ್ದೇವೆ. ಇದಕ್ಕಾಗಿ 12 ಎಕರೆ ಜಮೀನು ಕೊಡಲು ರಕ್ಷಣಾ ಇಲಾಖೆ ಕೂಡ ಒಪ್ಪಿದೆ ಎಂದಿದ್ದಾರೆ.

ಇದರ ಜೊತೆಗೆ ಈಜೀ ಪುರ ಹಾಗೂ ಬೆಳ್ಳಂದೂರು ನಡುವಿನ ರಸ್ತೆಗಾಗಿ ಟೆಂಡರ್ ಕೂಡ ಕರೆದಿದ್ದೇನೆ. ಹೀಗಾಗಿ ಲೆಫ್ಟಿನೆಂಟ್ ಜನರಲ್ ಬಸಂತ್ ಕುಮಾರ್ ರೆಪ್ಸ್‌ವಾಲ್ ಅವರನ್ನು ಕರೆದು ಧನ್ಯವಾದ ಹೇಳಿದ್ದೇನೆ. ಬೆಂಗಳೂರಿನ ಮತ್ತೊಂದು ಟ್ರಾಫಿಕ್ ಜಾಮ್ ಹೆಚ್ಚಾಗಿರುವ ಹೆಬ್ಬಾಳ ಕಡೆಗೂ 10 ಎಕರೆ ಜಾಗ ನೀಡುವಂತೆ ಮನವಿ ಮಾಡಿದ್ದೇನೆ ಎಂದು ಹೇಳಿದ್ದಾರೆ. ಟ್ರಾಫಿಕ್ ಸಮಸ್ಯೆ ನೀಗಿಸಲು ಒಟ್ಟಾರೆಯಾಗಿ 22 ಎಕರೆ ನೀಡುವಂತೆ ಪ್ರಸ್ತಾವನೆ ಸಲ್ಲಿಸಿದ್ದೇವೆ. ಬೆಂಗಳೂರು ನಗರದಲ್ಲಿ ಇನ್ನೂ ತುಂಬಾ ಗುಂಡಿಗಳಿವೆ. ಅವುಗಳ ದುರಸ್ತಿ ಮಾಡುತ್ತೇವೆ. ನಮ್ಮ ಅಧಿಕಾರಿಗಳು ಒಳ್ಳೆಯ ಕೆಲಸ ಮಾಡಿದ್ದಾರೆ. ಈ ಸಬಂಧ ಮತ್ತೊಂದು ಪರಿಶೀಲನಾ ಸಭೆ ಕರೆಯುತ್ತೇನೆ ಎಂದಿದ್ದಾರೆ.

> ಈ ಕಾರ್ಯಕ್ರಮಕ್ಕಾಗಿ ಆಯಪ್ ಸಹ ತಯಾರು ಮಾಡುತ್ತಿದ್ದೇವೆ. ಎಲ್ಲರೂ ಸಹ ಈ ಕಾರ್ಯಕ್ರಮದಲ್ಲಿ ಭಾಗಿಯಾಗಬೇಕು. ಸ್ವಚ್ಛತೆ ಬಗ್ಗೆ ನಾವು ಈ ಕಾರ್ಯಕ್ರಮ ಮಾಡುತ್ತೇವೆ. ಒಂದು ವರ್ಷ ಒಂದೊಂದು ಕಡೆ ಈ ಕಾರ್ಯಕ್ರಮ ಮಾಡುತ್ತೇವೆ
> –ಡಿ.ಕೆ.ಶಿವಕುಮಾರ್, ಡಿಸಿಎಂ

**ಸ್ವಚ್ಛತಾ ಕಾರ್ಯಕ್ರಮ:** ಮಹಾತ್ಮಾ ಗಾಂಧೀಜಿ ಅವರು ಸ್ವಾತಂತ್ರ್ಯ ಹೋರಾಟದಲ್ಲಿ ಧುಮುಕಿ ನೂರು ವರ್ಷಗಳಾಗಿವೆ. ಅದಕ್ಕಾಗಿ ಈ ಬಾರಿಯ ಗಾಂಧಿ ಜಯಂತಿಯನ್ನು ವಿಶೇಷವಾಗಿ ಆಚರಿಸಲು ಚಿಂತಿಸಿದ್ದೇವೆ. ಮೊದಲ ಹಂತವಾಗಿ ಸ್ವಚ್ಛತಾ ಕಾರ್ಯಕ್ರಮ ಮಾಡುತ್ತಿದ್ದೇವೆ.

ಜಿಲ್ಲಾ, ತಾಲ್ಲೂಕಿನ ಹಾಗೂ ಪಾಲಿಕೆಗಳ ಮಟ್ಟದಲ್ಲಿ ಗಾಂಧಿ ನಡಿಗೆ ಹಮ್ಮಿಕೊಂಡಿದ್ದೇವೆ ಎಂದು ಡಿಕೆಶಿ ಮಾಹಿತಿ ನೀಡಿದ್ದಾರೆ.

ಇದು ಒಂದು ಕಿ.ಮೀ ನಡಿಗೆ ಇರುತ್ತದೆ. ಬೆಂಗಳೂರಿನಲ್ಲಿ ಗಾಂಧಿ ಭವನದಿಂದ ಗಾಂಧಿ ಪ್ರತಿಮೆಯವರೆಗೂ ನಡಿಗೆ ಹಮ್ಮಿಕೊಂಡಿದ್ದೇವೆ. ಪಕ್ಷ ಭೇದ ಮರೆತು ಎಲ್ಲರೂ ಇದರಲ್ಲಿ ಭಾಗಿಯಾಗಬೇಕು. ಸ್ವಚ್ಛತೆಗಾಗಿ ಈ ಕಾರ್ಯಕ್ರಮ ಮಾಡುತ್ತಿದ್ದೇವೆ. ಇದೇ ವೇಳೆ ಸ್ವಚ್ಛತೆ ಕಾಪಾಡಲು ಪ್ರತಿಜ್ಞೆ ಹಮ್ಮಿಕೊಂಡಿದ್ದೇವೆ ಎಂದಿದ್ದಾರೆ.

# ಶೀಘ್ರದಲ್ಲೇ ಎಪಿಎಂಸಿಗಳ ಡಿಜಿಟಲೀಕರಣ ಕಾರ್ಯ ಪೂರ್ಣ

• ಉದಯವಾಹಿನಿ, ಬೆಂಗಳೂರು




ರಾಜ್ಯದಲ್ಲಿರುವ ಎಪಿಎಂಸಿಗಳನ್ನು ಡಿಜಿಟಲೀಕರಣಗೊಳಿಸುವ ನಿಟ್ಟಿನಲ್ಲಿ ಈಗಾಗಲೇ ಕೆಲಸ ಪ್ರಾರಂಭಿಸಲಾಗಿದ್ದು, ಶೀಘ್ರದಲ್ಲೇ ಅದನ್ನು ಪೂರ್ಣಗೊಳಿಸಲಾಗುವುದು ಎಂದು ಕೃಷಿ ಮಾರುಕಟ್ಟೆ, ಜವಳಿ ಮತ್ತು ಸಕ್ಕರೆ ಇಲಾಖೆ ಸಚಿವ ಶಿವಾನಂದ ಪಾಟೀಲ್ ತಿಳಿಸಿದರು.

FKCCIನ 107ನೇ ಸರ್ವಸದಸ್ಯರ ಸಭೆಯನ್ನುದ್ದೇಶಿಸಿ ಅವರಿಂದು ಮಾತನಾಡಿದರು. 5 ಸಾವಿರ ಸದಸ್ಯರನ್ನು ಹೊಂದಿರುವ ಕೈಗಾರಿಕಾ ಸಂಸ್ಥೆ ರಾಜ್ಯದ ಆರ್ಥಿಕ ಅಭಿವೃದ್ಧಿಗೆ ತನ್ನದೇ ಕೊಡುಗೆ ನೀಡಿದೆ. ನಮ್ಮ ಚುನಾವಣಾ ಪ್ರಣಾಳಿಕೆಯಲ್ಲಿ ಘೋಷಿಸಿದ್ದ ರೀತಿಯಲ್ಲೇ ರಾಜ್ಯದ ಕೃಷಿ ಮಾರುಕಟ್ಟೆಯನ್ನು ಪುನರುಜ್ಜೀವನಗೊಳಿಸುವ ಅಗತ್ಯ ಕಾನೂನು ಕೂಡ ಜಾರಿಗೆ ತಂದಿದ್ದೇವೆ. ಈ ವಿಷಯದಲ್ಲಿ ಎಫ್‌ಕೆಸಿಸಿಐ ಬಹಳಷ್ಟು ಸಲಹೆ ಹಾಗೂ ಸೂಚನೆ ನೀಡಿದ್ದನ್ನ ಇಲ್ಲಿ ಹೃದಯಪೂರ್ವಕವಾಗಿ ಸ್ಮರಿಸಿಕೊಳ್ಳುತ್ತೇನೆ. ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಈ ಬಗ್ಗೆ ಸಭೆ ನಡೆಸುವ ಮೂಲಕ ಅಗತ್ಯ ಸಲಹೆಗಳನ್ನು ಸಂಗ್ರಹಿಸಲಾಗಿದೆ.

ಇದರಲ್ಲಿ ಮಾರುಕಟ್ಟೆಯ ಡಿಜಿಟಲೀಕರಣದ ಬೇಡಿಕೆ ಪ್ರಮುಖವಾಗಿದೆ. ಈಗಾಗಲೇ ಈ ಕಾರ್ಯವನ್ನು ಪ್ರಾರಂಭಿಸಲಾಗಿದ್ದು, ಈ ವ್ಯವಸ್ಥೆಯಲ್ಲಿ ಹಲವಾರು ಪಾಲುದಾರರು ಇದ್ದಾರೆ. ಯಾರಿಗೂ ಸಮಸ್ಯೆ ಆಗದಿರುವ ರೀತಿಯಲ್ಲಿ ಹೊಸ ವ್ಯವಸ್ಥೆ ಅಳವಡಿಸುವ ಕಾರ್ಯ ಮಾಡಬೇಕಾಗಿದ್ದು, ಆ ನಿಟ್ಟಿನಲ್ಲಿ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು.

ಇದಕ್ಕೆ ರಾಜ್ಯ ಸರ್ಕಾರದಿಂದ ಹಾಗೂ ಸದಸ್ಯರಿಂದ ಉತ್ತಮ ಸಹಕಾರ ದೊರೆತಿದೆ. ಎಪಿಎಂಸಿ ಡಿಜಿಟಲೀಕರಣದಿಂದ ನಮ್ಮ ಕೈಗಾರಿಕಾ ಸಮುದಾಯಕ್ಕೆ ಬಹಳಷ್ಟು ಅನುಕೂಲವಾಗಲಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಎಫ್‌ಕೆಸಿಸಿಐ ನಿಯೋಜಿತ ಅಧ್ಯಕ್ಷರಾದ ಎಂ.ಜಿ ಬಾಲಕೃಷ್ಣ, ಹಿರಿಯ ಉಪಾಧ್ಯಕ್ಷರಾದ ಉಮಾರೆಡ್ಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ರಾಜ್ಯದಲ್ಲಿ ಬಂಡವಾಳ ಹೂಡಿಕೆ ಹೆಚ್ಚಾಗಲು ಉತ್ತಮ ವಾತಾವರಣ ನಿರ್ಮಾಣ ಮಾಡುವಲ್ಲಿ ನಿಮ್ಮ ಪಾತ್ರ ದೊಡ್ಡದಿದೆ. ಭವಿಷ್ಯದ ಜನಾಂಗವನ್ನು ಗಮನದಲ್ಲಿಟ್ಟುಕೊಂಡು ಅವರನ್ನು ಮುಂದಿನ ಸವಾಲುಗಳಿಗೆ ಸಜ್ಜು ಮಾಡುವ ಕಾರ್ಯದಲ್ಲಿ ನೀವೆಲ್ಲರೂ ತೊಡಗಿಕೊಳ್ಳಬೇಕು ಎಂದು ಇದೇ ಸಂಧರ್ಭದಲ್ಲಿ ಕರೆ ನೀಡಿದರು.

> ಬೆಂಗಳೂರು ನಗರ ವಿಶ್ವದಲ್ಲೇ ವಿಶೇಷ ಸ್ಥಾನ ಪಡೆದುಕೊಳ್ಳುವ ನಿಟ್ಟಿನಲ್ಲಿ ಎಫ್‌ಕೆಸಿಸಿಐ ಕೊಡುಗೆ ಅಪಾರವಾಗಿದೆ. ಯಾವುದೇ ನಗರ ತಾನೇ ತಾನಾಗಿ ಅಭಿವೃದ್ಧಿ ಆಗಲು ಸಾಧ್ಯವಿಲ್ಲ. ಆರ್ಥಿಕ ಚಟುವಟಿಕೆಗಳು ನಡೆಯುವುದರಿಂದ ಮಾತ್ರ ಅಭಿವೃದ್ಧಿ ಸಾಧ್ಯ. ಎಫ್‌ಕೆಸಿಸಿಐ ಸಂಸ್ಥೆ ಸದಸ್ಯರು ರಾಜ್ಯದಲ್ಲಿ ಉತ್ತಮ ಆರ್ಥಿಕ ಚಟುವಟಿಕೆಗಳು ನಡೆಯುವ ವಾತಾವರಣ ನಿರ್ಮಾಣ ಮಾಡುವಲ್ಲಿ ಪ್ರಮುಖ ಪಾತ್ರವಹಿಸಿದ್ದಾರೆ
> –ಯು.ಟಿ ಖಾದರ್
> ವಿಧಾನಸಭೆಯ ಸಭಾಧ್ಯಕ್ಷ

ಎಫ್‌ಕೆಸಿಸಿಐ ಅಧ್ಯಕ್ಷರಾದ ರಮೇಶ್ ಚಂದ್ರ ಲಹೋಟಿ ಮಾತನಾಡಿ, ಕಳೆದ ಒಂದು ವರ್ಷದಲ್ಲಿ ಎಫ್‌ಕೆಸಿಸಿಐ ವತಿಯಿಂದ ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು.

# ಭಗತ್ ನುಡಿದ ಮಾತುಗಳು ಎಂಥವರನ್ನೂ ಕೆಚ್ಚೆದೆಯ ಉತ್ತುಂಗಕ್ಕೇರಿಸಬಲ್ಲವು
## ಒಂದು ಕ್ಷಣ ತಡಿಯಿರಿ, ಈ ಕ್ರಾಂತಿಕಾರಿ ಬಗ್ಗೆ ಇನ್ನೊಂದೆರಡು ವಾಕ್ಯ ಓದಿ ಬಿಡುತ್ತೇನೆ



ಎನ್.ಎನ್.ಕಬ್ಬೂರ
• ಉದಯವಾಹಿನಿ ವಿಶೇಷ

ಸೆಪ್ಟೆಂಬರ 28 ಕ್ರಾಂತಿಯ ಕಿಡಿ ಭಗತ್ ಸಿಂಗ್ ಅವರ ಜನ್ಮದಿನ, ಈ ಕ್ರಾಂತಿಕಾರಿ ಹೋರಾಟಗಾರನಿಗೆ ನಮ್ಮ ಶತಕೋಟಿಯ ನಮನಗಳು. ಭಗತ್ ಸಿಂಗರು 1907ರ ಸೆಪ್ಟೆಂಬರ್ 28 ರಂದು ಈಗ ಪಾಕಿಸ್ತಾನಕ್ಕೆ ಸೇರಿರುವ ಲಾಯಲ್ಪುರ ಜಿಲ್ಲೆಯ ಜರಾನ್ವಾಲಾ ತಾಲ್ಲೂಕಿನ ಬಂಗಾ ಎಂಬ ಹಳ್ಳಿಯಲ್ಲಿ ಜನಿಸಿದರು. ಇವರ ತಂದೆ ಸರ್ದಾರ್ ಕಿಶನ್, ತಾಯಿ ವಿದ್ಯಾವತಿ, ಇವರಿಗೆ ಕ್ರಾಂತಿಯ ಕಿಡಿ, ಪಂಜಾಬಿನ ಪುರುಷ ಸಿಂಹ ಎಂಬ ಬಿರುದುಗಳಿದ್ದವು. ಇವರ ಪ್ರಮುಖ ಘೋಷಣೆಯೆಂದರೆ ಇಂಕ್ವಿಲಾಬ್ ಜಿಂದಾಬಾದ್ (ಕ್ರಾಂತಿ ಚಿರವಾಗಲಿ). ಇವರು ''ಹಿಂದೂಸ್ತಾನ್ ಸೋಷಿಯಲಿಸ್ಟ್ ರಿಪಬ್ಲಿಕನ್ ಅಸೋಸಿಯೇಶನ್ ಸ್ಥಾಪಕರಲ್ಲಿ ಒಬ್ಬರಾಗಿದ್ದರು.

ಕೇವಲ ರಕ್ತಪಾತವಷ್ಟೆ ಕ್ರಾಂತಿಯಲ್ಲ. ಕ್ರಾಂತಿಯೆಂದರೆ ಬರೆ ಬಾಂಬು, ಪಿಸ್ತೂಲುಗಳ ಹೋರಾಟವಲ್ಲ. ಸ್ವಾತಂತ್ರ್ಯ ಎನ್ನುವುದೇ ಕ್ರಾಂತಿ. ಶೋಷಿತ ವ್ಯವಸ್ಥೆಯನ್ನು ಕಿತ್ತೊಗೆದು ಶ್ರಮಿಕರು ವಿಮೋಚನೆ ಪಡೆಯುವುದೇ ಕ್ರಾಂತಿ. ಅಪ್ಪಟ ಕ್ರಾಂತಿಯು ಎಂದಿಗೂ ಒಡೆಯರ, ಪ್ರಭುಗಳ, ಶೋಷಕರ ವಿರೋಧಿ ಇದು ಭಗತ್ ಸಿಂಗ್ ಅವರ ಅಚ್ಚಳಿಯದ ನುಡಿಗಳು. ಕೇವಲ ಹನ್ನೆರಡನೆಯ ವಯಸ್ಸಿನಲ್ಲೇ ಜಲಿಯನ್ ವಾಲಾಬಾಗ್ ದುರಂತದಿಂದ ಮನನೊಂದು ದೇಶದ ಸ್ವಾತಂತ್ರ್ಯಕ್ಕಾಗಿ ತನ್ನನ್ನು ಮುಡಿಪಾಗಿಟ್ಟುಕೊಂಡ ಭಗತ್ ಸಿಂಗ್ ಅಂತಹ ಉದಾಹರಣೆಗಳು ಅಪರೂಪವಾದದ್ದು.



ಭಗತ್ ಸಿಂಗರ ಮೇಲೆ ಅತೀವ ಪ್ರಭಾವವನ್ನು ಬೀರಿದ್ದವರೆಂದರೆ ಅವರ ಚಿಕ್ಕಪ್ಪ ಅಜಿತ್ ಸಿಂಗ್. ಅಜಿತ್ ಸಿಂಗರು ಉಗ್ರ ಭಾಷಣಕಾರರಾಗಿದ್ದು ರೈತರ ನಡುವೆ ಹಲವಾರು ಚಳುವಳಿಗಳನ್ನು ಸಂಘಟಿಸಿ ಪೊಲೀಸರ ಕೈಗೆ ಸಿಗದೆ ಕಾರ್ಯನಿರ್ವಹಿಸುತಿದ್ದರು. ಈ ಪ್ರಭಾವದ ಜೊತೆಯಲ್ಲಿ ಜಲಿಯನ್ ವಾಲಾಬಾಗ್ನಲ್ಲಿ ಬ್ರಿಟೀಷರು ನಡೆಸಿದ ಮಾರಣಹೋಮದಿಂದುಂಟಾದ ರಕ್ತದ ಕೆಂಪು ಕಲೆ ಭಗತ್ ಸಿಂಗರಲ್ಲಿ ಸ್ವಾತಂತ್ರ್ಯ ಹೋರಾಟದ ಕಿಚ್ಚನ್ನು ಹಬ್ಬಿಸಿ ಮನಸ್ಸಿನಲ್ಲಿ ಹೋರಾಟದ ಚಿತ್ತಾರ ಮೂಡಿಸಿತ್ತು.

ಭಗತ್ ಸಿಂಗರು ಚಂದ್ರಶೇಖರ್ ಆಜಾದ್, ಬಿ.ಕೆ. ದತ್, ಜೆ.ಸಿ.ಚಟರ್ಜಿ, ಬಿಜೊಯ್ ಕುಮಾರ್ ಸಿನ್ಹಾ, ಸಚಿಂದ್ರನಾಥ ಸನ್ಯಾಲ್, ಜೋಗೇಶ್ ಚಂದ್ರ ಚಟರ್ಜಿ, ರಾಮಪ್ರಸಾದ್ ಬಿಸ್ಮಿಲ್, ಶಿವ ವರ್ಮ, ಸುಖದೇವ್ ಮುಂತಾದ ನಿಷ್ಠಾವಂತರೊಡನೆ ದೇಶಪ್ರೇಮದಿಂದ ಮಾಡಿದ ಹಲವಾರು ಹೋರಾಟಗಳು, ಬ್ರಿಟಿಷ್ ಸರ್ಕಾರಕ್ಕೆ ಹಿಡಿಸಿದ ಭಯ, ಈ ಎಲ್ಲವುಗಳ ಹಿಂದೆ ಅಡಗಿದ್ದ ಸ್ವಾರ್ಥರಹಿತ ದೇಶಪ್ರೇಮ ನಮ್ಮ ನಾಡನ್ನು ಸದಾಕಾಲ ಜಾಗೃತಗೊಳಿಸುವಂತಹದ್ದಾಗಿವೆ.

> ನೇಣುಗಂಬವೇರಿ ಸಾಯುವ ಕೆಲವೇ ನಿಮಿಷಗಳ ಮೊದಲು ಪ್ರಾರ್ಥನೆಯಂತೆ ಭಗತ್ ನುಡಿದ ಮಾತುಗಳು ಎಂಥವರನ್ನೂ ಕೆಚ್ಚೆದೆಯ ಉತ್ತುಂಗಕ್ಕೇರಿಸಬಲ್ಲವು. ''ಮೊದಲು ನಿಮ್ಮ ವೈಯುಕ್ತಿಕತೆಯನ್ನು ನುಚ್ಚುನೂರು ಮಾಡಿ, ವೈಯುಕ್ತಿಕ ಸುಖದ ಕನಸನ್ನು ಭಗ್ನಗೊಳಿಸಿ, ಆ ನಂತರದಲ್ಲಿ ಕೆಲಸ ಮಾಡಲು ತೊಡಗಿ. ನೀವು ಒಂದೊಂದೇ ಅಂಗುಲ ಮುಂದಕ್ಕೆ ಸಾಗಬೇಕು. ಅದಕ್ಕೆ ಧೈರ್ಯ ಬೇಕು; ದೃಢ ನಿರ್ಧಾರ ಬೇಕು; ನಿರಂತರ ಪರಿಶ್ರಮ ಬೇಕು. ಯಾವ ಕಷ್ಟ ಕಾರ್ಪಣ್ಯಗಳೂ ನಿಮ್ಮನ್ನು ನಿರಾಶೆಗೊಳಿಸಲಾರವು. ಯಾವ ವೈಫಲ್ಯಗಳೂ ನಿಮ್ಮನ್ನು ಕಂಗೆಡಿಸಲಾರವು. ತ್ಯಾಗ ಮತ್ತು ನರಳಾಟಗಳ ಅಗ್ನಿದಿವ್ಯವನ್ನು ಹಾದು ನೀವು ವಿಜಯಶಾಲಿಗಳಾಗುತ್ತೀರಿ, ಈ ವೈಯುಕ್ತಿಕ ಗೆಲುವುಗಳು ಕ್ರಾಂತಿಯ ಬಹುದೊಡ್ಡ ಆಸ್ತಿ....'' 1928 ರಲ್ಲಿ ಲಾಹೋರ್‌ಗೆ ಸೈಮನ್ ಆಯೋಗ ಬಂದಾಗ ಅದನ್ನು ಪ್ರತಿಭಟಿಸುತ್ತಿದ್ದ ಸ್ವಾತಂತ್ರ್ಯ ಹೋರಾಟಗಾರ ಲಾಲಾ ಲಜಪತ ರಾಯ್‌ರವರನ್ನು ಸ್ಯಾಂಡರ್ಸ್ ಎಂಬ ಪೊಲೀಸ್ ಅಧಿಕಾರಿ ಲಾಟಿ ಚಾರ್ಜ್‌ನಿಂದ ಮರಣ ಹೊಂದಿದರು ಈ ಸೇಡನ್ನು ತೀರಿಸಿಕೊಳ್ಳಲು 1928 ಡಿಸೆಂಬರ್ 17 ರಂದು ಸ್ಯಾಂಡರ್ಸ್ ನನ್ನು ಗುಂಡಿಟ್ಟು ಕೊಂದನು.

> ವೈಯುಕ್ತಿಕ ಗೆಲುವುಗಳು ಕ್ರಾಂತಿಯ ಬಹುದೊಡ್ಡ ಆಸಿ

1929 ಏಪ್ರಿಲ್ 08 ರಂದು ಭಗತ್ ಸಿಂಗ್ ಮತ್ತು ಬಟುಕೇಶ್ವರ ದತ್ತ ರವರು ಕೇಂದ್ರ ಶಾಸನ ಸಭೆಯ ಮೇಲೆ ಎರಡು ಬಾಂಬ್ ಎಸೆದು ''ಇಂಕ್ವಿಲಾಬ್ ಜಿಂದಾಬಾದ್'' (ಕ್ರಾಂತಿ ಚಿರಾಯುವಾಗಲಿ) ಎಂದು ಹೇಳುತ್ತಾ ಶರಣಾದರು. ಭಗತ್ ಸಿಂಗ್ ಸುಖದೇವ್ ಮತ್ತು ರಾಜಗುರು ರವರನ್ನು ಲಾಹೋರ್ ಜೈಲಿನಲ್ಲಿ ''ಲಾಹೋರ್ ಒಳಸಂಚು ಕಾರಣಕ್ಕಾಗಿ ಗಲ್ಲಿಗೆ ಏರಿಸಲಾಯಿತು.

ಭಗತ್ ಸಿಂಗ್ ಅದೆಷ್ಟು ಶ್ರೇಷ್ಠ ಪುಸ್ತಕಗಳನ್ನು ಓದುತ್ತಿದ್ದರೆಂದರೆ ಸಾಯುವ ದಿನದಲ್ಲಿ ಅವರನ್ನು ನೇಣುಗಂಬಕ್ಕೆ ಕರೆದೊಯ್ಯಲು ಬಂದಾಗ ಕೂಡಾ ''ಒಂದು ಕ್ಷಣ ತಡಿ ಮಹಾನ್ ಕ್ರಾಂತಿಕಾರ ಲೆನಿನ್ ಬಗ್ಗೆ ಇನ್ನೊಂದೆರಡು ವಾಕ್ಯ ಓದಿ ಬಿಡುತ್ತೇನೆ'' ಎಂದು ಹೇಳಿ ಒಂದೆರಡು ಕ್ಷಣದ ನಂತರ ''ನಡೆಯಿರಿ ಹೋಗೋಣ'' ಎಂದರಂತೆ.

1931ರ ಮಾರ್ಚ್ 23 ರಂದು ಅವರು ನಗುನಗುತ್ತಾ ಗೆಳೆಯ ಸುಖದೇವ್, ರಾಜ್ ಗುರು ಅವರ ಜೊತೆಗೂಡಿ ಗಲ್ಲಿಗೇರಿದಾಗ ಅವರಿಗಿನ್ನೂ 23ರ ಹರೆಯ. ಈ ಮಹಾನ್ ದೇಶಪುತ್ರನ ಜನ್ಮದಿನದ ಸಂದರ್ಭದಲ್ಲಿ ಅವರಿಗೆ ನಮನ ಸಲ್ಲಿಸೋಣ. ಇಂತಹ ಮಹನೀಯರು ದೇಶಕ್ಕೆ ಬಲಿದಾನ ಸಲ್ಲಿಸಿ ತಂದುಕೊಟ್ಟ ಸ್ವಾತಂತ್ರ್ಯಕ್ಕೆ ಯೋಗ್ಯರಾಗಿ ಬಾಳುವ ಸಂಕಲ್ಪ ಕೈಗೊಳ್ಳೋಣ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಸಾಯಂಕಾಲ | 04:30 ರಿಂದ 06:00 |
| ಗುಳಿಕಕಾಲ | ಮಧ್ಯಾಹ್ನ | 03:00 ರಿಂದ 04:30 |
| ಯಮಗಂಡಕಾಲ | ಮಧ್ಯಾಹ್ನ | 12:00 ರಿಂದ 01:30 |

**ಮೇಷ:** ನೀವು ಚೈತನ್ಯದಿಂದ ತುಂಬಿರುತ್ತೀರಿ ಮತ್ತು ಇಂದು ಅಸಾಮಾನ್ಯವಾದ ಧ್ಯೇನಾದರೂ ಸಾಧಿಸುತ್ತೀರಿ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು.

**ವೃಷಭ:** ನೀವು ಸಾಕಷ್ಟು ವಿಶ್ರಾಂತಿ ತೆಗೆದುಕೊಳ್ಳುತ್ತಿರದಿದ್ದಲ್ಲಿ ನಿಮಗೆ ತುಂಬಾ ದಣಿವಾದಂತೆನಿಸುತ್ತದೆ ಮತ್ತು ನಿಮಗೆ ಅಧಿಕ ವಿಶ್ರಾಂತಿ ಬೇಕಾಗುತ್ತದೆ. ಹಣದ ಚಲನೆ ದಿನವಿಡೀ ಮುಂದುವರೆಯುತ್ತದೆ.

**ಮಿಥುನ:** ನಿಮ್ಮ ಸಂಗಾತಿಯ ಸೋಮಾರಿತನ ಇಂದು ನಿಮ್ಮ ಅನೇಕ ಕೆಲಸಗಳಿಗೆ ತೊಂದರೆಯುಂಟುಮಾಡಬಹುದು. ಇಂದು ಯಾವುದೇ ಗೊಂದಲವು ದಿನವಿಡೀ ನಿಮ್ಮನ್ನು ಕಾಡಬಹುದು.

**ಕರ್ಕಾಟಕ:** ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು.

**ಸಿಂಹ:** ತುಂಬಾ ಚಿಂತೆ ಮಾನಸಿಕ ಶಾಂತಿಗೆ ಭಂಗ ತರಬಹುದು. ಆತಂಕ, ಉದ್ವೇಗದ ಪ್ರತೀ ತುಣುಕೂ ದೇಹದ ಮೇಲೆ ಪ್ರತಿಕೂಲ ಪರಿಣಾಮ ಬೀರುವುದರಿಂದ ಇದನ್ನು ತಡೆಯಿರಿ.

**ಕನ್ಯಾ:** ಕುಟುಂಬದ ಸದಸ್ಯರ ಒಳ್ಳೆಯ ಸಲಹೆ ನಿಮ್ಮ ಮಾನಸಿಕ ಒತ್ತಡವನ್ನು ಕಡಿಮೆ ಮಾಡುತ್ತದೆ. ನಿಮ್ಮ ಪ್ರೇಮಮಯ ವಿಲಕ್ಷಣತೆಗಳನ್ನು ಅಭಿವ್ಯಕ್ತಗೊಳಿಸಿ. ನಿಮ್ಮ ಖ್ಯಾತಿಗೆ ಧಕ್ಕೆ ತರುವವರೊಂದಿಗೆ ಸಂಬಂಧ ಹೊಂದಬೇಡಿ.

**ತುಲಾ:** ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ನಿಮ್ಮ ಹಣ ಖರ್ಚಾಗುತ್ತಿದೆ ಎಂಬುದರ ಮೇಲೆ ನಿಗಾ ಇರಿಸುವ ಅಗತ್ಯವಿದೆ.

**ವೃಶ್ಚಿಕ:** ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದು ಹಾಗೂ ಕೆಟ್ಟದ್ದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ಧಿ ಜೀವನದ ಹೆಬ್ಬಾಗಿಲಾಗಿದೆ.

**ಧನಸ್ಸು:** ಇಂದು ನೀವು ನಿಮ್ಮ ಸುತ್ತಲೂ ನಿಮ್ಮ ಪ್ರಿಯತಮೆಯ ಪ್ರೀತಿಯನ್ನು ಅನುಭವಿಸುತ್ತೀರಿ. ಇದು ಒಂದು ಸುಂದರವಾದ ಅದ್ಭುತ ದಿನ. ಇಂದು ನೀವು ಯಾವುದೇ ಕಾರಣವಿಲ್ಲದೆ ಕೆಲವು ಜನರೊಂದಿಗೆ ಗೊಂದಲ

**ಮಕರ:** ನೀವು ನೀವು ಸುತ್ತಲೂ ನಿಮ್ಮ ಪ್ರಿಯತಮೆಯ ಪ್ರೀತಿಯನ್ನು ಅನುಭವಿಸುತ್ತೀರಿ. ಇದು ಒಂದು ಸುಂದರವಾದ ಅದ್ಭುತ ದಿನ. ನೀವು ಯಾವುದೇ ಕಾರಣವಿಲ್ಲದೆ ಕೆಲವು ಜನರೊಂದಿಗೆ ಗೊಂದಲ ಮಾಡಬಹುದು.

**ಕುಂಭ:** ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಧೃತಿಗೆಡಬೇಡಿ ಹಾಗೂ ನಿರೀಕ್ಷಿತ ಫಲಿತಾಂಶ ಪಡೆಯಲು ಕಠಿಣ ಪರಿಶ್ರಮಪಡಿ. ಈ ಹಿನ್ನಡೆಗಳು ನಿಮ್ಮ ಯಶಸ್ಸಿನ ಸೋಪಾನಗಳಾಗಿರಲಿ.

**ಮೀನ:** ನೀವು ಇಂದು ನಿಮ್ಮ ಸಂಗಾತಿಯ ಜೊತೆಗೆ ನಿಮ್ಮ ಜೀವನದ ಅತ್ಯುತ್ತಮ ದಿನವನ್ನು ಕಳೆಯುತ್ತೀರಿ. ವ್ಯವಹಾರದಲ್ಲಿನ ಲಾಭವು ಇಂದು ಈ ರಾಶಿಚಕ್ರದ ವ್ಯಾಪಾರಿಗಳಿಗೆ ಒಂದು ಕನಸು ನನಸಾಗುತ್ತದೆ.

# ಹಿಂದೂ ಮಹಾಗಣಪತಿ ಬೃಹತ್ ಶೋಭಾಯಾತ್ರೆ ಆರಂಭ

### ವಿಶ್ವ ಹಿಂದೂ ಪರಿಷತ್ ಮತ್ತು ಬಜರಂಗದಳದ ನೇತೃತ್ವದಲ್ಲಿ ಪ್ರತಿಷ್ಠಾಪಿಸಿದ್ದ ಹಿಂದೂ ಮಹಾ ಗಣಪತಿಯ ವಿಸರ್ಜನಾ ಮೆರವಣಿಗೆ

• ಉದಯವಾಹಿನಿ ಚಿತ್ರದುರ್ಗ

ಕೋಟೆನಾಡು ಚಿತ್ರದುರ್ಗದಲ್ಲಿ ಇಂದು (ಸೆ.29) ಹಿಂದೂ ಮಹಾಗಣಪತಿ ವಿಸರ್ಜನಾ ಮೆರವಣಿಗೆ ಆರಂಭವಾಗಿದೆ. ವಿಶ್ವ ಹಿಂದೂ ಪರಿಷತ್ ಮತ್ತು ಬಜರಂಗದಳದ ನೇತೃತ್ವದಲ್ಲಿ ನಗರದ ಜೈನಧಾಮ ಬಳಿ ಪ್ರತಿಷ್ಠಾಪಿಸಿದ್ದ ಹಿಂದೂ ಮಹಾಗಣಪತಿಯ ವಿಸರ್ಜನಾ ಮೆರವಣಿಗೆಯನ್ನು ಬೃಹತ್ ಶೋಭಾಯಾತ್ರೆಯೊಂದಿಗೆ ಅದ್ದೂರಿಯಾಗಿ ಆರಂಭವಾಯಿತು.

ಈ ಬಾರಿ ಗಣೇಶೋತ್ಸವಕ್ಕೆ ಭಜರಂಗದಳ ರಾಷ್ಟ್ರೀಯ ಸಂಯೋಜಕ ಧೀರಜ್ ದೋಣಿರಿಯಾ ಚಾಲನೆ ನೀಡಿದರು. ವಿವಿಧ ಧಾರ್ಮಿಕ ಪೂಜೆಗಳನ್ನು ನೆರವೇರಿಸುವ ಮೂಲಕ ಬೃಹತ್ ಶೋಭಾಯಾತ್ರೆಗೆ ಚಾಲನೆ ದೊರೆಯಿತು. ಮೆರವಣಿಗೆಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಲಕ್ಷಕ್ಕೂ ಹೆಚ್ಚು ಭಕ್ತರು ಹರಿದು ಬಂದಿದ್ದರು. ಶೋಭಾಯಾತ್ರೆಯಲ್ಲಿ ಕುಣಿದು ಕುಪ್ಪಳಿಸಿ ಭಕ್ತಿಯ ಪರಾಕಷ್ಟೆ ಮೆರೆದರು. ಮಧ್ಯಾಹ್ನ 12ಕ್ಕೆ ಜೈನಧಾಮದಿಂದ ಹೊರಟ ಗಣೇಶ ಮೂರ್ತಿಯ ಮೆರವಣಿಗೆ ಚಂದ್ರವಳ್ಳಿಯಲ್ಲಿ ಕೊನೆಗೊಳ್ಳಲಿದೆ. ಚಂದ್ರವಳ್ಳಿಯಲ್ಲಿ ನಿರ್ಮಿಸಿದ ಬಾವಿಯಲ್ಲಿ ತಡರಾತ್ರಿ ವಿಸರ್ಜನೆ ಮಾಡಲಾಗುತ್ತದೆ.

**ಚಿತ್ರದುರ್ಗ ಹಿಂದೂ ಮಹಾಗಣಪತಿಯ ಮುಕ್ತಿ ಬಾವುಟವನ್ನು ಎನ್.ಜಿ.ಹಳ್ಳಿ ಮಂಜುನಾಥ್ 2.5 ಲಕ್ಷ ರೂಪಾಯಿಗೆ ಹರಾಜಿನಲ್ಲಿ ತಮ್ಮದಾಗಿಸಿಕೊಂಡರು. ಹೂವಿನ ಹಾರವನ್ನು 1.60 ಲಕ್ಷ ರೂಪಾಯಿಗೆ ತೊರೆಕೋಲಮ್ಮನಹಳ್ಳಿ ತಿಪ್ಪೇಸ್ವಾಮಿ, ನೋಟಿನ ಹಾರ 2.5 ಲಕ್ಷ ರೂಪಾಯಿಗೆ ಕೆ.ಜಿ.ಟಿ.ಗುರುಮೂರ್ತಿ, ಪುರಿ ಜಗನ್ನಾಥ ಮಂದಿರ ಪ್ರತಿಕೃತಿಯನ್ನು 2.25 ಲಕ್ಷ ರೂಪಾಯಿಗೆ ಕೆ.ಸಿ.ನಾಗರಾಜ್, ಫಲಹಾರವನ್ನು 61,000 ರೂಪಾಯಿಗೆ ಉಮೇಶ್ ಕಾರಜೋಳ ಪಡೆದರು.**

ಶೋಭಾಯಾತ್ರೆಯ ಅಂಗವಾಗಿ ನಿರ್ಮಿಸಿದ್ದ ಸ್ತಬ್ಧಚಿತ್ರಗಳು ವಿಶೇಷ ಗಮನ ಸೆಳೆದವು. ಮರಾಠ ಸಮಾಜದ ಶಿವಾಜಿ, ಸಂಘಪರಿವಾರ ರೂಪಿಸಿದ್ದ ಶ್ರೀರಾಮ, ಆಂಜನೇಯ ಹಾಗೂ ಸಾವರ್ಕರ್ ಸ್ತಬ್ಧಚಿತ್ರಗಳು ಮೆರವಣಿಗೆಯಲ್ಲಿ ಸಾಗಿದವು. ಸ್ತಬ್ಧಚಿತ್ರ ಹಾಗೂ ಗಣಪತಿ ಮೂರ್ತಿಯ ಎದುರು ಸೆಲ್ಫಿ ತೆಗೆದುಕೊಳ್ಳುತ್ತಿದ್ದ ಭಕ್ತರು, ದೇವರಿಗೆ ಭಕ್ತಿ ಸಮರ್ಪಿಸಿ ಪುನೀತರಾಗುತ್ತಿದ್ದರು.


ಉದಯವಾಹಿನಿ ಚಿತ್ರ

**ದೀಪಾಲಂಕಾರದಿಂದ ಝಗಮಗ**

**ಮೆರವಣಿಗೆ ಸಾಗುವ ಬಿ.ಡಿ.ರಸ್ತೆ ಹಾಗೂ ಹೊಳಲ್ಕೆರೆ ಮಾರ್ಗವನ್ನು ದೀಪಾಲಂಕಾರ ಮಾಡಲಾಗಿತ್ತು. ಅನೇಕ ಖಾಸಗಿ ಕಟ್ಟಡಗಳು ಕೂಡ ದೀಪಾಲಂಕಾರದಿಂದ ಝಗಮಗಿಸುತ್ತಿದ್ದವು. ವಾಸವಿ ವೃತ್ತ ಹಾಗೂ ಮಹಾವೀರ ವೃತ್ತದಲ್ಲಿ ನಿರ್ಮಿಸಿದ್ದ ಮಂಟಪಗಳು ಗಮನ ಸೆಳೆದವು.**

**ಕುಣಿದು ಕುಪ್ಪಳಿಸಿ ಭಕ್ತಿಯ ಪರಾಕಷ್ಟೆ**

ಮೆರವಣಿಗೆಯುದ್ದಕ್ಕೂ ಜೈ ಶ್ರೀರಾಮ್, ಗಣಪತಿ ಬಪ್ಪ ಮೋರಯಾ, ಭಾರತ್ ಮಾತಕೀ ಜೈ' ಘೋಷಣೆಗಳು ಮೊಳಗಿದವು. ಛತ್ರಪತಿ ಶಿವಾಜಿ, ಭಗತ್ ಸಿಂಗ್, ಆಜಾದ್, ಹನುಮಂತ, ಬೃಹತ್ ಗಾತ್ರದ ಕೇಸರಿ ಬಾವುಟಗಳು ಎಲ್ಲೆಡೆ ರಾರಾಜಿಸಿದವು. ಶೋಭಾಯಾತ್ರೆಗೆ ರಾಜ್ಯದ ವಿವಿಧ ಭಾಗಗಳಿಂದ ಜನಸಾಗರ ಹರಿದು ಬಂದಿದೆ.

ದಾವಣಗೆರೆ, ಬೆಂಗಳೂರು, ವಿಜಯನಗರ, ತುಮಕೂರು, ಬಳ್ಳಾರಿ, ಶಿವಮೊಗ್ಗ, ಹಾಸನ, ಹಾವೇರಿ ಸೇರಿ ಹಲವು ಜಿಲ್ಲೆಗಳಿಂದ ಜನರು ಆಗಮಿಸಿದ್ದರು. ಕೇಸರಿ ಶಲ್ಯ, ಹಣೆಗೆ ತಿಲಕ ಇಟ್ಟುಕೊಂಡಿದ್ದ ಯುವಪಡೆ ಹುಮ್ಮಸ್ಸಿನಿಂದ ಕಾಣಿಸಿಕೊಂಡಿತು. ಅಷ್ಟೇ ಅಲ್ಲದೆ ಗುಂಪುಗುಂಪಾಗಿ ಯುವತಿಯರು ಕೂಡ ಡಿಜೆ ಸದ್ದಿಗೆ ನೃತ್ಯ ಪ್ರದರ್ಶಿಸಿದರು.

**ಪೊಲೀಸರ ಬಿಗಿ ಭದ್ರತೆ:** ಈ ಅದ್ದೂರಿ ಶೋಭಾಯಾತ್ರೆ ನಡೆಯುತ್ತಿರುವುದರಿಂದ ಭಾರಿ ಜನಸ್ತೋಮ ಹರಿದುಬಂದಿತ್ತು. ಅದ್ದರಿಂದ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿತ್ತು. ದಾರಿಯುದ್ದಕ್ಕೂ ಅಳವಡಿಸಿದ್ದ ಸಿಸಿಟಿವಿ ಕ್ಯಾಮರಾ ಮೆರವಣಿಗೆಯ ಮೇಲೆ ನಿಗಾ ಇಟ್ಟಿದ್ದವು. ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ಮೆರವಣಿಗೆಯ ಭದ್ರತೆಯನ್ನು ಪರಿಶೀಲಿಸುತ್ತಿದ್ದರು. ವೀಕ್ಷಣಾ ಗೋಪುರದ ಮೇಲೆ ನಿಂತಿದ್ದ ಪೊಲೀಸರು ಮೆರವಣಿಗೆಯ ದೃಶ್ಯವನ್ನು ಚಿತ್ರೀಕರಿಸಿದರು. ನಗರ ಪ್ರವೇಶಿಸುವ ಹಾಗೂ ಹೊರಹೋಗುವ ಎಲ್ಲಾ ವಾಹನ, ವ್ಯಕ್ತಿಗಳ ಮೇಲೆ ನಿಗಾವಹಿಸಲಾಗಿತ್ತು.

ನಗರದ ಪ್ರಮುಖ ರಸ್ತೆ, ವೃತ್ತ ಹಾಗೂ ಪ್ರತಿಮೆಗಳ ಸುತ್ತ ಕೇಸರಿ ಬಾವುಟ, ಬ್ಯಾನರ್ ಹಾಗೂ ಬಂಟಿಂಗ್ಸ್ ಕಟ್ಟಲಾಗಿತ್ತು. ಮದಕರಿ ನಾಯಕ ವೃತ್ತವನ್ನು ರಾಜ ವೈಭವದ ಮಾದರಿಯಲ್ಲಿ ಸಿಂಗರಿಸಲಾಗಿತ್ತು. ಒನಕೆ ಓಬವ್ವ ವೃತ್ತ, ಕನಕ ವೃತ್ತ, ಸಂಗೊಳ್ಳಿ ರಾಯಣ್ಣ ವೃತ್ತ, ಗಾಂಧಿ ವೃತ್ತಗಳು ಕಂಗೊಳಿಸುತ್ತಿದ್ದವು.

## ಪವ್ಡರ್ ಫ್ಲಾಂಟ್‌ನಿಂದ ಪರಿಸರ ಮಾಲಿನ್ಯ ಕಾಯ್ದೆ ಉಲ್ಲಂಘನೆ

### ಶಾಲಾಮಕ್ಕಳಿಗೆ ತೊಂದರೆ: ಸೂಕ್ತ ಕ್ರಮಕ್ಕೆ ಸಂಘಟನೆ ಆಗ್ರಹ

• ಉದಯವಾಹಿನಿ,ಚಿಂಚೋಳಿ

ಪಟ್ಟಣದ ಹೊರವಲಯದಲ್ಲಿರುವ ಮೆಟ್ರಿಕ್ ಆಗ್ರೋ ಪವ್ಡರ ಲಿಮಿಟೆಡ್ ಕಾರ್ಖಾನೆಯಿಂದ ವಿಷಕಾರಿ ಹೊಗೆ,ಕಾರ್ಖಾನೆಯಲ್ಲಿ ಗಬ್ಬುನಾರುವ ವಾಸನೆ,ಕಾರ್ಖಾನೆಯ ವೇಸ್ಟ್ ಮುಲ್ಲಾಮಾರಿ ನದಿಗೆ ಹರಿಬಿಡಲಾಗುತ್ತಿದೆ ಇದರಿಂದ ಶಾಲಾ ಮಕ್ಕಳಿಗೆ,ಗರ್ಭಿಣಿಯರಿಗೆ,ಕಾರ್ಮಿಕರಿಗೆ ತೊಂದರೆ ಆಗುತ್ತಿದ್ದು ಪರಿಸರ ಮಾಲಿನ್ಯ ಸಹ ಉಲ್ಲಂಘನೆ ಮಾಡುತ್ತಿದ್ದು ಕಾರ್ಖಾನೆ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ರಾಜ್ಯ ಮಾಹಿತಿ ಹಕ್ಕು ಹಾಗೂ ಸಾಮಾಜಿಕ ಕಾರ್ಯಕರ್ತರ ವೇದಿಕೆಯ ಜಿಲ್ಲಾಧ್ಯಕ್ಷ ರಾಜೇಂದ್ರ ಪ್ರಸಾದ್ ಮತ್ತು ತಾಲ್ಲೂಕಾಧ್ಯಕ್ಷ ಅನೀಲ ಬಿರಾದಾರ ಆಗ್ರಹಿಸಿದ್ದಾರೆ. ಪಟ್ಟಣಕ್ಕೆ ಆಗಮಿಸಿದ ಜಿಲ್ಲಾಧಿಕಾರಿಗಳಿಗೆ ಮನವಿಪತ್ರ ಸಲ್ಲಿಸಿದ ಅವರು,ಪೋಲಕಪಳ್ಳಿ ವ್ಯಾಪ್ತಿಯಲ್ಲಿ ಬರುವ ಪವ್ಡರ ಫ್ಲಾಂಟ್ ಅನ್ನು ಕಾಯ್ದೆ ಕಾನೂನು ಮಾರ್ಗಸೂಚಿಗಳು ಪಾಲನೆ ಮಾಡದೆ ಕಾರ್ಖಾನೆಯಿಂದ ಅತ್ಯಂತ ವಿಷಕಾರಿ ಕಪ್ಪು ಹೊಗೆಯನ್ನು ಹೊರಗೆ ಮತ್ತು ಒಳಗೆ ಹರಿಬಿಡುತ್ತಿದ್ದಾರೆ ಇದರಿಂದ ಸುತ್ತಮುತ್ತಲಿನ ಪ್ರದೇಶದ ಪೋಲಕಪಳ್ಳಿ ಗ್ರಾಮ,ಆದರ್ಶ ಶಾಲೆ,ವಸತಿ ನಿಲಯ,ಹೊರ ಕ್ರಿಡಾಂಗಣದಲ್ಲಿ ಕ್ರಿಡಾಪಟ್ಟುಗಳಿಗೆ ಸಾಕಷ್ಟು ತೊಂದರೆ ಆಗುತ್ತಿದೆ ಇದರಿಂದ ಸಾಕಷ್ಟು ರೋಗರುಜಿನಗಳು ಬರುವ ಸಾಧ್ಯತೆ ಹೆಚ್ಚಾಗಿರುತ್ತದೆ,ಗರ್ಭಿಣಿಯರಿಗೆ ತೊಂದರೆ ಆಗುತ್ತೇ,ಹಾಗೆಯೇ ಒಳಗಡೆ ಕೆಲಸ ಮಾಡುವ ಕಾರ್ಮಿಕರಿಗೆ ಕೂಡ ಹೊಗೆಯಲ್ಲಿ ಕೆಲಸ ಮಾಡುವ ಪರಿಸ್ಥಿತಿ ನಿರ್ಮಾಣವಾಗಿದ್ದು, ಒಳಗಡೆ ಗಬ್ಬುನಾರುವ ವಾಸನೆ ಸ್ವಚ್ಛತೆಯಿಲ್ಲದೆ ರೋಗರುಜಿನಗಳು ಬರುವ ಸಾಧ್ಯತೆ ಹೆಚ್ಚಾಗಿರುತ್ತದೆ.


ಉದಯವಾಹಿನಿ ಚಿತ್ರ

**ಒಳಗಡೆ ಗಬ್ಬುನಾರುವ ವಾಸನೆ**

ಕಾರಣ ಜಿಲ್ಲಾಧಿಕಾರಿಗಳು ತಾವು ಕಾರ್ಖಾನೆಯನ್ನು ಒಮ್ಮೆ ಆಗಮಿಸಿ ಪರೀಶೀಲಿಸಬೇಕು ಹಾಗೂ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ ಕಾರ್ಖಾನೆ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದರು.

## ಸೇತುವೆ ನಿರ್ಮಾಣಕ್ಕೆ ಅಂದಾಜು ಪಟ್ಟಿ ಸಲ್ಲಿಕೆ

• ಉದಯವಾಹಿನಿ, ಚಿಕ್ಕಮಗಳೂರು

ಚಿಕ್ಕಮಗಳೂರು ಜಿಲ್ಲೆಯ ಕಳಸ ತಾಲ್ಲೂಕಿನ ಸಂಸೆ ಗ್ರಾಮ ಪಂಚಾಯತ್ ವ್ಯಾಪ್ತಿಯ ಕೋಣೆಗೋಡು ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಸೌಲಭ್ಯ ಇಲ್ಲದೇ ಮೃತಪಟ್ಟ ಯುವಕನನ್ನು ಕಾಲು ದಾರಿ ಮೂಲಕ ಜೋಳಿಗೆಯಲ್ಲಿ ಹೊತ್ತೂಯ್ದ ಸುದ್ದಿ ಪ್ರಕಟವಾದ ಪರಿಣಾಮ ಬೆನ್ನಲ್ಲೇ ಎಚ್ಚೆತ್ತ ಗ್ರಾಮ ಪಂಚಾಯತ್ ಗ್ರಾಮದ ಸೇತುವೆ ಹಾಗೂ ರಸ್ತೆ ಕಾಂಕ್ರೀಟಿಕರಣಕ್ಕೆ 1.80 ಕೋಟಿ ರೂ.ಅಂದಾಜು ಪಟ್ಟಿ ತಯಾರಿಸಿ ಅನುಮೋದನೆಗಾಗಿ ಸಲ್ಲಿಸಿದೆ.

ದಾರಿ ಇಲ್ಲದೇ ಯುವಕನ ಶವ ಜೋಳಿಗೆಯಲ್ಲಿ ಹೊತ್ತೂಯ್ದರು ಶೀರ್ಷಿಕೆಯಡಿ ಸೆ. 2ರಂದು ವರದಿ ಪ್ರಕಟವಾಗಿತ್ತು. ಪರಿಣಾಮ ವಾಸ್ತವಾಂಶ ಅರಿತು ಕೈಗೊಂಡ ಕ್ರಮಗಳ ಕುರಿತು ಅನುಪಾಲನಾ ವರದಿ ಸಲ್ಲಿಸುವಂತೆ ಗ್ರಾಮ ಪಂಚಾಯತ್‌ಗೆ ಸರಕಾರದಿಂದ ನಿರ್ದೇಶನ ನೀಡಲಾಗಿತ್ತು. ಆ ಬಳಿಕ ರಾಜ್ಯ ಮಾನವ ಹಕ್ಕು ಆಯೋಗದ ನ್ಯಾಯಾಂಗ ಸದಸ್ಯ ಎಸ್.ಕೆ.ವೆಂಟಿಗೋಡಿ ಅವರು ಗ್ರಾಮಕ್ಕೆ ಭೇಟಿ ನೀಡಿ ಮೂಲಸೌಕರ್ಯಗಳನ್ನು ಪರಿಶೀಲಿಸಿದ್ದರು.


ಉದಯವಾಹಿನಿ ಚಿತ್ರ

ಗ್ರಾಮಕ್ಕೆ ಕಳೆದ ಸಾಲಿನಲ್ಲಿ ರಸ್ತೆ ನಿರ್ಮಾಣಕ್ಕೆ 40 ಲಕ್ಷ ಅನುದಾನ ಕಾಯ್ದಿರಿಸಿದ್ದು ಅನುದಾನ ಕೊರತೆಯಿಂದ ಕಾಮಗಾರಿ ಆರಂಭವಾಗಿರಲಿಲ್ಲ. ಈಗ ರಸ್ತೆ, ಸೇತುವೆ ಕಾಮಗಾರಿಗೆ 1.80 ಕೋಟಿ ರೂ. ಅಂದಾಜು ಪಟ್ಟಿ ತಯಾರಿಸಿ ಮಂಜೂರಾತಿ ಕೋರಿ ಸಲ್ಲಿಕೆ ಮಾಡಲಾಗಿದೆ ಎಂದು ಸಂಸೆ ಗ್ರಾಮ ಪಂಚಾಯತ್ ಪಿಡಿಒ ಸಿಎಂ ಕಚೇರಿಗೆ ಸಲ್ಲಿಸಿರುವ ಅನುಪಾಲನಾ ವರದಿಯಲ್ಲಿ ತಿಳಿಸಿದ್ದಾರೆ.

## ಪುರಸಭೆ ಅಧ್ಯಕ್ಷರ ಕಾಳಜಿಗೆ ಸಿದ್ದವಾಯಿತು ರಸ್ತೆ

• ಉದಯವಾಹಿನಿ, ಮುದ್ದೇಬಿಹಾಳ

ಮುದ್ದೇಬಿಹಾಳ ಬಸ್ ನಿಲ್ದಾಣದ ಡಿಪೋಗೆ ಅಂಟಿಕೊಂಡ ಮುಖ್ಯ ಬಜಾರ್ ಗೆ ಸಂಪರ್ಕಿಸುವ ರಸ್ತೆ ಬಸ್ ನಿಲ್ದಾಣದ. ಶೌಚಾಲಯದ ಗಲೀಜು ನೀರು ಹರಿದು ಮೂಗು ಮುಚ್ಚಿಕೊಂಡು ತಿರುಗುವ ಪರಿಸ್ಥಿತಿ ಇತ್ತು ಸಾರ್ವಜನಿಕರು ಇದರ ಬಗ್ಗೆ ಸಾಕಷ್ಟು ಬಾರಿ ದೂರಿದ್ದರು ಮತ್ತು ಮಾಧ್ಯಮಗಳು ರಸ್ತೆ ಸಮಸ್ಯೆ ಕುರಿತು ವರದಿಯ ಮೂಲಕ ಬೆಳಕನ್ನು ಚೆಲ್ಲಿದ್ದವು ಇದನ್ನು ಗಮನಿಸಿದ ನೂತನ ಪುರಸಭೆ ಅಧ್ಯಕ್ಷ ಮಹಿಬೂಬ ಗೊಳಸಂಗಿ ಕೂಡಲೇ ಆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಶೌಚಾಲಯ ನೀರು ಹರಿಯದಂತೆ ಕ್ರಮ ಕೈಗೊಂಡು ತ್ವರಿತವಾಗಿ ಪುರಸಭೆ ಸಾಮನ್ಯ ನಿಧಿಯಿಂದ ಹದಗೆಟ್ಟ ರಸ್ತೆಯನ್ನು ಪವೇರ್ ಬ್ಲಾಕ್ ರಸ್ತೆಯನ್ನಾಗಿಸಿ ಜನ ಸಂಚಾರಕ್ಕೆ ಅನುಕೂಲ ಮಾಡಿದ್ದಾರೆ

ಪುರಸಭೆ ಮುಖ್ಯಾಧಿಕಾರಿಗಳೊಂದಿಗೆ ಭೇಟಿ ನೀಡಿದ ಪುರಸಭೆ ಅಧ್ಯಕ್ಷ ಮಹಿಬೂಬ ಗೊಳಸಂಗಿ ಈಗಾಗಲೇ ಸಾಮಾನ್ಯ ನಿಧಿಯಿಂದ ರಸ್ತೆ ನಿರ್ಮಾಣ ಮಾಡಲಾಗಿದೆ ರಸ್ತೆಯ ಉದ್ದಕ್ಕೂ ಇರುವ ತಡೆಗೋಡೆ ಪ್ಲಾಸ್ಟರ್ ನಂತರ ನಮ್ಮ ಉತ್ತರ ಕರ್ನಾಟಕದ ಪ್ರವಾಸಿ ತಾಣಗಳ ಬಿತ್ತಿ ಚಿತ್ರಗಳನ್ನು ಬಿಡಿಸಿ ಸೌಂದರ್ಯಕರಣಗೊಳಿಸಲಾಗುತ್ತದೆ ಮತ್ತು ವಿದ್ಯುತ್ ಹಾಗೂ ಸಿಸಿ ಕ್ಯಾಮರಾ ಅಳವಡಿಸಲಾಗುತ್ತದೆ ಎಂದರು. ಪುರಸಭೆ ಮುಖ್ಯಾಧಿಕಾರಿ ಮಲ್ಲಿಕಾರ್ಜುನ ಬಿರಾದಾರ ಈ ರಸ್ತೆ ಪ್ರವೇಶದಲ್ಲಿ ಬ್ಯಾರಿಕಾಡ್ ಹಾಕಿ ಬೈಕ್ ಸಂಚಾರಕ್ಕೆ ಬ್ರೇಕ್ ಹಾಕಿ ಜನರು ತಿರುಗಾಡಲು ರೌಂಡ್ ಗೇಟ್ ಅಳವಡಿಸುತ್ತೇವೆ ಎಂದರು. ಸದ್ಯವಿರುವ ಸಾರಿಗೆ ನಿಲ್ದಾಣದ ಶೌಚಾಲಯ ಬೇರೆಡೆ ನಿರ್ಮಾಣ ಮಾಡಿ ಶಿಥಲಗೊಂಡ ಶೌಚಾಲಯ ಬಿಳಿಸಲಾಗುತ್ತದೆ , ಬಳೆ ಮಾರಾಟ ಮಾಡುವವರು ರಸ್ತೆ ಅತಿಕ್ರಮಣ ಮಾಡದಂತೆ ಈ ವೇಳೆ ಎಚ್ಚರಿಕೆ ನೀಡದರು. ಸಾರಿಗೆ ಘಟಕ ವ್ಯವಸ್ಥಾಪಕ ಅಬೂಬಕರ್ ಮದಬಾವಿ, ಪುರಸಭೆ ಸದಸ್ಯ ರಫೀಕ ದ್ರಾಕ್ಷಿ, ಬಾಫ್ ಢವಳಗಿ, ಬಬ್ಬು ಹುಣಚಗಿ, ಮುನ್ನಾ ಮಕಾನದಾರ ಅಜರುದ್ದಿನ ಮೂಲಿಮನಿ ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

## ಬಸಂತಪೂರ ವ್ಯಾಪ್ತಿಯಲ್ಲಿ ಬಿಜೆಪಿ ಪಕ್ಷದ ಸದಸ್ಯತ್ವ ಅಭಿಯಾನ

• ಉದಯವಾಹಿನಿ, ಚಿಂಚೋಳಿ

ಬಿಜೆಪಿ ಪಕ್ಷವು ದೇಶ ಮೊದಲು ಸಂಸ್ಕೃತಿ ಮೊದಲು ಎಂಬ ತತ್ವಸಿದ್ಧಾಂತ ಹೊಂದಿದೆ ಆದರೆ ಕಾಂಗ್ರೆಸ್ ಓಲೈಕೆ ರಾಜಕಾರಣ ಆಡಳಿತಗೋಸ್ಕರ ರಾಜಕಾರಣ ಮಾಡುತ್ತೆ ಎಂದು ಶಾಸಕ ಡಾ.ಅವಿನಾಶ ಜಾಧವ ಹೇಳಿದರು. ತಾಲ್ಲೂಕಿನ ಸಲಗರ ಬಸಂತಪೂರ ವ್ಯಾಪ್ತಿಯಲ್ಲಿ ಬಿಜೆಪಿ ಪಕ್ಷದ ಸದಸ್ಯತ್ವ ಅಭಿಯಾನದಲ್ಲಿ ಕಾರ್ಯಕರ್ತನ್ನುದ್ದೇಶಿಸಿ ಮಾತನಾಡಿದ ಅವರು,ಈಗಾಗಲೇ ದೇಶದ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ಎರಡು ಬಾರಿ ಪ್ರಧಾನಿಯಾಗಿ ಸಾಕಷ್ಟು ಅಭಿವೃದ್ಧಿ ಕಾರ್ಯ ಮಾಡಿ ವಿಶ್ವದಲ್ಲೇ ಏಳನೇ ಸ್ಥಾದಲ್ಲಿದ್ದ ಭಾರತ ಐದನೇ ಸ್ಥಾನಕ್ಕೆ ತಂದಿದ್ದಾರೆ. ಈಗ ಮೂರನೆ ಬಾರಿ ಮತ್ತೆ ಪ್ರಧಾನಿಪಟ್ಟ ಅಲಂಕರಿಸಿದ್ದು ಐದರಿಂದ ಮೂರನೇ ಸ್ಥಾನಕ್ಕೆ ತಂದ್ದಿದ್ದು ದೇಶದ ಪ್ರಗತಿಗಾಗಿ ಹಗಲಿರುಳು ದುಡಿಯುತ್ತಿದ್ದಾರೆ.

ದೇಶ ಅಭಿವೃದ್ಧಿ ಆಗಬೇಕಾದರೆ ನಾವೆಲ್ಲರೂ ಜಾತಿ ವ್ಯವಸ್ಥೆ ಬಿಟ್ಟು ನಾವೆಲ್ಲರೂ ಒಂದೇ ಎಂದು ಒಗ್ಗಟ್ಟಾಗಿ ಇದ್ದರೆ ಮಾತ್ರ ದೇಶ ಉನ್ನತಮಟ್ಟಕ್ಕೆ ಬೆಳೆಯುತ್ತದೆ, ಕ್ಷೇತ್ರದಲ್ಲಿ ಗೆಲುವು ಸಾಧಿಸಿದ ಪ್ರತಿಯೊಬ್ಬರೂ ಶಾಸಕರು ಅಭಿವೃದ್ಧಿ ಮಾಡಿದರೆ ಕ್ಷೇತ್ರ ಇಲ್ಲಿಯವರೆಗೂ ಅಭಿವೃದ್ಧಿ ಹೊಂದಿದೆ ಈಗಾಗಲೇ ನಾನು ಎರಡು ಬಾರಿ ಗೆಲುವು ಸಾಧಿಸಿದ್ದು ಸಾಕಷ್ಟು ಅಭಿವೃದ್ಧಿ ಕೆಲಸಗಳು ಮಾಡಿದ್ದೇನೆ ಹೀಗೆ ಕಾರ್ಯಕರ್ತರ ಸಹಕಾರ ಬೆಂಬಲವಿದ್ದರೆ ಇನಷ್ಟು ಕೆಲಸ ಮಾಡಲು ಶಕ್ತಿ ಬರುತ್ತದೆ. ಈಗಾಗಲೇ ಬಸವಕಲ್ಯಾಣ ಕ್ಷೇತ್ರದಲ್ಲಿ 45ಸಾವಿರ ಸದಸ್ಯತ್ವ ಆಗಿದೆ, ಔರಾದ ಕ್ಷೇತ್ರದಲ್ಲಿ 50ಸಾವಿರ ಸದಸ್ಯತ್ವ ಆಗಿದೆ ಚಿಂಚೋಳಿಯಲ್ಲಿ ಶುಕ್ರವಾರದವರೆಗೆ ಕೇವಲ 8400 ಸದಸ್ಯತ್ವ ಆಗಿದೆ ಇನ್ನು ಸಾಕಷ್ಟು ಸದಸ್ಯತ್ವ ಮಾಡಬೇಕಾಗಿದೆ ಎಲ್ಲೋರು ಜಾತಿಪಥ ಬಿಟ್ಟು ಒಗ್ಗಟ್ಟಾಗಿ ಸದಸ್ಯತ್ವ ಮಾಡಿ ನನಗೋಸ್ಕರ ಬೇಡ ಬಿಜೆಪಿ ಪಕ್ಷದ ಸಲುವಾಗಿ ಹೆಚ್ಚಿನ ರೀತಿಯಲ್ಲಿ ಸದಸ್ಯತ್ವ ಮಾಡಿ ನಾವೆಲ್ಲರೂ ಸದಸ್ಯತ್ವ ಮಾಡಿದರೆ ಬಿಜೆಪಿ ಪಕ್ಷಕ್ಕೆ ಇನ್ನಷ್ಟು ಶಕ್ತಿ ಬರುತ್ತದೆ.


ಉದಯವಾಹಿನಿ ಚಿತ್ರ

**ಚೀನಾ ಅಮೇರಿಕಾ ಸೇರಿದಂತೆ ಭಾರತ ದೇಶದಲ್ಲಿಯೂ ಸಹ ಅನೇಕ ಪಕ್ಷಗಳು ಒಗ್ಗೂಡಿ ಪ್ರಧಾನಿ ನರೇಂದ್ರ ಮೋದಿಯವರಿಗೆ ಬಿಜೆಪಿ ಪಕ್ಷಕ್ಕೆ ಸೋಲಿಸಬೇಕೆಂದು ಅನೇಕ ಕುತಂತ್ರಗಳು ನಡೆಸಿದರೂ ಆದರೆ ಬಿಜೆಪಿ ಪಕ್ಷದ ನಿಷ್ಠಾವಂತ ಕಾರ್ಯಕರ್ತರಿಂದ ಪಕ್ಷ ಮತ್ತೊಮ್ಮೆ ಅಧಿಕಾರಕ್ಕೆ ಬಂದಿದೆ ಸದಸ್ಯತ್ವ ಅತಿಹೆಚ್ಚು ಚಿಂಚೋಳಿ ಕ್ಷೇತ್ರದಲ್ಲಿ ಮಾಡಿ ಒಳ್ಳೆಯ ಸಂದೇಶ ರವಾನೆಯಾಗುತ್ತದೆ**

**-ಡಾ.ಅವಿನಾಶ ಜಾಧವ, ಶಾಸಕ**

ವಿಠ್ಠಲರಡ್ಡಿ,ಹಣಮಂತ ರಡ್ಡಿ, ಕುರಮದಾಸ ರವಿ ಚವ್ಹಾಣ,ಬೋಜು ಜಾಧವ, ಪ್ರಲ್ಹಾದ ರಡ್ಡಿ,ಮಹಾಂತಯ್ಯ ಸ್ವಾಮಿ,ಶಾಮರಾವ ರಾಠೋಡ್, ಯುವ-ಮೋರ್ಚಾ ಅದ್ಯಕ್ಷ ಸತೀಶ ರಡ್ಡಿ ತಾದಲಾಪೂರ,ಪ್ರಧಾನ ಕಾರ್ಯದರ್ಶಿ ರಾಮ ರೆಡ್ಡಿ ಪಾಟೀಲ ಚಿಮ್ಮಾನಚೋಡ ಅನೇಕರಿದ್ದರು.

## ವರ್ಗಾವಣೆಗೊಂಡ ಶಿಕ್ಷಕರಿಗೆ ಬೀಳ್ಕೊಡುಗೆ

• ಉದಯವಾಹಿನಿ, ಸಿರುಗುಪ್ಪ


ಉದಯವಾಹಿನಿ ಚಿತ್ರ

ತಾಲ್ಲೂಕಿನ ತೆಕ್ಕಲಕೋಟೆ ಪಟ್ಟಣದ ಐದನೇ ವಾರ್ಡಿನ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ (ಪಿಂಜಾರ ಗೇರಿ) ಶಾಲೆಯಲ್ಲಿ ಸೇವೆ ಸಲ್ಲಿಸಿ, ವರ್ಗಾವಣೆಗೊಂಡಿರುವ ಡಿ.ದೊಡ್ಡಭಾಷ ಅವರಿಗೆ ಶಾಲೆಯ ಶಿಕ್ಷಕರ ವತಿಯಿಂದ ಸನ್ಮಾನಿಸಿ ಬಿಳ್ಕೊಡಲಾಯಿತು. ಈ ಸಂದರ್ಭದಲ್ಲಿ ಶಾಲೆಯ ಮುಖ್ಯ ಗುರುಗಳಾದ ಕೆ.ನಾಗರಾಜ ಸಹಶಿಕ್ಷಕರಾದ ಆರ್.ರಾಘಮ್ಮ, ಸುಹೇಬ್.ಕೆ, ಅಕ್ಷಯ ಬೇಗಂ, ಪದ್ಮಾವತಿ ಎನ್ .ವಿ, ಗೌರವ ಶಿಕ್ಷಕರಾದ ಟಿ.ಸಿದ್ದಯ್ಯ ಅತಿಥಿ ಶಿಕ್ಷಕರಾದ ಕೆ.ಭಾಷ, ವೈ.ಮಹಾಬಾಷ,ಸಿದ್ದಯ್ಯ.ಕೆ, ವೆಂಕಟೇಶ, ನೇತ್ರಾವತಿ,ಈರಮ್ಮ ಹಾಗೂ ಸಿಬ್ಬಂದಿ ವರ್ಗದವರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ರಾಷ್ಟ್ರೀಯ ಹೆದ್ದಾರಿಯಲ್ಲಿ ಹೊತ್ತಿ ಉರಿದ ಬಿಎಂಡಬ್ಲ್ಯು ಕಾರು: ಪ್ರಯಾಣಿಕರು ಪಾರು

• ಉದಯವಾಹಿನಿ, ಮಂಗಳೂರು

ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚರಿಸುತ್ತಿದ್ದ ಬಿಎಂಡಬ್ಲ್ಯು ಕಾರೊಂದು ಇದ್ದಕಿದ್ದಂತೆ ಬೆಂಕಿ ಹೊತ್ತಿಕೊಂಡು ಉರಿದ ಘಟನೆ ಅಡ್ಯಾರ್ ಸಹ್ಯಾದ್ರಿ ಕಾಲೇಜು ಬಳಿ ಶನಿವಾರ ಸಂಭವಿಸಿದೆ. ಶನಿವಾರ ಮಧ್ಯಾಹ್ನದ ಹೊತ್ತಿಗೆ ಘಟನೆ ಸಂಭವಿಸಿದ್ದು ಬೆಂಕಿ ಹೊತ್ತಿಕೊಳ್ಳುತ್ತಿದ್ದಂತೆ ಎಚ್ಚೆತ್ತ ಕಾರು ಚಾಲಕ ಕಾರನ್ನು ನಿಲ್ಲಿಸಿದ್ದು ಕೂಡಲೇ ಕಾರಿನಲ್ಲಿದ್ದವರು ಹೊರ ಬಂದು ಜೀವ ಉಳಿಸಿಕೊಂಡಿದ್ದಾರೆ. ಬೆಂಕಿ ಅವಘಡದಿಂದ ಕಾರು ಸಂಪೂರ್ಣ ಸುಟ್ಟು ಕರಕಲಾಗಿದೆ. ಬೆಂಕಿ ಅವಘಡಕ್ಕೆ ಕಾರಣ ಏನೆಂದು ತಿಳಿದು ಬಂದಿಲ್ಲ.

## ಪ್ರಾಣಿ ಪ್ರಿಯರಿಗೆ ಮಹತ್ವದ ಪ್ರಕಟಣೆ

• ಉದಯವಾಹಿನಿ ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಪ್ರಾಣಿ ದಯಾ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ವಿಸ್ತರಣಾ ಚಟುವಟಿಕೆ ಕಾರ್ಯಕ್ರಮದಡಿ ಸೆಪ್ಟಂಬರ್ 28 ರಿಂದ ಆಕ್ಟೋಬರ್ 10 ರವರೆಗೆ ನಗರ ಮತ್ತು ಗ್ರಾಮೀಣ ಪ್ರದೇಶಗಳ ವ್ಯಾಪ್ತಿಯಲ್ಲಿ ಶಾಲಾ, ಕಾಲೇಜುಗಳು, ಸಾರ್ವಜನಿಕ ಸ್ಥಳಗಳಲ್ಲಿ ಪ್ರಾಣಿಜನ್ಯ ರೋಗಗಳ ಅರಿವು ಕಾರ್ಯಕ್ರಮ ಮತ್ತು ಉಚಿತ ಹುಚ್ಚುನಾಯಿ ರೋಗ ಲಸಿಕಾ ಮಾಸಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ.

ಸಾರ್ವಜನಿಕರು, ಪ್ರಾಣಿ ಪ್ರಿಯರು ಕಾರ್ಯಕ್ರಮದ ಸದುಪಯೋಗ ಪಡೆದುಕೊಂಡು ಸಂಪೂರ್ಣ ರೇಬೀಸ್ ನಿರ್ಮೂಲನೆಗೆ ಕೈಜೋಡಿಸಬೇಕು ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಉಪ ನಿರ್ದೇಶಕರಾದ ಡಾ. ಚಂದ್ರಶೇಖರ ಎಸ್. ಸುಂಕದ್ ತಿಳಿಸಿದ್ದಾರೆ.

## ವೈದ್ಯರ ನಿರ್ಲಕ್ಷ್ಯಕ್ಕೆ 7 ವರ್ಷದ ಬಾಲಕ ಸಾವು

• ಉದಯವಾಹಿನಿ ಚಿಕ್ಕಮಗಳೂರು

ತೀವ್ರ ಜ್ವರದಿಂದ ಬಳಲುತ್ತಿದ್ದ 7 ವರ್ಷದ ಬಾಲಕನೊಬ್ಬ ವೈದ್ಯರು ಇಂಜಕ್ಷನ್ ನೀಡಿದ ಬಳಿಕ ಸಾವನ್ನಪ್ಪಿರುವ ಘಟನೆ ಚಿಕ್ಕಮಗಳೂರಿನಲ್ಲಿ ನಡೆದಿದೆ. ಚಿಕ್ಕಮಗಳೂರು ಜಿಲ್ಲೆ ಅಜ್ಜಂಪುರ ಪಟ್ಟಣದಲ್ಲಿ ಈ ಘಟನೆ ನಡೆದಿದ್ದು, 7 ವರ್ಷದ ಸೋನೇಶ್ ಮೃತ ಬಾಲಕ. ಕಳೆದ ನಾಲ್ಕು ದಿನಗಳಿಂದ ತೀವ್ರ ಜ್ವರದಿದ ಬಳಲುತ್ತಿದ್ದ ಬಾಲಕನನ್ನು ಪೋಷಕರು ಅಜ್ಜಂಪುರದ ಕ್ಲಿನಿಕ್‌ಗೆ ಕರೆದೊಯ್ದಿದ್ದರು.

ವೈದ್ಯ ವರುಣ್ ಬಾಲಕನಿಗೆ ಇಂಜಕ್ಷನ್ ನೀಡಿದ್ದರು. ಬಾಲಕನಿಗೆ ಇಂಜಕ್ಷನ್ ನೀಡಿದ ಸೊಂಟದ ಭಾಗದಲ್ಲಿ ಬೊಬ್ಬೆಗಳು ಕಾಣಿಸಿಕೊಂಡಿದ್ದವು. ಬಾಲಕ ಸ್ಥಿತಿ ಇನ್ನಷ್ಟು ಗಂಭೀರವಾಗಿತ್ತು. ತಕ್ಷಣ ಆತನನ್ನು ಶಿವಮೊಗ್ಗದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಬಾಲಕ ಚಿಕಿತ್ಸೆ ಫಲಿಸದೇ ಸಾವನ್ನಪ್ಪಿದ್ದಾನೆ. ಇಂಜಕ್ಷನ್ ಓವರ್ ಡೋಸ್ ನಿಂದಾಗಿ ಬಾಲಕ ಸಾವನ್ನಪ್ಪಿದ್ದಾನೆ ಎಂದು ಹೇಳಲಾಗುತ್ತಿದೆ. ವೈದ್ಯರ ನಿರ್ಲಕ್ಷಕ್ಕೆ ಬಾಲಕನ ಜೀವವೇ ಹೋಗಿದೆ.

## ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್, ಹೆಚ್‌ಡಿಕೆ ರಾಜೀನಾಮೆ ನೀಡಲಿ ನಂತರ ಸಿಎಂ ಬಗ್ಗೆ ಬಿಜೆಪಿಯವರು ಮಾತನಾಡಲಿ: ಲಕ್ಷ್ಮೀ ಹೆಬ್ಬಾಳ್ಕರ್

• ಉದಯವಾಹಿನಿ, ಬೆಳಗಾವಿ

ರಾಜಕೀಯ ದುರುದ್ದೇಶದಿಂದ ಸಿಎಂ ಸಿದ್ದರಾಮಯ್ಯ ವಿರುದ್ಧ ಎಫ್ಐಆರ್ ದಾಖಲಾಗಿದೆ. ಇದಕ್ಕೆ ಕಾನೂನು ಮೂಲಕವೇ ಉತ್ತರ ನೀಡಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದ್ದಾರೆ.

ಬೆಳಗಾವಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ದೇಶದಲ್ಲಿ ಬಿಜೆಪಿಯೇತರ ಸರ್ಕಾರಗಳನ್ನು ಅಸ್ಥಿರಗೊಳಿಸುವ ಕೆಲಸ ನಡೆಯುತ್ತಿದೆ.ಇದಕ್ಕಾಗಿ ರಾಜಭವನಗಳನ್ನು ದುರುಪಯೋಗಪಡಿಸಿಕೊಳ್ಳುತ್ತಿದ್ದಾರೆ ಎಂದು ಕಿಡಿಕಾರಿದರು. 6 ಸಾವಿರ ಕೋಟಿ ಮೊತ್ತದ ಎಲೆಕ್ಟ್ರೋ ಬಾಂಡ್ ಹಗರಣದಲ್ಲಿ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಸಿಲುಕಿದ್ದಾರೆ. ಡಿನೋಟಿಫೈ ಹಗರಣದಲ್ಲಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಸಿಲುಕಿದ್ದಾರೆ. ಮೊದಲು ಇವರು ರಾಜೀನಾಮೆ ನೀಡಲಿ, ನಂತರ ಸಿಎಂ ಸಿದ್ದರಾಮಯ್ಯನವರ ಬಗ್ಗೆ ಬಿಜೆಪಿಯವರು ಮಾತನಾಡಲಿ ಎಂದು ವಾಗ್ದಾಳಿ ನಡೆಸಿದರು.



ಚುನಾವಣೆಗೂ ಮುನ್ನ ನಾವು ಘೋಷಿಸಿದ್ದ ಗ್ಯಾರಂಟಿ ಯೋಜನೆಗಳನ್ನು ಚುನಾವಣಾ ಗಿಮಿಕ್ ಎಂದು ಲೇವಡಿ ಮಾಡಿದ್ದರು.

ನಾವು ಅಧಿಕಾರಕ್ಕೆ ಬಂದ 100 ದಿನಗಳಲ್ಲಿ ಪಂಚ ಗ್ಯಾರಂಟಿಗಳನ್ನು ಜಾರಿಗೆ ತಂದೆವು. ಇದನ್ನು ಸಹಿಸದ ವಿಪಕ್ಷಗಳು ಈಗ ಯೋಜನೆಗಳ ಬಗ್ಗೆ, ಸರ್ಕಾರದ ಬಗ್ಗೆ ವಿನಾಕಾರಣ ಆರೋಪಗಳನ್ನು ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು.

## ಅ. 3ರಂದು ಮಹಾನಗರ ಪಾಲಿಕೆ ಸ್ಥಾಯಿ ಸಮಿತಿಗೆ ಚುನಾವಣೆ

• ಉದಯವಾಹಿನಿ, ಧಾರವಾಡ

ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ 23 ನೇ ಅವಧಿಯ ವಿವಿಧ ನಾಲ್ಕು ಸ್ಥಾಯಿ ಸಮಿತಿಗಳಿಗೆ ಸದಸ್ಯರ ಆಯ್ಕೆಗೆ ಚುನಾವಣೆಯನ್ನು ಆಯೋಜಿಸಲಾಗಿದೆ.

ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ತೆರಿಗೆ ನಿರ್ಧರಣೆ ಹಣಕಾಸು ಮತ್ತು ಅಪೀಲುಗಳು ಸ್ಥಾಯಿ ಸಮಿತಿ, ಸಾರ್ವಜನಿಕ ಆರೋಗ್ಯ ಶಿಕ್ಷಣ ಮತ್ತು ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ, ನಗರ ಯೋಜನೆ, ಅಭಿವೃದ್ಧಿ ಸ್ಥಾಯಿ ಸಮಿತಿ ಹಾಗೂ ಲೆಕ್ಕಗಳ ಸ್ಥಾಯಿ ಸಮಿತಿಗೆ ಸ್ಪರ್ಧಿಸುವವರು ಅಕ್ಟೋಬರ್ 3, 2024 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 12 ಗಂಟೆಯವರೆಗೆ ನಾಮಪತ್ರಗಳನ್ನು ಸ್ವೀಕರಿಸಲಾಗುವುದು.



ಪಾಲಿಕೆಯ ಚುನಾವಣೆಯನ್ನು ಅಕ್ಟೋಬರ್ 3, 2024 ರಂದು ಮಧ್ಯಾಹ್ನ 3 ಗಂಟೆಗೆ ಹುಬ್ಬಳ್ಳಿ ಮಹಾನಗರ ಪಾಲಿಕೆಯ ಸಭಾಭವನದಲ್ಲಿ ನಡೆಸಲಾಗುವುದು ಎಂದು ಬೆಳಗಾವಿ ಪ್ರಾದೇಶಿಕ ಆಯುಕ್ತರು ಹಾಗೂ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಸ್ಥಾಯಿ ಸಮಿತಿಯ ಚುನಾವಣೆಯ ಅಧ್ಯಕ್ಷಾಧಿಕಾರಿ ಎಸ್.ಬಿ.ಶೆಟ್ಟೆಣ್ಣವರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇಶದಲ್ಲಿ ನಿಮಗೊಂದು ಕಾನೂನು ನಮಗೊಂದು ಕಾನೂನು ಇದೆಯೇ

### ನಾನು ಸಹ ಏನು ತಪ್ಪು ಮಾಡಿರಲಿಲ್ಲ, ನನ್ನ ಮೇಲೆ ಆಪಾದನೆ ಮಾಡಿದರು, ರಾಜೀನಾಮೆ ಕೊಟ್ಟು ಕ್ಲಿನ್ ಚಿಟ್ ತಗೊಂಡೆ

• ಉದಯವಾಹಿನಿ ಶಿವಮೊಗ್ಗ

40 ವರ್ಷಗಳ ಸುದೀರ್ಘ ರಾಜಕೀಯ ಜೀವನದಲ್ಲಿ ಕಪ್ಪು ಚುಕ್ಕೆ ಇರದ ಸಿದ್ದರಾಮಯ್ಯಗೆ ಮುಡಾ ಹಗರಣ ನೈತಿಕತೆಯ ಸುಳಿಯಲ್ಲಿ ಸಿಲುಕಿಸಿದೆ. ಹೈಕಮಾಂಡ್, ಪಕ್ಷ, ಸಚಿವರು ಹಾಗೂ ಶಾಸಕರ ಬೆಂಬಲ ಇದ್ದರೂ ಸಿದ್ದರಾಮಯ್ಯ ಮುಡಾ ಹಗರಣ ಉರುಳಾಗಿದೆ.

ಸಿಎಂ ಸಿದ್ದರಾಮಯ್ಯ ಮೇಲೆ ಎಫ್ಐಆರ್ ದಾಖಲು ವಿಚಾರವಾಗಿ ಪ್ರತಿಕ್ರಿಯೆ ನೀಡಿದ ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ, 'ಕೋರ್ಟ್ ತೀರ್ಪಿಗೆ ಯಾರು ದೊಡ್ಡವರಲ್ಲ. ಸಿಎಂ ನ್ಯಾಯಾಲಯದ ಆದೇಶ ಪಾಲಿಸಬೇಕು. ಸತ್ಯ ಮೇವ ಜಯತೇ ನಮಗೆ ನ್ಯಾಯ ಸಿಗುತ್ತೆ ಅಂತಾ ಸಿದ್ದರಾಮಯ್ಯ ಬಂದ್ರು. ಕೋರ್ಟ್ ಸಿದ್ದರಾಮಯ್ಯ ವಿರುದ್ದ ತನಿಖೆಗೆ ಆದೇಶ ಕೊಟ್ಟಿದೆ. ಅವರು ತಪ್ಪಿತಸ್ಥರೆಂದು ಗೊತ್ತಾಗಿದೆ. ಇಲ್ಲವಾದಲ್ಲಿ ತಪ್ಪಿತಸ್ಥರಲ್ಲ ಅಂತಾ ಕ್ಲೀನ್ ಚಿಟ್ ತಗೊಂಡು ಬನ್ನಿ' ಎಂದು ವಾಗ್ದಾಳಿ ಮಾಡಿದ್ದಾರೆ.


ಉದಯವಾಹಿನಿ ಚಿತ್ರ

**ಕ್ಲೀನ್ ಚಿಟ್ ತಗೊಂಡು ಬನ್ನಿ**

ರಾಜ್ಯದ ಜನರಿಗೆ ನೀವು ತಪ್ಪಿತಸ್ಥರೆಂದು ಸ್ಪಷ್ಟವಾಗಿ ಗೊತ್ತಾಗಿದೆ. ನಿಮ್ಮ ಶ್ರೀಮತಿ ಮುಗ್ದೆ. ಆ ತಾಯಿ ಎಂದು ಹೊರಗೆ ಬಂದವರಲ್ಲ. ಆ ತಾಯಿಗೆ ಅನ್ಯಾಯ ಆಗಬಾರದು. ನೀವು ಅವರ ಹತ್ತಿರ ಸಹಿ ಮಾಡಿಸಿಕೊಂಡಿದ್ದೀರಾ ನೀವು.. ನಾನು ಸಹ ಏನು ತಪ್ಪು ಮಾಡಿರಲಿಲ್ಲ. ನನ್ನ ಮೇಲೆ ಆಪಾದನೆ ಮಾಡಿದರು. ಡಿಕೆಶಿ ಮತ್ತು ಸಿದ್ದರಾಮಯ್ಯ ಹಗಲು ರಾತ್ರಿ ಧರಣಿ ಮಾಡಿದರು. ನಾನು ಸಚಿವ ಸ್ಥಾನಕ್ಕೆ ರಾಜೀನಾಮೆ ಕೊಟ್ಟು ಕ್ಲಿನ್ ಚಿಟ್ ತಗೊಂಡೆ. ದೇಶದಲ್ಲಿ ನಿಮಗೊಂದು ಕಾನೂನು ನಮಗೊಂದು ಕಾನೂನು ಇದೆಯೇ. ನಿಮಗೂ ಅದೇ ಕಾನೂನು, ನನಗೂ ಅದೇ ಕಾನೂನು. ನನ್ನ ವಿರುದ್ದ ತನಿಖೆ ನಡೆದು ನಾನು ತಪ್ಪಿತಸ್ಥನಲ್ಲ ಅಂತಾ ಹೊರಗೆ ಬಂದೇ. ನೀವು ಹಾಗೆಯೇ ತನಿಖೆ ಎದುರಿಸಿ. ತಪ್ಪಿತಸ್ಥರಲ್ಲದಿದ್ದರೆ ತಪ್ಪಿತಸ್ಥರಲ್ಲ ಅಂತಾ ಹೊರಗೆ ಬನ್ನಿ' ಎಂದು ಕಿಡಿ ಕಾರಿದರು.

**ಸಿಎಂ ಸಿದ್ದರಾಮಯ್ಯ ವಿರುದ್ಧ ಎಫ್ಐಆರ್ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, 'ಸಿದ್ದರಾಮಯ್ಯ ರಾಜೀನಾಮೆ ಕೊಟ್ಟು ತನಿಖೆ ಎದುರಿಸಬೇಕು. ಸಿಎಂ ಸ್ಥಾನ ಪ್ರಭಾವ ಇರುವ ಸ್ಥಾನ, ಹಾಗಾಗಿ ಅವರು ರಾಜೀನಾಮೆ ಕೊಟ್ಟು ತನಿಖೆ ಎದುರಿಸಬೇಕು. ಹಗರಣ ನಡೆದಿರುವ ಬಗ್ಗೆ ಎಲ್ಲವೂ ಸ್ಪಷ್ಟವಾಗಿದೆ. ಸಿದ್ದರಾಮಯ್ಯ ಸಿಎಂ ಸ್ಥಾನದಲ್ಲಿದ್ರೆ ತನಿಖೆ ಸರಿಯಾಗಿ ನಡೆಯೋಲ್ಲ. ಹಾಗಾಗಿ ಅವರು ಸಿಎಂ ಸ್ಥಾನಕ್ಕೆ ರಾಜೀನಾಮೆ ಕೊಟ್ಟು ತನಿಖೆ ಎದುರಿಸಬೇಕು -ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್**

**ಪ್ರಧಾನಿ ಮೋದಿ ಅವರು ವಿಕಸಿತ ಭಾರತದ ಕನಸು**

**ಅವರ ಅನೇಕ ದೊಡ್ಡ ಕೊಡುಗೆ ಈ ರಾಜ್ಯಕ್ಕಿದೆ. ಪ್ರಧಾನಿ ಮೋದಿ ಅವರು ವಿಕಸಿತ ಭಾರತದ ಕನಸು ಹೊಂದಿದ್ದಾರೆ. ಅದಕ್ಕಾಗಿ ಅನೇಕ ಯೋಜನೆಗಳನ್ನು ರೂಪಿಸಿದ್ದಾರೆ. ಪ್ರತಿ ಗ್ರಾಮ ಪಂಚಾಯತಿಯಲ್ಲೂ ಒಂದು ಸಹಕಾರಿ ಸಂಘ ಸ್ಥಾಪನೆ ಆಗಬೇಕು. ಆಗ ಮಾತ್ರ ಪ್ರತಿಯೊಬ್ಬರು ಸ್ವಾವಲಂಬಿ ಬದುಕು ಸಾಗಿಸಬಹುದು. ಮಲನಾಡಿನ ಜನ ಪುಣ್ಯವಂತರು. ಇಲ್ಲಿನ ವಾತಾವರಣ ನನಗೆ ತುಂಬಾ ಇಷ್ಟ ಎಂದು ಹೇಳಿದರು.**

ಇನ್ನೂ ಗಣಪತಿ ಮೆರವಣಿಗೆಯಲ್ಲಿ ಗಲಾಟೆ ವಿಚಾರದ ಬಗ್ಗೆ ಮಾತನಾಡಿದ ಅವರು, 'ಗಣಪತಿ ಮೆರವಣಿಗೆಯಲ್ಲಿ ಗಲಾಟೆ ನಡೆಯುತ್ತಿವೆ. ಮಸೀದಿಯಿಂದ ತಲ್ವಾರ್, ಮಚ್ಚು ಬರುತ್ತಿವೆ. ಗಣಪತಿ ಪ್ರತಿಷ್ಠಾಪನೆ ಮಾಡಿದವರ ಮೇಲೆ ಕೇಸ್ ದಾಖಲಾಗುತ್ತಿವೆ. ಗಣಪತಿ ಕೂರಿಸಿದವರು ಎ1, ಎ2 ಆರೋಪಿಗಳಾಗುತ್ತಿದ್ದಾರೆ. ಸಿದ್ದರಾಮಯ್ಯ ಈ ಪಾಪದಲ್ಲೇ ಸಿಕ್ಕಿ ಹಾಕಿಕೊಂಡಿರೋದು. ಹಿಂದುತ್ವ ತುಳಿಯಬೇಡಿ, ಹಿಂದುತ್ವ ರಕ್ಷಣೆ ಮಾಡಿ. ಹಿಂದುತ್ವ ತುಳಿಯುವುದು ಕಾಂಗ್ರೆಸ್ ನೀತಿ, ಸಿದ್ದರಾಮಯ್ಯ, ಡಿಕೆಶಿ ನೀತಿ' ಎಂದು ಆಕ್ರೋಶಗೊಂಡರು.

ಈ ನೀತಿ ಚಾಮುಂಡೇಶ್ವರಿ ತಾಯಿ ಒಪ್ಪಲ್ಲ. ಹಿಂದುತ್ವ, ಗೋವುಗಳ ಸಂರಕ್ಷಣೆ ಮಾಡಿದರೆ ಚಾಮುಂಡೇಶ್ವರಿ ತಾಯಿ ನಿಮ್ಮ ಸಿಎಂ ಸ್ಥಾನ ಉಳಿಸಿಕೊಡುತ್ತಾಳೆ. ಗೋವುಗಳ ಕಳವು ನಡೆಯುತ್ತಿದೆ. ಗೋವು ಕಳ್ಳರ ವಿರುದ್ದ ಕ್ರಮ ಇಲ್ಲ. ಗೋವು ಕಳ್ಳರ ಹಿಡಿದರೆ ಮುಸ್ಲಿಂರ ಓಟು ಸಿಗಲ್ಲ ಅಂತ ಒಲೈಕೆ ಮಾಡುತ್ತಿದ್ದಾರೆ.

ಮುಸ್ಲಿಂರು ಹಿಂದುಗಳು ಅಣ್ಣತಮ್ಮಂದಿರ ರೀತಿ ಇದ್ದೇವೆ. ನೀವೇ ಎತ್ತಿ ಕಟ್ಟುತ್ತಿರೋದು. ದೇಶದ್ರೋಹಿ ಮುಸ್ಲಿಂಮರು ಈ ಕೃತ್ಯಗಳನ್ನು ಮಾಡತ್ತಿದ್ದಾರೆ' ಎಂದು ಕಿಡಿ ಕಾರಿದರು.

# ಹೆಜ್ಬುಲ್ಲಾ ಮುಖ್ಯಸ್ಥ ಹಸನ್ ನಸ್ರಲ್ಲಾ ಫಿನಿಷ್, ರಾಕೆಟ್ ದಾಳಿಗೆ ಪ್ರತೀಕಾರ

## • ಬೈರುತ್ ಮೇಲೆ ನಡೆಸಿದ ದಾಳಿಯಲ್ಲಿ ನಸ್ರಲ್ಲಾ ಸಾವಿಗೀಡಾಗಿದ್ದಾನೆ ಎಂದು ಅಧಿಕೃತವಾಗಿ ಘೋಷಿಸಿದ ಇಸ್ರೇಲ್

**ಟೆಲ್ ಅವಿವ್:** ಹೆಜ್ಬುಲ್ಲಾ ಮುಖ್ಯಸ್ಥ ಹಸನ್ ನಸ್ರಲ್ಲಾ ಬೇಟೆಗೆ ಹೊರಟಿದ್ದ ಇಸ್ರೇಲ್ ಸೇನೆ, ಕೊನೆಗೂ ಇದರಲ್ಲಿ ಯಶಸ್ವಿಯಾಗಿದೆ. ಬೈರುತ್ ಮೇಲೆ ನಡೆಸಿದ ದಾಳಿಯಲ್ಲಿ ನಸ್ರಲ್ಲಾ ಸಾವಿಗೀಡಾಗಿದ್ದಾನೆ ಎಂದು ಅಧಿಕೃತವಾಗಿ ಇಸ್ರೇಲ್ ಸೇನೆಯೇ ಘೋಷಿಸಿದೆ.

ಶುಕ್ರವಾರ ರಾತ್ರಿಯಿಂದಲೇ ಹಸ್ರಲ್ಲಾ ಸಂಪರ್ಕಕ್ಕೆ ಸಿಕ್ಕಿರಲಿಲ್ಲ ಎಂದು ಹೆಜ್ಬುಲ್ಲಾಗೆ ಸಮೀಪವಿರುವ ಮೂಲಗಳು ತಿಳಿಸಿದ್ದಾಗಿ ಎಎಫ್‌ಪಿ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಹಸನ್ ನಸ್ರಲ್ಲಾ ಸಾವಿಗೀಡಾಗಿದ್ದಾನೆ ಎಂದು ಇಸ್ರೇಲ್ ಸೇನೆಯ ವಕ್ತಾರ ಲೆಫ್ಟಿನೆಂಟ್ ಕರ್ನಲ್ ನದವ್ ಶೋಶಾನಿ ಎಕ್ಸ್‌ನಲ್ಲಿ ತಿಳಿಸಿದ್ದಾರೆ.

ಇಸ್ರೇಲ್ ಯುದ್ಧ ವಿಮಾನಗಳು ಹೆಜ್ಬುಲ್ಲಾ ಪ್ರಾಬಲ್ಯದ ಬೈರುತ್ ದಕ್ಷಿಣ ಭಾಗದ ಮೇಲೆ ರಾತ್ರಿಯೆಲ್ಲಾ ಬಾಂಬ್‌ಗಳ ಸುರಿಮಳೆ ಸುರಿಸಿದ್ದವು. ಹಲವು ಮನೆಗಳನ್ನು ನೆಲಸಮ ಮಾಡಿದ್ದವು. ಇದೀಗ ನಸ್ರಲ್ಲಾ ಸಾವಿನ ಸುದ್ದಿ ಹೊರಬಿದ್ದಿದೆ.

- ಹೆಜ್ಬುಲ್ಲಾ ಮುಖ್ಯಸ್ಥ ಹಸನ್ ನಸ್ರಲ್ಲಾ ಗುರಿಯಾಗಿಸಿ ಲೆಬನಾನ್ ಮೇಲೆ ಮುಗಿಬಿದ್ದಿತ್ತು ಇಸ್ರೇಲ್
- ಪೂರ್ವ ಹಾಗೂ ದಕ್ಷಿಣ ಲೆಬನಾನ್‌ನ ಹಲವು ಭಾಗಗಳ ಮೇಲೆ ದಾಳಿ ನಡೆಸಿತ್ತು ಇಸ್ರೇಲ್ ಸೇನೆ
- ಬೈರುತ್ ಮೇಲೆ ನಡೆಸಿದ ನಸ್ರಲ್ಲಾ ಸಾವಿಗೀಡಾಗಿದ್ದಾನೆ ಎಂದು ಅಧಿಕೃತವಾಗಿ ಘೋಷಿಸಿದ ಇಸ್ರೇಲ್
- ಹೆಜ್ಬೊಲ್ಲಾ ಮುಖ್ಯಸ್ಥನ ಕಥೆಯನ್ನೇ ಮುಗಿಸಿತು ಇಸ್ರೇಲ್, ಹಸನ್ ನಸ್ರಲ್ಲಾ ನಾಯತ್ವ ಅಂತ್ಯ



**ನಸ್ರಲ್ಲಾ ನಾಯತ್ವ ಅಂತ್ಯ**

ಹಸನ್ ನಸ್ರಲ್ಲಾ ಇನ್ನು ಮುಂದೆ ಜಗತ್ತನ್ನು ಭಯ ಭೀತಗೊಳಿಸಲು ಸಾಧ್ಯವಿಲ್ಲ, ಎಂದು ಇಸ್ರೇಲ್ ರಕ್ಷಣಾ ಪಡೆ (ಐಡಿಎಫ್) ತನ್ನ ಹೇಳಿಕೆಯಲ್ಲಿ ತಿಳಿಸಿದೆ.

**ಹೆಜ್ಬುಲ್ಲಾ ದಾಳಿ ಬೆನ್ನಲ್ಲೇ ಇಸ್ರೇಲ್‌ನಿಂದ ಪ್ರತೀಕಾರದ ದಾಳಿ:** ಉತ್ತರ ಇಸ್ರೇಲ್ ಮೇಲೆ ರಾಕೆಟ್ ಉಡಾಯಿಸಿದ್ದ ಹೆಜ್ಬುಲ್ಲಾ, ಇದರ ಹೊಣೆಯನ್ನೂ ಹೊತ್ತುಕೊಂಡಿತ್ತು. ಇಸ್ರೇಲ್‌ನ 'ಅನಾಗರಿಕ' ಆಕ್ರಮಣದ ವಿರುದ್ಧ ಲೆಬನಾನ್‌ನ ರಕ್ಷಣೆಗಾಗಿ ಈ ದಾಳಿ ನಡೆಸಿದ್ದೇವೆ ಎಂದು ಹೆಜ್ಬುಲ್ಲಾ ಹೇಳಿಕೊಂಡಿತ್ತು. ಇದಾದ ಕೆಲವೇ ಗಂಟೆಗಳಲ್ಲಿ ಇಸ್ರೇಲ್ ಭೀಕರ ಪ್ರತೀಕಾರದ ದಾಳಿಯನ್ನು ಆರಂಭಿಸಿತ್ತು. ತನ್ನ ಸಶಸ್ತ್ರಧಾರಿಗಳು, ಬೆಂಬಲಿಗರ ಮುಂದೆಯೂ ಈತ ಮುಕ್ತವಾಗಿ ಕಾಣಿಸಿಕೊಳ್ಳುತ್ತಿರಲಿಲ್ಲ. ಸಾರ್ವಜನಿಕವಾಗಿಯಂತೂ ಕಾಣಿಸಿಕೊಂಡಿದ್ದೇ ಇಲ್ಲ. ಹೆಚ್ಚಾಗಿ ವಿಡಿಯೋಗಳ ಮೂಲವೇ ಜನರಿಗೆ ದರ್ಶನ ನೀಡುತ್ತಿದ್ದ. ಲೈವ್‌ನಲ್ಲಷ್ಟೇ ಕಾಣಿಸಿಕೊಳ್ಳುತ್ತಿದ್ದ. ಈತ ಎಲ್ಲಿದ್ದಾನೆ ಎಂದು ಯಾರಿಗೂ ಗೊತ್ತಿರಲಿಲ್ಲ. ಹೀಗಿದ್ದೂ, ಇಸ್ರೇಲ್ ಈತನ ಬೇಟೆಯಾಡಿದೆ.

ಹಸನ್ ನಸ್ರಲ್ಲಾ ಪುತ್ರಿ ಜೈನಾಬ್ ಕೂಡ ಇಸ್ರೇಲ್ ದಾಳಿಯಲ್ಲಿ ಸಾವನ್ನಪ್ಪಿದ್ದಾಳೆ. ದಕ್ಷಿಣ ಬೈರುತ್‌ನಲ್ಲಿರುವ ಹೆಜ್ಬುಲ್ಲಾ ನೆಲೆಗಳನ್ನು ಗುರಿಯಾಗಿಸಿ ನಡೆಸಿದ ದಾಳಿಯಲ್ಲಿ ಈಕೆ ಅಸುನೀಗಿದ್ದಾರೆ ಎಂದು ಇಸ್ರೇಲ್‌ನ ಚಾನಲ್ 12 ವರದಿ ಮಾಡಿದೆ, ಆದರೆ ಇದನ್ನು ಹೆಜ್ಬುಲ್ಲಾ ಆಗಲೀ, ಲೆಬನಾನ್ ಮಾಧ್ಯಮಗಳಾಗಲಿ ಖಚಿತಪಡಿಸಿಲ್ಲ.

### ಲೆಬನಾನ್ ಮೇಲೆ ಮುಗಿಬಿದ್ದಿತ್ತು ಇಸ್ರೇಲ್

ಹಸನ್ ನಸ್ರಲ್ಲಾ ಗುರಿಯಾಗಿಸಿ ಪೂರ್ವ ಹಾಗೂ ದಕ್ಷಿಣ ಲೆಬನಾನ್‌ನ ಹಲವು ಭಾಗಗಳ ಮೇಲೆ ಇಸ್ರೇಲ್ ಸೇನೆ ಮುಗಿಬಿದ್ದಿತ್ತು. ಹೆಜ್ಬುಲ್ಲಾ ಉಗ್ರರು ಉತ್ತರ ಇಸ್ರೇಲ್ ಮೇಲೆ ರಾಕೆಟ್ ದಾಳಿ ಆರಂಭಿಸಿದ ಬಳಿಕ ಪ್ರತೀಕಾರದಕ್ಕೆ ಇಳಿಸಿದ್ದ ಇಸ್ರೇಲ್ ಸರಣಿ ದಾಳಿಗಳನ್ನು ಆರಂಭಿಸಿತ್ತು.

### ಯಾರೀತ ಹಸನ್ ನಸ್ರಲ್ಲಾ?

ಹಸನ್ ನಸ್ರಲ್ಲಾ ಲೆಬನಾನ್‌ನಲ್ಲಿ ಭಾರೀ ಪ್ರಭಾವಿ ವ್ಯಕ್ತಿಯಾಗಿದ್ದ. ಅದರಲ್ಲೂ ಆತನ ಶಿಯಾ ಬೆಂಬಲಿಗರಲ್ಲಂತೂ ಯುದ್ಧವನ್ನು ನಡೆಸುವ ಅಥವಾ ಶಾಂತಿಗೆ ಮಧ್ಯಸ್ಥಿಕೆ ವಹಿಸುವ ಸಾಮರ್ಥ್ಯವಿರುವ ಏಕೈಕ ವ್ಯಕ್ತಿ ಎಂದು ಬಿಂಬಿತವಾಗಿದ್ದ.

---

# ಮುಸ್ಲಿಂ ರಾಷ್ಟ್ರ ಪಾಕ್‌ನಲ್ಲಿ ಶೇ.82 ರಷ್ಟು ಮಹಿಳೆಯರ ಮೇಲೆ ಮನೆಯವರಿಂದಲೇ ಅತ್ಯಾಚಾರ

**ಇಸ್ಲಮಾಬಾದ್:** ಪಾಕಿಸ್ತಾನದಲ್ಲಿ ಶೇ.82 ರಷ್ಟು ಮಹಿಳೆಯರು ತಮ್ಮ ಮನೆಯ ಪುರುಷರಿಂದಲೇ ಅತ್ಯಾಚಾರಕ್ಕೆ ಒಳಗಾಗುತ್ತಿದ್ದಾರೆ ಎಂದು ಪಾಕ್ ಸಂಸದೆ ನೀಡಿರುವ ಹೇಳಿಕೆ ಸಂಚಲನ ಸೃಷ್ಟಿಸಿದೆ. ಮಾಧ್ಯಮವೊಂದರ ಚರ್ಚೆಯಲ್ಲಿ ಪಾಲ್ಗೊಂಡಿದ್ದ ಸಂಸದೆ ಷಂಡನಾ ಗುಲ್ಜಾರ್ ಖಾನ್ ಅವರು, ಪಾಕ್ ಗಂಡಸರು ಒಂದು ಹೆಣ್ಣನ್ನು ಅದರಲ್ಲೂ ತಮ್ಮ ಸಹೋದರಿಗೆ, ತಾಯಿಯನ್ನು ಹೇಗೆಲ್ಲ ನಡೆಸಿಕೊಳ್ಳುತ್ತಾರೆ ಎಂಬ ಸತ್ಯದ ಬಗ್ಗೆ ಎಳೆಎಳೆಯಾಗಿ ಬಿಚ್ಚಿಟ್ಟಿದ್ದಾರೆ.

ಪಾಕಿಸ್ತಾನದಲ್ಲಿ 82% ರಷ್ಟು ಮಹಿಳೆಯರು ತಮ್ಮ ಮನೆಯ ಪುರುಷರಿಂದಲ್ಲೇ ಅತ್ಯಾಚಾರಕ್ಕೆ ಒಳಗಾಗುತ್ತಿದ್ದಾರೆ ಎಂದು ಹೇಳಿದ್ದಾರೆ. ಈ ಬಗ್ಗೆ ಅತ್ಯಾಚಾರ ಆಗಿರುವ ಮಹಿಳೆಯರೇ ಹೇಳಿದ್ದಾರೆ. ಅವರ ತಂದೆ, ಸಹೋದರರು, ಅಜ್ಜ ಮತ್ತು ಚಿಕ್ಕಪ್ಪ ಇವರಿಂದಲೇ ನಾವು ಅತ್ಯಾಚಾರಕ್ಕೆ ಒಳಗಾಗಿದ್ದೇವೆ ಎಂದು ಹೇಳಿದ್ದಾರೆ. ವಾರ್ ಆನ್ ರೇಪ್ ಸಂಸ್ಥೆಯ ವರದಿಯನ್ನು ಸಂಸದೆ ಜನರ ಮುಂದೆ ಇಟ್ಟಿದ್ದಾರೆ. ಹೆಚ್ಚಿನ ಹುಡುಗಿಯರ



ಮೇಲೆ ಅವರ ಮನೆಯ ಸದಸ್ಯರೇ ಅತ್ಯಾಚಾರ ಮಾಡಿದ್ದಾರೆ ಎಂದು ಹೇಳಿದ್ದಾರೆ. ಇನ್ನು ಈ ದಾಖಲೆಯನ್ನು ನೀಡಿರುವ ಗುಲ್ಜಾರ್ ಒಬ್ಬ ರಾಜಕಾರಣಿಯಾಗಿದ್ದು, ಸಂಸದೆ ಕೂಡ ಹೌದು, ಆಗಸ್ಟ್ 2018 ರಿಂದ ಪಾಕಿಸ್ತಾನದ ರಾಷ್ಟ್ರೀಯ ಅಸೆಂಬ್ಲಿಯ ಸದಸ್ಯರಾಗಿದ್ದಾರೆ.

ಈ ಕಾರಣಕ್ಕೆ ಈ ಸುದ್ದಿ ಭಾರೀ ಸದ್ದು ಮಾಡುತ್ತಿದೆ. ಒಬ್ಬ ಸಂಸದೆಯೇ ದಾಖಲೆ ಸಹಿತ ಸಾಕ್ಷಿಯನ್ನು ನೀಡಿರುವ ಕಾರಣ ಪಾಕ್‌ನಲ್ಲಿ ಈ ಬಗ್ಗೆ ತಲ್ಲಣ ಸಷ್ಟಿಯಾಗಿದೆ. ಈ ಕಾರಣಕ್ಕೆ ತಾಯಿ ತನ್ನ ಮಗಳ ಮೇಲೆ ಅತ್ಯಾಚಾರ ಅದರೂ ಅದನ್ನು ಪ್ರತಿಭಟಿಸುವುದಿಲ್ಲ, ಪೊಲೀಸರಿಗೆ ದೂರು ನೀಡುವುದಿಲ್ಲ. ಈ ಬಗ್ಗೆ ಪಾಕಿಸ್ತಾನದಲ್ಲಿ ಯಾರೊಬ್ಬರು ಮಾತನಾಡುವುದಿಲ್ಲ, ಅದಕ್ಕಾಗಿ ಪ್ರತಿಭಟಿಸಲು ಯಾರು ಮುಂದೆ ಬರುವುದಿಲ್ಲ. ಯಾಕೆಂದರೆ ಜೀವ ಭಯ ಎಂದು ಸಂಸದೆ ಹೇಳಿದ್ದಾರೆ.

### ಯಾರೀತ ಹಸನ್ ನಸ್ರಲ್ಲಾ?

ಇನ್ನು ಅತ್ಯಾಚಾರಕ್ಕೆ ಒಳಗಾದ ಮಹಿಳೆಯರು ಗರ್ಭಿಣಿಯಾಗುತ್ತಾರೆ. ಅವರು ಯಾವ ಕಾರಣಕ್ಕೂ ಪೊಲೀಸರಿಗೆ ಈ ಬಗ್ಗೆ ದೂರು ನೀಡುವುದಿಲ್ಲ. ಬದಲಿಗೆ ಗರ್ಭಪಾತ ಮಾಡಿಕೊಳ್ಳಲು ಸ್ತ್ರೀರೋಗತಜ್ಞರ ಬಳಿ ಹೋಗುತ್ತಾರೆ. ಮಗಳ ಮೇಲೆ ತನ್ನ ಗಂಡ ಅತ್ಯಾಚಾರ ಮಾಡಿದ್ರು ಆಕೆ ತನ್ನ ಗಂಡನನ್ನು ಬಿಡುವುದಿಲ್ಲ.

---

# ಮಣಿಪುರದ 3 ಜಿಲ್ಲೆಗಳಲ್ಲಿ ಭಾರೀ ಪ್ರಮಾಣದ ಶಸ್ತ್ರಾಸ್ತ್ರ ವಶ

**ಇಂಫಾಲ:** ಜನಾಂಗೀಯ ಸಂಘರ್ಷ ಪೀಡಿತ ಮಣಿಪುರದ ಮೂರು ಜಿಲ್ಲೆಗಳಿಂದ ಭದ್ರತಾ ಪಡೆಗಳು ಭಾರೀ ಪ್ರಮಾಣದ ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳನ್ನು ವಶಪಡಿಸಿಕೊಳ್ಳಲಾಗಿದೆ.

ಮಣಿಪುರ ಪೊಲೀಸ್ ಮತ್ತು ಅಸ್ಸಾಂ ರೈಫಲ್ಸ್‌ನ ಜಂಟಿ ತಂಡವು ಎರಡು 303 ರೈಫಲ್‌ಗಳು, ಒಂದು 9 ಎಂಎಂ ಪಿಸ್ತೂಲ್ ಜೊತೆ ವ್ಯಾಗಜೀನ್, ಕಾರ್ಟ್ರಿಡ್ಜ್‌ಗಳು, ನಾಲ್ಕು ಹ್ಯಾಂಡ್ ಗ್ರೆನೇಡ್‌ಗಳು, ಎರಡು ಡಿಟೋನೇಟರ್‌ಗಳು ಮತ್ತು ತಲಾ ಒಂದು ದೇಶ ನಿರ್ಮಿತ ಗಾರೆ ಮತ್ತು ದೀರ್ಘ-ಶ್ರೇಣಿಯ ಸುಧಾರಿತ ಗಾರೆಗಳನ್ನು ಕಾಂಗ್‌ಪೋಕ್ಪಿ ಜಿಲ್ಲೆಯ ಲೋಚಿಂಗ್ ಪರ್ವತದಿಂದ ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ರಾಜ್ಯ ಪೊಲೀಸ್, ಬಿಎಸ್‌ಎಫ್ ಮತ್ತು ಸಿಆರ್‌ಪಿಎಫ್‌ನ ಸಂಯೋಜಿತ ಪಡೆಗಳು ಚುರಾಚಂದ್‌ಪುರ ಜಿಲ್ಲೆಯ ಗೋಥೋಲ್ ಗ್ರಾಮದಲ್ಲಿ ಮತ್ತೊಂದು ಶೋಧ ಕಾರ್ಯಾಚರಣೆಯಲ್ಲಿ ಸ್ಥಳೀಯವಾಗಿ ಪಂಪಿ ಎಂದು ಕರೆಯಲ್ಪಡುವ ಎರಡು ಸುಧಾರಿತ ಮೋರ್ಟಾರ್‌ಗಳನ್ನು ವಶಪಡಿಸಿಕೊಂಡಿವೆ.

ರಾಜ್ಯ ಪೊಲೀಸರು ಮತ್ತು ಅಸ್ಸಾಂ ರೈಫಲ್ಸ್ ನಾಲ್ಕು ಹ್ಯಾಂಡ್ ಗ್ರೆನೇಡ್‌ಗಳು, ಎರಡು ಪಂಪಿ ಶೆಲ್‌ಗಳು, ಮೂರು ಡಿಟೋನೇಟರ್‌ಗಳು ಮತ್ತು ತಲಾ ಒಂದು ಸ್ಟನ್ ಗ್ರೆನೇಡ್, ಸ್ಟಿಂಗರ್ ಗ್ರೆನೇಡ್ ಮತ್ತು ಅಶ್ರುವಾಯು ಶೆಲ್ ಅನ್ನು ತೌಬಲ್ ಜಿಲ್ಲೆಯ ಫೈನೋಮ್ ಬೆಟ್ಟದ ಶ್ರೇಣಿಯಿಂದ ವಶಪಡಿಸಿಕೊಂಡಿದ್ದಾರೆ.

ನಿನ್ನೆ ಭದ್ರತಾ ಪಡೆಗಳು ನಡೆಸಿದ ಶೋಧ ಮತ್ತು ಪ್ರದೇಶದ ಪ್ರಾಬಲ್ಯ ವ್ಯಾಯಾಮದ ಸಮಯದಲ್ಲಿ ಎಲ್ಲಾ ವಶಪಡಿಸಿಕೊಳ್ಳಲಾಗಿದೆ. ಆದಾಗ್ಯೂ, ವಶಪಡಿಸಿಕೊಳ್ಳುವಿಕೆಗೆ ಸಂಬಂಧಿಸಿದಂತೆ ಯಾವುದೇ ಬಂಧನಗಳನ್ನು ಮಾಡಲಾಗಿಲ್ಲ. ಕಳೆದ ವರ್ಷ ಮೇ 3 ರಿಂದ ಮಣಿಪುರದ ಇಂಫಾಲ್ ಕಣಿವೆ ಮೂಲದ ಮೈತೀಸ್ ಮತ್ತು ಪಕ್ಕದ ಬೆಟ್ಟಗಳ ಮೂಲದ ಕುಕಿಗಳ ನಡುವಿನ ಜನಾಂಗೀಯ ಹಿಂಸಾಚಾರದಲ್ಲಿ 200 ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ ಮತ್ತು ಸಾವಿರಾರು ಜನರು ನಿರಾಶ್ರಿತರಾಗಿದ್ದಾರೆ.

---

# ಡ್ರೋಣ್ ಬಳಸಿ ಅತ್ಯಾಚಾರಿಗಾಗಿ ಪೊಲೀಸರ ಶೋಧ

**ಹರ್ದಾ:** ಅತ್ಯಾಚಾರಿ ಬಂಧನಕ್ಕೆ ನೈಟ್ ವಿಷನ್ ಡ್ರೋಣ್ ಬಳಸಿ ಗಮನ ಸೆಳೆದಿದ್ದಾರೆ. ಐದು ವರ್ಷದ ಬಾಲಕಿಯ ಮೇಲೆ ಅತ್ಯಾಚಾರವೆಸಗಿದ ಆರೋಪಿಯನ್ನು ಹಿಡಿಯಲು ಮಧ್ಯಪ್ರದೇಶದ ಹರ್ದಾ ಜಿಲ್ಲೆಯ ಪೊಲೀಸರು ರಾತ್ರಿ ದಷ್ಟಿ ಡ್ರೋನ್ ಮೂಲಕ ಅರಣ್ಯ ಪ್ರದೇಶದಲ್ಲಿ ಶೋಧ ನಡೆಸಿದ್ದಾರೆ.

ಥರ್ಮಲ್ ಇಮೇಜ್ ಕ್ಯಾಮೆರಾ ಹೊಂದಿರುವ ಡ್ರೋನ್ ಅನ್ನು ಭೋಪಾಲ್ ಮೂಲದ ಮಧ್ಯಪ್ರದೇಶ ಎಲೆಕ್ಟ್ರಾನಿಕ್ ಡೆವಲಪ್‌ಮೆಂಟ್ ಕಾರ್ಪೊರೇಶನ್‌ನಿಂದ ಖರೀದಿಸಲಾಗಿದೆ ಎಂದು ಜಿಲ್ಲಾಧಿಕಾರಿ ಆದಿತ್ಯ ಸಿಂಗ್ ಹೇಳಿದ್ದಾರೆ. ಇದು ಉಷ್ಣ ಸಂವೇದಕಗಳನ್ನು ಹೊಂದಿದೆ. ಸಾಮಾನ್ಯ ಮಾನವ ದೇಹದ ಉಷ್ಣತೆಯನ್ನು ಹೊಂದಿಸಬಹುದು. ಇದರ ಸಹಾಯದಿಂದ, ದಟ್ಟವಾದ ಪ್ರದೇಶದಲ್ಲಿ ಮನುಷ್ಯರನ್ನು ಕಂಡುಹಿಡಿಯುವುದು ಸುಲಭ ಎಂದು ಅವರು ಹೇಳಿದರು. ಹಲವು ಸಂಭಾವ್ಯ ಅಡಗುದಾಣಗಳ ಮೇಲೆ ದಾಳಿ ನಡೆಸಿದರೂ ಆರೋಪಿಗಳನ್ನು ಪೊಲೀಸರು ಪತ್ತೆ ಮಾಡದ ಹಿನ್ನೆಲೆಯಲ್ಲಿ ಅಧಿಕಾರಿಗಳು ಡ್ರೋನ್ ಕ್ಯಾಮೆರಾವನ್ನು



ಬಳಸುವ ಕಲ್ಪನೆಯನ್ನು ಹೊಡೆದರು. ಆರೋಪಿಯು ಹರ್ದಾದಿಂದ 50 ಕಿಮೀ ದೂರದ ಕಾಡಿನಲ್ಲಿ ತಲೆಮರೆಸಿಕೊಂಡಿದ್ದಾನೆ ಎಂದು ಶಂಕಿಸಲಾಗಿದೆ.

ಸೆಪ್ಟೆಂಬರ್ 23 ರಂದು ಸಿರಾಲಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬಾಲಕಿ ಪ್ರಜ್ಞಾಹೀನ ಸ್ಥಿತಿಯಲ್ಲಿ ಪತ್ತೆಯಾಗಿದ್ದಳು.

ಆಕೆಯನ್ನು ಆಸ್ಪತ್ರೆಗೆ ಕರೆದೊಯ್ಯಲಾಯಿತು, ಅಲ್ಲಿ ಆಕೆಗೆ ಪ್ರಜ್ಞೆ ಮರಳಿತು, ಆದರೆ ವೈದ್ಯಕೀಯ ಪರೀಕ್ಷೆಯಲ್ಲಿ ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ನಡೆದಿರುವುದು ಕಂಡುಬಂದಿತ್ತು. ಸುಮಾರು 24 ವರ್ಷ ವಯಸ್ಸಿನ ಆರೋಪಿ ಬಾಲಕಿಗೆ ತಿಂಡಿಗಳನ್ನು ನೀಡಿದ ನಂತರ ನಿರ್ಜನ ಸ್ಥಳಕ್ಕೆ ಕರೆದೊಯ್ದಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

---

# ಪೆಟ್ರೋಲ್, ಡೀಸೆಲ್‌ನ್ನು ಜಿಎಸ್‌ಟಿ ವ್ಯಾಪ್ತಿಗೆ ತರಲು ಪ್ರಯತ್ನ

**ಪುಣೆ:** ಪೆಟ್ರೋಲ್, ಡೀಸೆಲ್ ಅನ್ನು ಸರಕು ಮತ್ತು ಸೇವಾ ತೆರಿಗೆ ವ್ಯಾಪ್ತಿಗೆ ತರುವ ಬಗ್ಗೆ ಒಮತ ಮೂಡಿಸಲು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಕರೆ ನೀಡಿದ್ದಾರೆ.

ಪುಣೆ ಇಂಟರ್‌ನ್ಯಾಶನಲ್ ಸೆಂಟರ್‌ನ (ಪಿಐಸಿ) 14ನೇ ಸಂಸ್ಥಾಪನಾ ದಿನದ ಉಪನ್ಯಾಸದಲ್ಲಿ ಮುಂಬರುವ ದಶಕದಲ್ಲಿ ಭಾರತದ ಇಂಧನ ಭದ್ರತೆಯನ್ನು ಹೆಸುವ ಕಾರ್ಯತಂತ್ರ ಮತ್ತು ಕ್ರಮಗಳು ಕುರಿತು ಉಪನ್ಯಾಸ ನೀಡಿದ ಅವರು, ಈಗ ಪೆಟ್ರೋಲ್ ಮತ್ತು ಡೀಸೆಲ್ ಅನ್ನು ಜಿಎಸ್‌ಟಿ ವ್ಯಾಪ್ತಿಗೆ ತರಲು ನಾನು ಸಲಹೆಯನ್ನು ಕೇಳಿದ್ದೇನೆ ಎಂದಿದ್ದಾರೆ.

ಜಿಎಸ್‌ಟಿ ಅಡಿಯಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಅನ್ನು ನಾನು ಬಹಳ ಸಮಯದಿಂದ ಪ್ರತಿಪಾದಿಸುತ್ತಾ ಬಂದಿದ್ದೇನೆ, ಈಗ ನನ್ನ ಹಿರಿಯ ಸಹೋದ್ಯೋಗಿ, ಹಣಕಾಸು ಮಂತ್ರಿ ಕೂಡ ಹಲವಾರು ಸಂದರ್ಭಗಳಲ್ಲಿ ಇಂಧನವನ್ನು ಜಿಎಸ್‌ಟಿ ಅಡಿಯಲ್ಲಿ ತರುವ ಬಗ್ಗೆ ಮಾತನಾಡಿದ್ದಾರೆ ಎಂದು ನನಗೆ ಖಚಿತವಾಗಿದೆ ಎಂದು ತಿಳಿಸಿದ್ದಾರೆ.





**ಅವಲಂಬನೆ ಕಡಿಮೆ ಮಾಡಲು ಪರಿಶೋಧನೆ**

ತನ್ನ ಶಕ್ತಿಯ ಭದ್ರತೆಯನ್ನು ಹೆಚ್ಚಿಸಲು, ಭಾರತವು ಆಯಕಟ್ಟಿನ ಪೆಟ್ರೋಲಿಯಂ ನಿಕ್ಷೇಪಗಳ ಮೇಲೆ ಕೇಂದ್ರೀಕರಿಸುವ ಅಗತ್ಯವಿದೆ ಮತ್ತು ಆಮದು ಮಾಡಿಕೊಳ್ಳುವ ಇಂಧನದ ಮೇಲೆ ಹೆಚ್ಚಿನ ಅವಲಂಬನೆಯನ್ನು ಕಡಿಮೆ ಮಾಡಲು ಪರಿಶೋಧನೆ ಮತ್ತು ಉತ್ಪಾದನೆಗೆ ಆದ್ಯತೆ ನೀಡಬೇಕು. ಇದನ್ನು ಸಾಧಿಸಲು ಎಲ್ಲಾ ರಾಜ್ಯಗಳಿಂದ ಸರ್ವಾನುಮತದ ಅನುಮೋದನೆಯ ಅಗತ್ಯವಿದೆ ಎಂದು ಪುರಿ ಒತ್ತಿ ಹೇಳಿದರು ಮತ್ತು ಪೆಟ್ರೋಲ್ ಮತ್ತು ಡೀಸೆಲ್ ಅವರಿಗೆ ಗಮನಾರ್ಹ ಆದಾಯವನ್ನು ಉತ್ಪಾದಿಸುವ ಕಾರಣದಿಂದ ರಾಜ್ಯಗಳನ್ನು ಮಂಡಳಿಯಲ್ಲಿ ಪಡೆಯುವಲ್ಲಿ ಸವಾಲುಗಳನ್ನು ಒಪ್ಪಿಕೊಂಡರು.

### ಶೇ. 25 ರಷ್ಟು ಹೆಚ್ಚಳಕ್ಕೆ ಕೊಡುಗೆ


1.4 ಶತಕೋಟಿ ಜನಸಂಖ್ಯೆಯೊಂದಿಗೆ ಮತ್ತು ಜಾಗತಿಕ ಸರಾಸರಿಗಿಂತ ಮೂರು ಪಟ್ಟು ಶಕ್ತಿಯ ಬಳಕೆಯನ್ನು ಯೋಜಿಸಲಾಗಿದೆ, ಭಾರತವು ಜಾಗತಿಕ ಇಂಧನ ಭೂದಶ್ಯದಲ್ಲಿ ಪ್ರಮುಖ ಆಟಗಾರನಾಗಿ ಸ್ಥಾನ ಪಡೆದಿದೆ ಎಂದು ಪುರಿ ಹೈಲೈಟ್ ಮಾಡಿದರು. ಮುಂದಿನ ಎರಡು ದಶಕಗಳಲ್ಲಿ, ವಿಶ್ವದ ಇಂಧನ ಬಳಕೆಯಲ್ಲಿ ಭಾರತವು ಶೇ. 25 ರಷ್ಟು ಹೆಚ್ಚಳಕ್ಕೆ ಕೊಡುಗೆ ನೀಡುವ ನಿರೀಕ್ಷೆಯಿದೆ ಎಂದು ಅವರು ತಿಳಿಸಿದರು.

---

# ಭಾರತ-ಅಮೆರಿಕ ಪಾಲುದಾರಿಕೆ ದೃಢ: ಸಬ್ರಿನಾ ಸಿಂಗ್

**ನ್ಯೂಯಾರ್ಕ್:** ಭಾರತ ಮತ್ತು ಅಮೆರಿಕ ನಡುವಿನ ಸಂಬಂಧ ಬಲಿಷ್ಟವಾಗಿದೆ ಮತ್ತು ಉಭಯ ನಡುವಿನ ಪಾಲುದಾರಿಕೆಯು ದೃಢವಾಗಿದೆ -ಆಳವಾಗಿದೆ ಎಂದು ಪೆಂಟಗನ್‌ನ ಉಪ ಪತ್ರಿಕಾ ಕಾರ್ಯದರ್ಶಿ ಸಬ್ರಿನಾ ಸಿಂಗ್ ಹೇಳಿದ್ದಾರೆ.

ಕ್ವಾಡ್ ಮೈತ್ರಿ ಮೂಲಕ ಉಚಿತ ಮತ್ತು ಮುಕ್ತ ಇಂಡೋ-ಪೆಸಿಫಿಕ್‌ಗೆ ಹಂಚಿಕೆಯ ಬದ್ಧತೆಯನ್ನು ಒತ್ತಿ ಹೇಳಿದ್ದಾರೆ. ಹೊಸದಿಲ್ಲಿಯಲ್ಲಿ ಇತ್ತೀಚಿನ 2+2 ಸಭೆ ಮತ್ತು ಯುಎಸ್‌ನಲ್ಲಿ ನಡೆದ ಕ್ವಾಡ್ ಶೃಂಗಸಭೆ ಸೇರಿದಂತೆ ಮಹತ್ವದ ರಾಜತಾಂತ್ರಿಕ ಮಾತುಕತೆ ಹಿನ್ನೆಲೆಯಲ್ಲಿ ಅವರ ಹೇಳಿಕೆಗಳು ಬಂದಿವೆ.



ಯುಎಸ್, ಭಾರತ, ಜಪಾನ್ ಮತ್ತು ಆಸ್ಟ್ರೇಲಿಯಾವನ್ನು ಒಳಗೊಂಡಿರುವ ಕ್ವಾಡ್ ಸಮಾನ ಮನಸ್ಕ ರಾಷ್ಟ್ರಗಳ ಒಕ್ಕೂಟವಾಗಿದೆ ಎಂದು ಸಿಂಗ್ ಸ್ಪಷ್ಟಪಡಿಸಿದ್ದಾರೆ. ಕ್ವಾಡ್ ಒಂದು ಉಚಿತ ಮತ್ತು ಮುಕ್ತ ಇಂಡೋ-ಪೆಸಿಫಿಕ್‌ನಲ್ಲಿ ನಂಬಿಕೆಯಿರುವುದರಿಂದ ಒಟ್ಟಿಗೆ ಸೇರುವ ಸಮಾನ ಮನಸ್ಕ ರಾಷ್ಟ್ರಗಳ ಗುಂಪಾಗಿದೆ ಎಂದು ಅವರು ತಿಳಿಸಿದ್ದಾರೆ. ಈ ಮೂಲಭೂತ ತತ್ವವು ಪ್ರಾದೇಶಿಕ ಸ್ಥಿರತೆ ಮತ್ತು ಭದ್ರತೆಯನ್ನು ಉತ್ತೇಜಿಸುವಲ್ಲಿ ಮೈತ್ರಿಯ ಉದ್ದೇಶವನ್ನು ಒತ್ತಿ ಹೇಳುತ್ತದೆ ಯುಎಸ್-ಭಾರತ ಸಂಬಂಧಗಳ ಭವಿಷ್ಯದ ಬಗ್ಗೆ ಚರ್ಚಿಸುವಾಗ, ವಿಲ್ಮಿಂಗ್ಟನ್‌ನಲ್ಲಿ ಇತ್ತೀಚಿನ ಉನ್ನತ ಮಟ್ಟದ ಸಭೆಗಳನ್ನು ಸಿಂಗ್ ಉಲ್ಲೇಖಿಸಿದ್ದಾರೆ .ಅಲ್ಲಿ ಹೆಚ್ಚಿನ ಸಹಕಾರದ ಬಗ್ಗೆ ವ್ಯಾಪಕ ವಾದ ವಿವರಗಳನ್ನು ನೋಡಬಹುದು ಎಂದಿದ್ದಾರೆ.

ಈ ಚರ್ಚೆಗಳಲ್ಲಿ ಅಧ್ಯಕ್ಷ ಬಿಡೆನ್ ಮತ್ತು ಪ್ರಧಾನಿ ಮೋದಿಯವರ ನಡುವಿನ ಚರ್ಚೆಯನ್ನು ಪ್ರತಿಬಿಂಬಿಸುತ್ತಾ, ಭಾರತ ಮತ್ತು ಯುನೈಟೆಡ್ ಸ್ಟೇಟ್ಸ್ ನಡುವಿನ ಪಾಲುದಾರಿಕೆ ಖಂಡಿತವಾಗಿಯೂ ಪ್ರಬಲವಾಗಿದೆ ಎಂದು ನಾನು ಭಾವಿಸುತ್ತೇನೆ ಎಂದು ಅವರು ಹೇಳಿದ್ದಾರೆ.

### ಯುಎಸ್-ಇಂಡಿಯಾ 2+2 ಇಂಟರ್ಸೆಷನಲ್ ಸಂವಾದ ಸಭೆ

ಸೆಪ್ಟೆಂಬರ್ 17 ರಂದು, ಎರಡೂ ದೇಶಗಳ ಅಧಿಕಾರಿಗಳು ನವದೆಹಲಿಯಲ್ಲಿ ಎಂಟನೇ ಯುಎಸ್-ಇಂಡಿಯಾ 2+2 ಇಂಟರ್ಸೆಷನಲ್ ಸಂವಾದ ಸಭೆ ನಡೆಸಿದ್ದಾರೆ. ದ್ವಿಪಕ್ಷೀಯ ಸಹಕಾರವನ್ನು ಬಲಪಡಿಸುವ ಈ ಸಂವಾದವನ್ನು ದಕ್ಷಿಣ ಮತ್ತು ಮಧ್ಯ ಏಷ್ಯಾದ ವ್ಯವಹಾರಗಳ ಸಹಾಯಕ ರಾಜ್ಯ ಕಾರ್ಯದರ್ಶಿ ಡೊನಾಲ್ಡ್ ಲು ಮತ್ತು ಯುಎಸ್ ಕಡೆಯಿಂದ ಇಂಡೋ-ಪೆಸಿಫಿಕ್ ಭದ್ರತಾ ವ್ಯವಹಾರಗಳ ಪ್ರಧಾನ ಉಪ ಸಹಾಯಕ ರಕ್ಷಣಾ ಕಾರ್ಯದರ್ಶಿ ಜೆಡಿಡಿಯಾ ಪಿ ರಾಯಲ್ ಸಹ-ಅಧ್ಯಕ್ಷತೆ ವಹಿಸಿದ್ದರು. ಭಾರತದ ಕಡೆಯಿಂದ, ವಿದೇಶಾಂಗ ವ್ಯವಹಾರಗಳ ಸಚಿವಾಲಯದಿಂದ ಅಮೆರಿಕದ ಜಂಟಿ ಕಾರ್ಯದರ್ಶಿ ನಾಗರಾಜ್ ನಾಯ್ಡು ಮತ್ತು ರಕ್ಷಣಾ ಸಚಿವಾಲಯದಿಂದ ಅಂತರಾಷ್ಟ್ರೀಯ ಸಹಕಾರದ ಜಂಟಿ ಕಾರ್ಯದರ್ಶಿ ವಿಶ್ವೇಶ್ ನೇಗಿ ನೇತೃತ್ವದಲ್ಲಿ ಚರ್ಚೆಗಳು ನಡೆದವು.

---

# ಹೆಲೆನ್ ಚಂಡಮಾರುತಕ್ಕೆ 43 ಮಂದಿ ಬಲಿ

**ವಾಷಿಂಗ್ಟನ್:** ಆಗ್ನೇಯ ಅಮೇರಿಕಾ ಭಾಗದಲ್ಲಿ ಹೆಲೆನ್ ಚಂಡಮಾರುತ ಅಪ್ಪಳಿಸಿದ ಪರಿಣಾಮ ಕನಿಷ್ಠ 43 ಜನರು ಸಾವನ್ನಪ್ಪಿದ್ದು ಅಪಾರ ಪ್ರಮಾಣದ ಹಾನಿಯಾಗಿರುವ ಘಟನೆ ವರದಿಯಾಗಿದೆ.

ಪೋಲೀರಿಡಾಕ್ಕೆ ಹೆಲೆನ್ ಚಂಡಮಾರುತ ಅಪ್ಪಳಿಸುತ್ತಿದ್ದಂತೆ ನಾಟಕೀಯ ರೀತಿಯಲ್ಲಿ ಪ್ರವಾಹ ಉಂಟಾಗಿದ್ದು ಇದರಿಂದ ಜನರನ್ನು ರಕ್ಷಣೆ ಮಾಡಲು ರಕ್ಷಣಾ ತಂಡಗಳು ಹರಸಾಹಸ ನಡೆಸಿದ್ದಾರೆ. ಚಂಡಮಾರುತದ ಘರ್ಜನೆಯಿಂದ ಕನಿಷ್ಠ 43 ಜನರು ಸಾವನ್ನಪ್ಪಿದ್ದು ಲಕ್ಷಾಂತರ ಜನರು ವಿದ್ಯುತ್ ಇಲ್ಲದೆ ಕತ್ತಲೆಯಲ್ಲಿ ಕಾಲ ಕಳೆಯುವಂತಾಗಿದೆ.

ಪ್ರವಾಹದ ನೀರಿನಲ್ಲಿ ಸಿಲುಕಿರುವವರಿಗೆ ಸಹಾಯ ಮಾಡಲು ದೋಣಿಗಳು, ಹೆಲಿಕಾಪ್ಟರ್‌ಗಳು ಮತ್ತು ದೊಡ್ಡ ವಾಹನಗಳೊಂದಿಗೆ ಬಳಕೆ ಮಾಡಿ ಜನರನ್ನು ರಕ್ಷಣೆ ಮಾಡುವ ಕಾರ್ಯದಲ್ಲಿ ರಕ್ಷಣಾ ಸಿಬ್ಬಂದಿ ನಿರತರಾಗಿದ್ದಾರೆ. ಸುಮಾರು 50 ಕಾರ್ಮಿಕರು ಮತ್ತು ಪ್ರವಾಹಕ್ಕೆ ಒಳಗಾದ ಟೆನ್ನೆಸ್ಸೀ ಆಸ್ಪತ್ರೆಯ ಛಾವಣಿಯ ಮೇಲೆ ಬಿದ್ದು ಗಾಯಗೊಂಡಿದ್ದು ಅವರನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಫ್ಲೋರಿಡಾದಲ್ಲಿ ಅಪ್ಪಳಿಸಿದ ದಾಖಲೆಯ ಅತ್ಯಂತ ಶಕ್ತಿಶಾಲಿ ಚಂಡಮಾರುತವಾಗಿದೆ. ಜೊತೆಗೆ ಭೂಕುಸಿತ ಮಾಡಿದ ನಂತರ ಉತ್ತರಕ್ಕೆ ಜಾರ್ಜಿಯಾ ಮತ್ತು ಕೆರೊಲಿನಾಸ್‌ಗೆ ಕಡೆಗೆ ಚಂಡಮಾರುತ ಚಲಿಸಿದೆ. ಚಂಡಮಾರುತದಿಂದ ಉಂಟಾದ ಹಾನಿ ಶತಕೋಟಿ ಡಾಲರ್‌ಗಳಿಗೆ ಹೋಗಬಹುದು ಎಂದು ವಿಮೆಗಾರರು ಮತ್ತು ಹಣಕಾಸು ಸಂಸ್ಥೆಗಳು ಹೇಳುತ್ತವೆ.

ರಸ್ತೆಗಳು ಮತ್ತು ಮನೆಗಳು ಮುಳುಗಿವೆ ಹೆಲೆನ್ ಗಮನಾರ್ಹವಾಗಿ ದುರ್ಬಲಗೊಂಡಿದ್ದರೂ, ಮುನ್ಸೂಚಕರು ಹೆಚ್ಚಿನ ಗಾಳಿ, ಪ್ರವಾಹ ಮತ್ತು ಸುಂಟರಗಾಳಿಗಳ ಬೆದರಿಕೆಯನ್ನು ಮುಂದುವರೆಸಬಹುದು ಎಂದು ಎಚ್ಚರಿಸಿದ್ದಾರೆ.

---

# ವಿಶ್ವಸಂಸ್ಥೆಯಲ್ಲಿ ಭಾರತದ ತಪರಾಕಿಗೆ ಕಂಗಾಲಾದ ಪಾಕಿಸ್ತಾನ

## • ಭಯೋತ್ಪಾದನೆ ಕಿತ್ತುಹಾಕದ ಹೊರತು ನಿಮ್ಮೊಂದಿಗೆ ಯಾವ ಮಾತುಕತೆಯೂ ಇಲ್ಲ ಎಂದು ತಪರಾಕಿ

**ನ್ಯೂಯಾರ್ಕ್:** ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿನ ತಮ್ಮ ಭಾಷಣದ ವೇಳೆ ಜಮ್ಮು ಮತ್ತು ಕಾಶ್ಮೀರದ ವಿಚಾರ ಪ್ರಸ್ತಾಪಿಸಿದ ಪಾಕಿಸ್ತಾನ ಪ್ರಧಾನಿ ಶೆಹಬಾಜ್ ಷರೀಫ್ ಅವರಿಗೆ ಭಾರತ ತೀಕ್ಷ್ಣ ತಿರುಗೇಟು ನೀಡಿದೆ. ಗಡಿಯಾಚೆಗಿನ ಭಯೋತ್ಪಾದನೆಗೆ ಪಾಕಿಸ್ತಾನದ ಬೆಂಬಲ ಮುಂದುವರಿದಿರುವುದು ಮುಂದೆ 'ಅನಿವಾರ್ಯ ಪರಿಣಾಮಗಳಿಗೆ ಆಹ್ವಾನ' ನೀಡಲಿದೆ ಎಂದು ಖಡಕ್ ಎಚ್ಚರಿಕೆ ಕೊಟ್ಟಿದೆ.

ಜಾಗತಿಕ ಭಯೋತ್ಪಾದನೆಯಲ್ಲಿ ಪಾಕಿಸ್ತಾನದ ಪಾತ್ರ ದೊಡ್ಡದಿದೆ ಎಂದು ಆರೋಪ ಮಾಡಿದ ವಿಶ್ವಸಂಸ್ಥೆಯಲ್ಲಿ ಭಾರತದ ಪ್ರಥಮ ಕಾರ್ಯದರ್ಶಿ ಭವಿಕಾ ಮಂಗಳಾನಂದನ್, ಗಡಿಯಾಚೆಗಿನ ಭಯೋತ್ಪಾದನೆಯನ್ನು ತನ್ನ ದೇಶದ ನೀತಿಯನ್ನಾಗಿ ಅಳವಡಿಸಿಕೊಂಡಿರುವ ಪಾಕಿಸ್ತಾನದ ಸುದೀರ್ಘ ಇತಿಹಾಸವನ್ನು ಕೆದಕಿದರು.

ಜಮ್ಮು ಮತ್ತು ಕಾಶ್ಮೀರಕ್ಕೆ ನೀಡಲಾಗಿದ್ದ ವಿಶೇಷ ಸ್ಥಾನಮಾನದ ಸಂವಿಧಾನದ 370ನೇ ವಿಧಿಯನ್ನು ಭಾರತ ಮತ್ತೆ ಜಾರಿಗೆ ತರಬೇಕು ಎಂದು ಒತ್ತಾಯಿಸಿದ್ದ ಪಾಕ್ ಪ್ರಧಾನಿ ಷರೀಫ್, ಉಭಯ ದೇಶಗಳ ನಡುವೆ ಈ ವಿಚಾರವಾಗಿ ಮಾತುಕತೆಗೆ ಆಗ್ರಹಿಸಿದ್ದರು. ಅದಕ್ಕೆ ಭಾರತ ಅಷ್ಟೇ ಹರಿತವಾದ ಪದಗಳಿಂದ ತಕ್ಕ ಉತ್ತರ ನೀಡಿದೆ.





- ವಿಶ್ವಸಂಸ್ಥೆ ಸಾಮಾನ್ಯ ಸಭೆಯಲ್ಲಿ ಭಾರತದ ಪ್ರಥಮ ಕಾರ್ಯದರ್ಶಿ ಭವಿಕಾ ಮಂಗಳಾನಂದನ್ ಚಾಟಿ
- ಉಗ್ರರಿಗೆ ಬೆಂಬಲ ನೀಡುವುದು 'ಅನಿವಾರ್ಯ ಪರಿಣಾಮಗಳಿಗೆ ಆಹ್ವಾನ' ನೀಡಲಿದೆ ಎಂದು ಎಚ್ಚರಿಕೆ
- ಭಯೋತ್ಪಾದನೆ ಕಿತ್ತುಹಾಕದ ಹೊರತು ನಿಮ್ಮೊಂದಿಗೆ ಯಾವ ಮಾತುಕತೆಯೂ ಇಲ್ಲ ಎಂದು ತಪರಾಕಿ

2001ರ ಭಾರತದ ಸಂಸತ್ ಮೇಲಿನ ದಾಳಿ ಮತ್ತು 2008ರ ಮುಂಬಯಿ ದಾಳಿ ಸೇರಿದಂತೆ ಪಾಕಿಸ್ತಾನ ಮೂಲಕ ಭಯೋತ್ಪಾದನಾ ಗುಂಪುಗಳು ನಡೆಸಿದ ಕೃತ್ಯಗಳನ್ನು ಅವರು ಉಲ್ಲೇಖಿಸಿದ್ದಾರೆ.

ಜಗತ್ತಿನಾದ್ಯಂತ ನಡೆದ ಅನೇಕ ಭಯೋತ್ಪಾದನಾ ಘಟನೆಗಳಲ್ಲಿ ಪಾಕಿಸ್ತಾನದ ಬೆರಳಚ್ಚು ಇದೆ. ಈ ಪವಿತ್ರ ಸಭಾಂಗಣದಲ್ಲಿ ಅದರ ಪ್ರಧಾನಿ ಈ ರೀತಿ ಮಾತನಾಡುವುದು ಬಹುಶಃ ಅಚ್ಚರಿಯೇನೂ ಅಲ್ಲ. ಆದರೂ ಅವರ ಮಾತುಗಳನ್ನು ನಮಗೆಲ್ಲ ಸ್ವೀಕಾರಾರ್ಹ ಅಲ್ಲ ಎಂಬುದನ್ನು ನಾವು ಸ್ಪಷ್ಟಪಡಿಸಬೇಕಿದೆ. ಪಾಕಿಸ್ತಾನವು ಸತ್ಯವನ್ನು ಎದುರಿಸಲು ಹೆಚ್ಚಿನ ಸುಳ್ಳುಗಳನ್ನು ಹುಡುಕುತ್ತದೆ ಎನ್ನುವುದು ನಮಗೆ ತಿಳಿದಿದೆ. ಪುನರಾವರ್ತನೆಯು ಯಾವುದನ್ನೂ ಬದಲಿಸುವುದಿಲ್ಲ. ನಮ್ಮ ನಿಲುವು ಸ್ಪಷ್ಟವಾಗಿದೆ ಮತ್ತು ಅದನ್ನು ಮತ್ತೆ ಹೇಳುವ ಅಗತ್ಯವಿಲ್ಲ ಎಂದು ತಪರಾಕಿ ನೀಡಿದ್ದಾರೆ.

**ಮಹಿಳಾ ಅಧಿಕಾರಿ ಭವಿಕಾ ಖಡಕ್ ಮಾತು**

ಕಾಶ್ಮೀರ ವಿಚಾರವನ್ನು ಪ್ರಾದೇಶಿಕ ಶಾಂತಿ ಜತೆ ಥಳಕು ಹಾಕಿದ್ದ ಷರೀಫ್, ಭಾರತದ ಸೇನಾ ವಿಸ್ತರಣೆಯು ಪಾಕಿಸ್ತಾನದ ವಿರುದ್ಧವಾಗಿದೆ ಎಂದು ಆರೋಪಿಸಿದ್ದರು. ಆದರೆ ಪಾಕಿಸ್ತಾನವು ಭಯೋತ್ಪಾದನೆ ಮೂಲಕ ಜಮ್ಮು ಕಾಶ್ಮೀರದಲ್ಲಿ ಮೂಗು ತೂರಿಸುತ್ತಿದೆ.

ಈ ಭಾಗದ ಪ್ರಜಾಸತ್ತಾತ್ಮಕ ಪ್ರಕ್ರಿಯೆಗೆ ಅಡ್ಡಿಪಡಿಸಲು ನೋಡುತ್ತಿದೆ ಎಂದು ಭವಿಕಾ ಕಿಡಿಕಾರಿದ್ದಾರೆ.

### ಇಡೀ ಜಗತ್ತಿಗೇ ಕಾಣಿಸುತ್ತಿದೆ

ಸಾಮಾನ್ಯಸಭೆಯು ಇಂದು ಬೆಳಿಗ್ಗೆ ಹಾಸ್ಯಾಸ್ಪದ ಸಂಗತಿಗೆ ಸಾಕ್ಷಿಯಾಗಿದ್ದು ವಿಷಾದನೀಯ. ಭಯೋತ್ಪಾದನೆ, ಮಾದಕ ವಸ್ತುಗಳ ವ್ಯಾಪಾರ ಮತ್ತು ಅಂತಾರಾಷ್ಟ್ರೀಯ ಅಪರಾಧಗಳಿಗಾಗಿ ಜಾಗತಿಕ ಹೆಗ್ಗಳಿಕೆ ಹೊಂದಿರುವ ಸೇನೆಯಿಂದ ನಡೆಯುವ ಸರ್ಕಾರ ಇರುವ ದೇಶವು, ಜಗತ್ತಿನ ಅತಿ ದೊಡ್ಡ ಪ್ರಜಾಪ್ರಭುತ್ವದ ಮೇಲೆ ದಾಳಿ ನಡೆಸುವ ದಾರ್ಷ್ಟ್ಯತನ ಪ್ರದರ್ಶಿಸಿದೆ. ಪಾಕಿಸ್ತಾನ ನಿಜಕ್ಕೂ ಏನು ಎನ್ನುವುದನ್ನು ಇಡೀ ಜಗತ್ತು ಸ್ವತಃ ಕಾಣಬಹುದಾಗಿದೆ ಎಂದು ಭವಿಕಾ ಚಾಟಿ ಬೀಸಿದ್ದಾರೆ.

### ಉಗ್ರವಾದದ ಜತೆ ರಾಜಿ ಇಲ್ಲ

ಭಯೋತ್ಪಾದನೆಯನ್ನು ನಿರ್ಮೂಲನೆ ಮಾಡದ ಹೊರತು ಪಾಕಿಸ್ತಾನದ ಜತೆ ವ್ಯೂಹಾತ್ಮಕ ನಿಯಂತ್ರಿತ ಆಡಳಿತ ಕುರಿತು ಯಾವುದೇ ಚರ್ಚೆ ಸಾಧ್ಯವಿಲ್ಲ ಎಂದು ಭಾರತ ಪುನರುಚ್ಚರಿಸಿದೆ. ಉಗ್ರವಾದದ ಜತೆ ಯಾವುದೇ ರಾಜಿ ಇಲ್ಲ ಎಂದ ಭವಿಕಾ, ಒಸಾಮ ಬಿನ್ ಲ್ಯಾಡೆನ್‌ಗೆ ಆಶ್ರಯ ನೀಡಿರುವುದು ಸೇರಿದಂತೆ ಜಗತ್ತಿನಾದ್ಯಂತ ನಡೆದ ಅನೇಕ ಭಯೋತ್ಪಾದನಾ ಕೃತ್ಯಗಳಲ್ಲಿ ಪಾಕಿಸ್ತಾನದ ನಂಟು ಇರುವ ಬಗ್ಗೆ ವಿವರಿಸಿದರು.

---

**ಉದಯ ವಾಹಿನಿ**

**ದೇಶ/ವಿದೇಶ**

ಭಾನುವಾರ 29 ಸೆಪ್ಟೆಂಬರ್ 2024 | 07

## ಮಿನಿ ನ್ಯೂಸ್

### ನಮೀಬಿಯಾದಲ್ಲಿ ಆಹಾರ ಕ್ಷಾಮ 27 ಮೆಟ್ರಿಕ್ ಟನ್ ಧಾನ್ಯ ರವಾನೆ

**ನವದೆಹಲಿ:** ನಮೀಬಿಯಾ (ದಕ್ಷಿಣ ಆಫ್ರಿಕಾದ) ದೇಶವು ಭೀಕರ ಕ್ಷಾಮ ಎದುರಿಸುತ್ತಿದ್ದು, ಹಸಿವು ವ್ಯಾಪಕವಾಗಿದ್ದು ಜನರ ಆಹಾರಕ್ಕಾಗಿ 200 ಆನೆ ಸೇರಿದಂತೆ 700 ಕಾಡುಪ್ರಾಣಿಗಳನ್ನು ಕೊಲ್ಲಲು ನಮೀಬಿಯಾ ಸರ್ಕಾರ ಆದೇಶಿಸಿದೆ.

ಈ ಹಿನ್ನಲೆಯಲ್ಲಿ ಅಹಮದಾಬಾದ್‌ನ ಜೈನ ಸಂಘಟನೆ 27 ಮೆಟ್ರಿಕ್ ಟನ್ ಆಹಾರ ಧಾನ್ಯವನ್ನು ನಮೀಬಿಯಾಕ್ಕೆ ಕಳುಹಿಸಿಕೊಟ್ಟಿದೆ. ತಪೋವನ್ ಯೂತ್ ಹೆಸರಿನ ಜೈನ ಸಂಘಟನೆಯು ನಮೀಬಿಯಾ ರಾಯಭಾರ ಕಚೇರಿಯೊಂದಿಗೆ ಈ ಕುರಿತು ಮಾತುಕತೆ ನಡೆಸಿ. ಮನುಷ್ಯರ ಆಹಾರಕ್ಕಾಗಿ ಕಾಡು ಪ್ರಾಣಿಗಳನ್ನು ಕೊಲ್ಲುವುದಿಲ್ಲ ಎಂದು ಲಿಖಿತ ಭರವಸೆ ಪಡೆದುಕೊಂಡಿದೆ. ಇದಲ್ಲದೇ, ಮುಂದೆ ಇಂತಹ ಆದೇಶ ಗಳನ್ನು ನೀಡುವುದಿಲ್ಲ ಎಂದು ನಮೀಬಿಯಾ ಸರ್ಕಾರ ಖಾತರಿ ನೀಡಿದ್ದು, ನಾವು 500 ಮೆಟ್ರಿಕ್ ಟನ್ ಹೆಚ್ಚುವರಿ ಧಾನ್ಯವನ್ನು ಕಳುಹಿಸುತ್ತೇವೆ ಎಂದು ತಿಳಿಸಿದೆ. ಸ್ವತಃ ಗುಜರಾತ್ ಮುಖ್ಯ ಮಂತ್ರಿಯೇ ಈ ಬಗ್ಗೆ ಟ್ವೀಟ್ ಮಾಡಿದ್ದು, ತಪೋವನ ಯುವ ಸಂಘಟನೆಯ ಉದಾತ್ತ ಕಾರ್ಯಕ್ಕೆ ಗುಜರಾತ್ ಸರ್ಕಾರವೂ ಸಂಪೂರ್ಣ ಸಹಕಾರ ನೀಡಲಿದೆ ಎಂದು ಹೇಳಿದ್ದಾರೆ.

### ಭಯೋತ್ಪಾದನೆ ಮುಂದುವರೆದರೆ ಪಾಕ್ 3 ಭಾಗ: ಯೋಗಿ ಆದಿತ್ಯನಾಥ್



**ಕಥುವಾ:** ಪಾಕಿಸ್ತಾನವು ಭಯೋತ್ಪಾದನೆಗೆ ಬೆಂಬಲ ನೀಡುವುದನ್ನು ಮುಂದುವರಿಸಿದರೆ ಅದು ಮೂರು ಭಾಗವಾಗುವುದರಲ್ಲಿ ಯಾವುದೇ ಸಂಶಯವಿಲ್ಲ ಎಂದು ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಹೇಳಿದ್ದಾರೆ .ರಾಜಕೀಯ ಲಾಭಕ್ಕಾಗಿ ಜಮ್ಮು ಮತ್ತು ಕಾಶ್ಮೀರದಲ್ಲಿ ಭಯೋತ್ಪಾದನೆಯನ್ನು ಉತ್ತೇಜಿಸಲಾಗಿದೆ ಎಂದು ಕುಟುಕಿದ್ದಾರೆ.

ಜಮ್ಮು ಮತ್ತು ಕಾಶ್ಮೀರದ ಕಥುವಾದಲ್ಲಿ ನಡೆದ ಚುನಾವಣಾ ಸಮಾವೇಶದಲ್ಲಿ ಪಾಕಿಸ್ತಾನಕ್ಕೆ ಎಚ್ಚರಿಕೆ ನೀಡಿದ ಯೋಗಿ, ಪಾಕಿಸ್ತಾನವನ್ನು ಬೆಂಬಲಿಸುವ ಭಯೋತ್ಪಾದಕರಿಗೂ ಪಾಕಿಸ್ತಾನ ಬೆಲೆ ತೆರಬೇಕಾಗುತ್ತದೆ. ಭಯೋತ್ಪಾದನೆ ಪಾಕಿಸ್ತಾನವನ್ನು ಮೂರು ಭಾಗಗಳಾಗಿ ವಿಭಜಿಸಲು ಕಾರಣವಾಗಬಹುದು ಎಂದು ಎಚ್ಚರಿಸಿದ್ದಾರೆ. ಪಾಕಿಸ್ತಾನ ಆಕ್ರಮಿತ ಕಾಶ್ಮೀರ (ಪಿಒಕೆ) ಭಾರತದೊಂದಿಗೆ ವಿಲೀನಗೊಳ್ಳಲು ಸಿದ್ಧವಾಗಿದೆ. ಅಲ್ಲಿನ ಜನರಿಗೆ ಪಾಕಿಸ್ತಾನದಿಂದ ಸ್ವಾತಂತ್ರ್ಯ ಬೇಕು. ಅವರು ಅಭಿವೃದ್ಧಿ, ಪಡಿತರ, ಶಾಂತಿ ಮತ್ತು ಆಯುಷ್ಮಾನ್ ಆರೋಗ್ಯ ಚೀಟಿಗಳಿಗೆ ಆಗ್ರಹಿಸುತ್ತಿದ್ದಾರೆ. ಆದರೆ, ಇದೆಲ್ಲವೂ ಭಾರತದಲ್ಲಿ ಮಾತ್ರ ಸಾಧ್ಯ ಎಂದು ಪ್ರತಿಪಾದಿಸಿದ್ದಾರೆ.

### ಪಕ್ಷಾಂತರಿಗಳ ಶುದ್ಧೀಕರಣ ಸಮಾರಂಭ

**ಜೈಪುರ:** ಜೈಪುರದಲ್ಲಿ ಕಾಂಗ್ರೆಸ್ ತೊರೆದು ಬಿಜೆಪಿ ಸೇರಿದವರನ್ನು ಶುದ್ಧೀಕರಣ ಮಾಡಿರುವ ಪ್ರಸಂಗ ನಡೆದಿದೆ. ಪಕ್ಷಾಂತರಿಗಳಿಗೆ ಗಂಗಾ ಜಲ ಮತ್ತು ಗೋಮೂತ್ರ ಪ್ರೋಕ್ಷಣೆ ಮಾಡಿ ಶಾಸಕ ಬಾಲಮುಕುಂದ್ ಆಚಾರ್ಯ ಪಕ್ಷಕ್ಕೆ ಸ್ವಾಗತಿಸಿದ್ದಾರೆ. ಜೈಪುರ ಮುನ್ಸಿಪಲ್ ಕಾರ್ಪೊರೇಷನ್ ಹೆರಿಟೇಜ್ ಕಚೇರಿಯನ್ನು ಭ್ರಷ್ಟಾಚಾರದ ಆರೋಪದಿಂದ ಮುಕ್ತಗೊಳಿಸಬೇಕೆಂದು ಹವಾ ಮಹಲ್ ಶಾಸಕ ಆಚಾರ್ಯ ಅವರು, ಗಂಗಾ ಜಲ ಮತ್ತು ಗೋಮೂತ್ರ ಮಿಶ್ರಣವನ್ನು ಕೌನ್ಸಿಲರ್‌ಗಳು ಮತ್ತು ಕಚೇರಿ ಆವರಣದ ಮೇಲೆ ಸಿಂಪಡಿಸಿದ್ದಾರೆ. ಭ್ರಷ್ಟಾಚಾರದ ಆರೋಪ ಹೊತ್ತಿದ್ದ ಮಾಜಿ ಮೇಯರ್ ಮುನೇಶ್ ಗುರ್ಜರ್ ಅವರ ಜಾಗಕ್ಕೆ ಕುಸುಮ್ ಯಾದವ್ ಅವರನ್ನು ಆಯ್ಕೆ ಮಾಡಲಾಗಿದೆ. ಅವರಿಗೆ ಕಾಂಗ್ರೆಸ್ 7 ಮತ್ತು ಪಕ್ಷೇತರ ಒಬ್ಬ ಸದಸ್ಯರ ಬೆಂಬಲ ನೀಡಿದ್ದಾರೆ. ಇವರೆಲ್ಲ ಬಿಜೆಪಿ ಸೇರ್ಪಡೆಯಾದರು.

ಈ ಎಂಟು ಮಂದಿ ಬಿಜೆಪಿ ಸೇರಿದ್ದಾರೆ. ಯಾದವ್ ಬುಧವಾರ ಅಧಿಕಾರ ವಹಿಸಿಕೊಳ್ಳುವ ಮೊದಲು, ಶಾಸಕ ಆಚಾರ್ಯ ಅವರು ಜೆಎಂಸಿಎಚ್ ಆವರಣ, ಕೌನ್ಸಿಲರ್‌ಗಳು ಮತ್ತು ಅಧಿಕಾರಿ ಗಳಿಗೆ ಶುದ್ಧೀಕರಣ ಸಮಾರಂಭ ನಡೆಸಿದ್ದಾರೆ.

### ಮುಂಬೈನಲ್ಲಿ ಉಗ್ರರ ದಾಳಿ ಸಾಧ್ಯತೆ, ಗುಪ್ತಚರ ಸಂಸ್ಥೆಗಳ ಎಚ್ಚರಿಕೆ

**ಮುಂಬೈ:** ವಾಣಿಜ್ಯ ರಾಜಧಾನಿ ಮೇಲೆ ಮತ್ತೆ ಉಗ್ರರು ದಾಳಿ ನಡೆಸುವ ಸಾಧ್ಯತೆಗಳಿವೆ ಎಂದು ಕೇಂದ್ರ ತನಿಖಾ ಸಂಸ್ಥೆಗಳು ಎಚ್ಚರಿಕೆ ನೀಡಿವೆ. ಭಯೋತ್ಪಾದನಾ ಬೆದರಿಕೆಯ ಕುರಿತು ಕೇಂದ್ರ ಏಜೆನ್ಸಿಗಳು ಎಚ್ಚರಿಕೆ ನೀಡಿದ ನಂತರ ಮುಂಬೈ ಪೊಲೀಸರು ಜನನಿಬಿಡ ಪ್ರದೇಶಗಳಲ್ಲಿ ಭದ್ರತೆಯನ್ನು ಹೆಚ್ಚಿಸಿದ್ದಾರೆ. ಪೊಲೀಸ್ ಮೂಲಗಳ ಪ್ರಕಾರ, ಮುಂಬೈನ ಅನೇಕ ಧಾರ್ಮಿಕ ಸ್ಥಳಗಳು ಮತ್ತು ಇತರ ಜನನಿಬಿಡ ಸ್ಥಳಗಳಲ್ಲಿ ಭದ್ರತಾ ವ್ಯವಸ್ಥೆಗಳನ್ನು ಹೆಚ್ಚಿಸಲಾಗಿದೆ. ಧಾರ್ಮಿಕ ಮತ್ತು ಜನಸಂದಣಿ ಇರುವ ಸ್ಥಳಗಳಲ್ಲಿ ಮಾಕ್ ಡ್ರಿಲ್ ನಡೆಸಲು ಪೊಲೀಸ್ ಸಿಬ್ಬಂದಿಗೆ ತಿಳಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ನಗರದ ಡಿಸಿಪಿಗಳು (ಡೆಪ್ಯುಟಿ ಕಮಿಷನರ್ ಆಫ್ ಪೊಲೀಸ್) ತಮ ತಮ ವಲಯಗಳಲ್ಲಿ ಭದ್ರತಾ ವ್ಯವಸ್ಥೆಗಳ ಬಗ್ಗೆ ವಿಶೇಷ ಗಮನ ಹರಿಸುವಂತೆ ಕೇಳಲಾಗಿದೆ. ಮುಂಜಾಗ್ರತಾ ಕ್ರಮವಾಗಿ ಯಾವುದೇ ಅನುಮಾನಾಸ್ಪದ ಚಟುವಟಿಕೆ ಕಂಡುಬಂದಲ್ಲಿ ಮಾಹಿತಿ ನೀಡುವಂತೆ ನಗರದ ದೇವಸ್ಥಾನಗಳಿಗೆ ಸೂಚನೆ ನೀಡಲಾಗಿದೆ ಎಂದು ಮೂಲಗಳು ತಿಳಿಸಿವೆ.

### ಭಾರತವಿಲ್ಲದೆ ಬಾಂಗ್ಲಾ ಪರಿಸ್ಥಿತಿ ಸುಧಾರಿಸಲು ಸಾಧ್ಯವಿಲ್ಲ : ಸಹಾ

**ಅಗರ್ತಲಾ:** ಭಾರತವಿಲ್ಲದೆ ಬಾಂಗ್ಲಾದೇಶದ ಪರಿಸ್ಥಿತಿ ಸುಧಾರಿಸಲು ಸಾಧ್ಯವಿಲ್ಲ ಎಂದು ತ್ರಿಪುರಾ ಮುಖ್ಯಮಂತ್ರಿ ಮಾಣಿಕ್ ಸಹಾ ಹೇಳಿದ್ದಾರೆ.ವಿಶ್ವ ಪ್ರವಾಸೋದ್ಯಮ ದಿನದ ಸರ್ಕಾರಿ ಸಮಾರಂಭದಲ್ಲಿ ಮಾತನಾಡಿದ ಅವರು, ಬಾಂಗ್ಲಾದೇಶದ ಜನರು ತಮ ಸ್ವಾತಂತ್ರ್ಯಕ್ಕೆ ಭಾರತ ನೀಡಿದ ಕೊಡುಗೆಯನ್ನು ಸರಿಸಬೇಕು. ಬಾಂಗ್ಲಾದೇಶದ ಬಗ್ಗೆ ಮಾತನಾಡುವುದರಲ್ಲಿ ಅರ್ಥವಿಲ್ಲ, ನಾವು ಬಾಂಗ್ಲಾದೇಶಕ್ಕೆ ವಿಮಾನ ಸೇವೆಗಳು ಪ್ರಾರಂಭವಾಗುತ್ತವೆ ಎಂದು ನಾವು ಭಾವಿಸಿದ್ದೇವೆ, ಆದರೆ ಪ್ರಸ್ತುತ ಪರಿಸ್ಥಿತಿ ಭಾರತವಿಲ್ಲದೆ, ಬಾಂಗ್ಲಾದೇಶದ ಪರಿಸ್ಥಿತಿ ಸುಧಾರಿಸಲು ಸಾಧ್ಯವಿಲ್ಲದ ಕಾರಣ ಇದು ಖಂಡಿತವಾಗಿ ಸಂಭವಿಸುತ್ತದೆ ಎಂದಿದ್ದಾರೆ.

ಅವರು ಅದನ್ನು ಅರ್ಥಮಾಡಿಕೊಳ್ಳಬೇಕು. ನಮ ಸೇನೆ ಮಾಡಿದ ತ್ಯಾಗ ಮತ್ತು ಬಾಂಗ್ಲಾದೇಶದ ಸ್ವಾತಂತ್ರ್ಯಕ್ಕಾಗಿ ನಮ ಜನರು ನೀಡಿದ ಸಹಾಯವನ್ನು ಮರೆಯಬಾರದು ಎಂದು ಅವರು ಹೇಳಿದರು. ನಾನು ಅವರನ್ನು ಪದೇ ಪದೇ ಕೇಳುತ್ತೇನೆ, ತ್ರಿಪುರಾದ ಜನರು ನಿಮ ಸ್ವಾತಂತ್ರ್ಯಕ್ಕಾಗಿ ಹೇಗೆ ಸಹಾಯ ಮಾಡಿದರು ಎಂಬುದನ್ನು ನೆನಪಿಸಿಕೊಳ್ಳಿ. ನಾವು ಸಾಧ್ಯವಿರುವ ಎಲ್ಲಾ ರೀತಿಯಲ್ಲಿ ಸಹಾಯವನ್ನು ನೀಡಿದ್ದೇವೆ ಇದು ಬಾಂಗ್ಲಾದೇಶದ ರೀತಿಯಲ್ಲಿ ಮುಂದುವರಿಯಲು ಸಾಧ್ಯವಿಲ್ಲ ಎಂದು ಅವರು ಹೇಳಿದರು.



# ಫೆ.10ರಂದು ಸಿದ್ಧಾರ್ಥ್ ಮಹೇಶ್ ಮದುವೆ

'ಸಿಪಾಯಿ', 'ಗರುಡ' ಚಿತ್ರಗಳ ನಟ ಸಿದ್ಧಾರ್ಥ್ ಮಹೇಶ್ ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. ಮುಂದಿನ ವರ್ಷ ಫೆಬ್ರವರಿಯಲ್ಲಿ ದಾಂಪತ್ಯ ಜೀವನಕ್ಕೆ ಕಾಲಿಡಲು ಸಜ್ಜಾಗಿದ್ದಾರೆ. ನಟ ಕಮ್ ನಿರ್ಮಾಪಕನಾಗಿ ಗುರುತಿಸಿಕೊಂಡಿರುವ ಸಿದ್ಧಾರ್ಥ್ ಮಹೇಶ್ ಇದೇ ಫೆ.10ರಂದು ಬೆಂಗಳೂರಿನ ಪ್ಯಾಲೇಸ್ ಗ್ರೌಂಡ್‌ನಲ್ಲಿ ವೈಷ್ಣವಿ ಜೊತೆ ಹೊಸ ಬಾಳಿಗೆ ಕಾಲಿಡಲು ರೆಡಿಯಾಗಿದ್ದಾರೆ. ಮೂಲತಃ ವೈಷ್ಣವಿ ಅವರು ಆಂಧ್ರಪ್ರದೇಶದವರಾಗಿದ್ದು, ಇಂಜಿನಿಯರಿಂಗ್ ಓದಿದ್ದಾರೆ. ಸಿದ್ಧಾರ್ಥ್ ಮತ್ತು ವೈಷ್ಣವಿ ಅವರದ್ದು, ಗುರುಹಿರಿಯರು ನಿಶ್ಚಯಿಸಿದ ಅರೇಂಜ್ ಮ್ಯಾರೇಜ್ ಆಗಿದೆ. ಈ ಮದುವೆಗೆ ಸ್ಯಾಂಡಲ್‌ವುಡ್‌ನ ಕಲಾವಿದರು ಮತ್ತು ರಾಜಕೀಯ ಗಣ್ಯರು ಭಾಗಿಯಾಗಿದ್ದಾರೆ. ದಾಂಪತ್ಯ ಜೀವನಕ್ಕೆ ಕಾಲಿಡಲು ರೆಡಿಯಾಗಿರುವ ನಟನಿಗೆ ಫ್ಯಾನ್ಸ್ ಶುಭಹಾರೈಸಿದ್ದಾರೆ.



# ನಾನು ಬಿಗ್ ಬಾಸ್‌ಗೆ ಹೋಗುತ್ತಿಲ್ಲ

'ಬಿಗ್ ಬಾಸ್ ಕನ್ನಡ 11'ರ ಶುರುವಿಗೆ ಕೌಂಟ್ ಡೌನ್ ಶುರುವಾಗಿದೆ. ಇದೇ ಸೆ.29ರಂದು ಬಿಗ್ ಬಾಸ್ ಶೋಗೆ ಅದ್ಧೂರಿ ಚಾಲನೆ ಸಿಗಲಿದೆ. ಇನ್ನೂ ದೊಡ್ಮನೆ ಆಟಕ್ಕೆ 'ಕನ್ನಡತಿ' ಖ್ಯಾತಿಯ ಕಿರಣ್ ರಾಜ್ ಎಂಟ್ರಿ ಕೊಡುವ ಬಗ್ಗೆ ಭಾರೀ ಚರ್ಚೆ ಶುರುವಾಗಿತ್ತು. ಇದೀಗ ಹರಿದಾಡುತ್ತಿರುವ ಸುದ್ದಿಗೆ ನಟ ಕ್ಲ್ಯಾರಿಟಿ ನೀಡಿದ್ದಾರೆ.

ಕಿರಣ್ ರಾಜ್ ಈ ಬಾರಿ ಬಿಗ್ ಬಾಸ್ ಹೋಗಲಿದ್ದಾರೆ ಎನ್ನಲಾದ ಸುದ್ದಿಯೊಂದು ಸೋಶಿಯಲ್ ಮೀಡಿಯಾದಲ್ಲಿ ಹರಿದಾಡಿತ್ತು. ಆದರೆ ಯಾವುದಕ್ಕೂ ಸ್ಪಷ್ಟನೆ ಇರಲಿಲ್ಲ. ಇದೀಗ 'ರಾನಿ' ಸಿನಿಮಾಗೆ ಪ್ರೀತಿ ತೋರಿಸಿದ್ದಕ್ಕೆ ಧನ್ಯವಾದಗಳು. ನಾನು ಬಿಗ್ ಬಾಸ್‌ಗೆ ಹೋಗುತ್ತಿಲ್ಲ. ಇದೆಲ್ಲಾ ರೂಮರ್ಸ್ ಎಂದು ನಟ ಸ್ಪಷ್ಟನೆ ನೀಡಿದ್ದಾರೆ. ಅಂದಹಾಗೆ, ಇಂದಿನ 'ರಾಜ ರಾಣಿ' ಶೋನಲ್ಲಿ ಸಂಜೆ 6 ಗಂಟೆ ಗ್ರ್ಯಾಂಡ್ ಫಿನಾಲೆ ಶುರುವಾಗಲಿದೆ. ಈ ಶೋನಲ್ಲಿ 5 ಬಿಗ್ ಬಾಸ್ ಸ್ಪರ್ಧಿಗಳ ಹೆಸರು ರಿವೀಲ್ ಆಗಲಿದೆ. ಕಾರ್ಯಕ್ರಮ ಆರಂಭಕ್ಕೂ ಮುಂಚೆಯೇ ಆ ಸ್ಪರ್ಧಿಗಳ ಹೆಸರು ರಿವೀಲ್ ಆಗುತ್ತಿರೋದು ಇದೇ ಮೊದಲ ಬಾರಿ ಆಗಿದೆ.

# 'ಧೂಮ್-4'ಗೆ ನಾಯಕ ಫಿಕ್ಸ್..!

## ಸಿನಿಮಾದ ಹೀರೋ ಯಾರಾಗ್ತಾರೆ ಅಂತಾ ಕಾಯ್ತಿದ್ದ ಫ್ಯಾನ್ಸ್



ಬಾಲಿವುಡ್ ಅಷ್ಟೇ ಅಲ್ಲ ದೇಶ ವಿದೇಶದಲ್ಲೂ ತೆರೆಕಂಡು ಗಲ್ಲಾಪೆಟ್ಟಿಗೆಯಲ್ಲಿ ಸೌಂಡ್ ಮಾಡಿದ 'ಧೂಮ್ ಸಿರೀಸ್ ಪಾರ್ಟ್-4' ಯಾವಾಗ ಅನೌನ್ಸ್ ಆಗುತ್ತೆ, ಸಿನಿಮಾದ ಹೀರೋ ಯಾರಾಗ್ತಾರೆ ಅಂತಾ ಕಾಯ್ತಿದ್ದ ಫ್ಯಾನ್ಸ್ ಸಂಭ್ರಮಪಡುವ ಸುದ್ದಿಯೊಂದು ಸಿಕ್ಕಿದೆ. ಇನ್ನೊಂದು ವಿಶೇಷ ಅಂದರೆ, ನಟ ರಣಬೀರ್ ಕಪೂರ್ ಹುಟ್ಟುಹಬ್ಬದ ದಿನವೇ (ಸೆ.28) ಈ ಗುಡ್ ನ್ಯೂಸ್ ಸಿಕ್ಕಿರೋದು ಅಭಿಮಾನಿಗಳಿಗೆ ಡಬಲ್ ಧಮಾಕ. ವೆರಿ ಸಕ್ಸಸ್‌ಫುಲ್ ಧೂಮ್ ಸಿರೀಸ್‌ನ ಮುಂದುವರೆದ ಭಾಗ-4 ಸಿನಿಮಾದ ಬಗ್ಗೆ ಇದ್ದ ಕನ್ಫ್ಯೂಷನ್ಸ್ ಈಗ ಕ್ಲಿಯರ್ ಆಗಿವೆ. ಸಿನಿಮಾದ ನಾಯಕ ರಣಬೀರ್ ಕಪೂರ್ ಅಂತ ಚಿತ್ರತಂಡ ಘೋಷಣೆ ಮಾಡಿದೆ. ಅದ್ರಲ್ಲೂ ಈ ಸಿನಿಮಾ ರಣಬೀರ್ ಕೆರಿಯರ್‌ನ 25ನೇ ಚಿತ್ರ ಅನ್ನೋದು ಮತ್ತೊಂದು ವಿಶೇಷ. ರಣಬೀರ್ ಕಪೂರ್ ಹುಟ್ಟುಹಬ್ಬದ ಗಿಫ್ಟ್ ಆಗಿ ಅಭಿಮಾನಿಗಳ ಸಂಭ್ರಮ ದುಪ್ಪಟ್ಟು ಮಾಡಿದೆ.

ಭಾರತೀಯ ಚಿತ್ರರಂಗದಲ್ಲಿ 'ಧೂಮ್-4' ಮೇಲೆ ಕಂಡಾಪಟ್ಟೆ ನಿರೀಕ್ಷೆಗಳನ್ನ ಇಟ್ಟುಕೊಂಡವರಿಗೆ ಬೆಂಕಿ ನ್ಯೂಸ್‌ವೊಂದು ಸಿಕ್ಕಿದೆ. ಅನಿಮಲ್ ಸಕ್ಸಸ್‌ನ ನಂತರ ರಣಬೀರ್ ಮೈಥಾಲಾಜಿಕಲ್ ರಾಮಾಯಣ ಸಿನಿಮಾದಲ್ಲಿ ಬ್ಯುಸಿಯಾಗಿದ್ದಾರೆ. ರಾಮಾಯಣ ಬಳಿಕ ಬಿಗ್ ಬಜೆಟ್‌ನ ಧೂಮ್-4 ಚಿತ್ರದಲ್ಲಿ ರಣಬೀರ್ ಭಾಗಿಯಾಗಲಿದ್ದಾರೆ. ಈಗಾಗಲೇ ಮೂರು ಭಾಗಗಳಲ್ಲಿ ಕಮಾಲ್ ಮಾಡಿರುವ ಧೂಮ್ ಮೇಲೆ ನಿರೀಕ್ಷೆ ಇಟ್ಟುಕೊಂಡಿದೆ ಭಕ್ತಗಣ. ಧೂಮ್, ಧೂಮ್-2 ಹಾಗೂ ಧೂಮ್-3 ವಿಭಿನ್ನ ರೀತಿಯ ಮೇಕಿಂಗ್, ಸಾಂಗ್ಸ್ ಮೂಲಕ ಅಟ್ರ್ಯಾಕ್ಟ್ ಮಾಡಿದೆ. ಇದೀಗ ಧೂಮ್-4 ವಿಭಿನ್ನ ರೀತಿಯ ಎಂಟರ್‌ಟೈನ್ಮೆಂಟ್ ನೀಡೋಕೆ ಭಾರೀ ತಯಾರಿ ಮಾಡಿಕೊಳ್ಳುತ್ತಿದೆ. ಸದ್ಯ ರಣಬೀರ್ ನಾಯಕ ಅನ್ನೋ ಮಾಹಿತಿ ಹಂಚಿಕೊಂಡಿದೆ ಚಿತ್ರತಂಡ. ಇನ್ನು ಮುಂದಿನ ದಿನಗಳಲ್ಲಿ ಚಿತ್ರದ ಕಂಪ್ಲೀಟ್ ಮಾಹಿತಿ ಹಂಚಿಕೊಳ್ಳಲಿದೆ ಚಿತ್ರತಂಡ.

# 'ಹ್ಯಾರಿ ಪಾಟರ್' ಚಿತ್ರದ ನಟಿ ಮ್ಯಾಗಿ ಸ್ಮಿತ್ ನಿಧನ

ಹಾಲಿವುಡ್‌ನ ಜನಪ್ರಿಯ ನಟಿ ಮ್ಯಾಗಿ ಸ್ಮಿತ್ ಅವರು ನಿಧನರಾಗಿದ್ದಾರೆ. 'ಹ್ಯಾರಿ ಪಾಟರ್' ಖ್ಯಾತಿಯ ನಟಿ ಮ್ಯಾಗಿ ಸ್ಮಿತ್ 89ನೇ ವಯಸ್ಸಿಗೆ ಇಹಲೋಕ ತ್ಯಜಿಸಿದ್ದಾರೆ. ಆಸ್ಕರ್ ಪ್ರಶಸ್ತಿ ವಿಜೇತ ನಟಿ ಮ್ಯಾಗಿ ಸ್ಮಿತ್ ಅವರು ಇಬ್ಬರೂ ಮಕ್ಕಳು ಮತ್ತು 5 ಜನ ಮೊಮ್ಮಕ್ಕಳನ್ನು ಅಗಲಿದ್ದಾರೆ. ಮ್ಯಾಗಿ ಸ್ಮಿತ್ ಅವರು ಸೆ.27ರಂದು ನಿಧನರಾಗಿದ್ದು, ಈ ವಿಚಾರವನ್ನು ಮಕ್ಕಳು ಅಧಿಕೃತವಾಗಿ ಮಾಧ್ಯಮಕ್ಕೆ ತಿಳಿಸಿದ್ದಾರೆ.



ಅಂದಹಾಗೆ, ಮ್ಯಾಗಿ ಸ್ಮಿತ್ ಸುಮಾರು 50ಕ್ಕೂ ಅಧಿಕ ಸಿನಿಮಾಗಳಲ್ಲಿ ನಟಿಸಿದ್ದಾರೆ. 60ರ ದಶಕದಿಂದ ಸಿನಿಮಾಗಳಲ್ಲಿ ನಟಿಸುವುದ್ದಕ್ಕೆ ಆರಂಭಿಸಿದ್ದ ಮ್ಯಾಗಿ ಸ್ಮಿತ್ ಹಲವು ಜನಪ್ರಿಯ ಸಿನಿಮಾಗಳಲ್ಲಿ ನಟಿಸಿ ಗಮನ ಸೆಳೆದಿದ್ದಾರೆ. ಇವರ ವೃತ್ತಿ ಬದುಕಿನಲ್ಲಿ ಎರಡು ಆಸ್ಕರ್ ಪ್ರಶಸ್ತಿಗಳು ಲಭಿಸಿವೆ.


# ಬೆಚ್ಚಿ ಬೀಳಿಸಲು ಬಂದ ವಿದ್ಯಾ ಬಾಲನ್



ಕಾರ್ತಿಕ್ ಆರ್ಯನ್ ನಟನೆಯ 'ಭೂಲ್ ಭೂಲಯ್ಯ 3' ಸಿನಿಮಾದ ಟೀಸರ್ ರಿಲೀಸ್ ಆಗಿದೆ. ದೆವ್ವದ ರೂಪದಲ್ಲಿ ವಿದ್ಯಾ ಬಾಲನ್ ಬೆಚ್ಚಿ ಬೀಳಿಸಿರುವ ತುಣುಕು ನೋಡಿ ಫ್ಯಾನ್ಸ್ ಬೆರಗಾಗಿದ್ದಾರೆ. ಚಿತ್ರದ ಟೀಸರ್ ಇದೀಗ ಟ್ರೆಂಡಿಂಗ್‌ನಲ್ಲಿದೆ. 'ಭೂಲ್ ಭೂಲಯ್ಯ 2' ಚಿತ್ರದ ಸಕ್ಸಸ್ ನಂತರ ಇದರ ಪಾರ್ಟ್ 3ನಲ್ಲಿ ಕಾರ್ತಿಕ್ ಆರ್ಯನ್ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಅವರಿಗೆ ಜೋಡಿಯಾಗಿ ತೃಪ್ತಿ ದಿಮ್ರಿ ಕಾಣಿಸಿಕೊಂಡಿದ್ದಾರೆ. ಮಂಜುಲಿಕಾ ಆಗಿ ಹೆದರಿಸಲು ವಿದ್ಯಾ ಬಾಲನ್ ಟೊಂಕ ಕಟ್ಟಿ ನಿಂತಿದ್ದಾರೆ. ಟೀಸರ್ ಝಲಕ್ ಭಯಾನಕವಾಗಿ ಮೂಡಿ ಬಂದಿದೆ. ಹಾಟ್ ಬ್ಯೂಟಿ ವಿದ್ಯಾ ಬಾಲನ್ ಈ ಬಾರಿ ದೆವ್ವದ ಅವತಾರದಲ್ಲಿ ಎಂಟ್ರಿ ಕೊಟ್ಟಿದ್ದಾರೆ. ವಿದ್ಯಾ ಬಾಲನ್ ಮತ್ತು ಕಾರ್ತಿಕ್ ಆರ್ಯನ್ ಜಟಾಪಟಿ ತೋರಿಸಲಾಗಿದೆ. ಬಿಟ್ಟಿರುವ ಟೀಸರ್‌ನಿಂದ ಚಿತ್ರದ ಕುರಿತು ಕುತೂಹಲ ಕೆರಳಿಸಿದೆ. ಇದೇ ದೀಪಾವಳಿ ಹಬ್ಬದ ಸಂದರ್ಭದಲ್ಲಿ ಸಿನಿಮಾ ರಿಲೀಸ್ ಆಗಲಿದೆ.

# ಮಗಳ ಮುಖ ರಿವೀಲ್ ಮಾಡಿದ ಮಿಲನಾ ದಂಪತಿ






ಸ್ಯಾಂಡಲ್‌ವುಡ್ ನಟಿ ಮಿಲನಾ ಇತ್ತೀಚೆಗೆ ಹೆಣ್ಣು ಮಗುವಿಗೆ ಜನ್ಮ ನೀಡಿದ್ದರು. ಇದೀಗ ಮುದ್ದು ಮಗಳನ್ನು ಮನೆ ತುಂಬಿಸಿಕೊಂಡಿದ್ದಾರೆ. ಇನ್ನೂ ಮಗಳನ್ನು ಬರಮಾಡಿಕೊಳ್ಳುತ್ತಿರುವ ವಿಶೇಷ ವಿಡಿಯೋವನ್ನು ಮಿಲನಾ ದಂಪತಿ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಜೊತೆಗೆ ಮಗಳ ಮುಖವನ್ನು ಮೊದಲ ಬಾರಿಗೆ ರಿವೀಲ್ ಮಾಡಿದ್ದಾರೆ. ನಮ್ಮ ಪುಟ್ಟ ಪ್ರಪಂಚಕ್ಕೆ ಸ್ವಾಗತ 'ಪರಿ' ಎಂದು ಅಡಿಬರಹ ನೀಡಿ ಮಗಳ ಸ್ಪೆಷಲ್ ವಿಡಿಯೋವನ್ನು ಹಂಚಿಕೊಂಡಿದ್ದಾರೆ. ಡಾರ್ಲಿಂಗ್ ಕೃಷ್ಣ ಮಗುವನ್ನು ತಮ್ಮ ಕೈಯಲ್ಲಿ ಎತ್ತಿಕೊಂಡು ಪತ್ನಿ ಮಿಲನಾ ಜೊತೆಗೆ ಮನೆಯೊಳಗೆ ಕಾಲಿಟ್ಟಿದ್ದಾರೆ. ಈ ವೇಳೆ, ಮನೆಯ ತುಂಬಾ ಬಲೂನ್‌ಗಳಿಂದ ಅಲಂಕಾರ ಮಾಡಲಾಗಿದೆ. ಬಳಿಕ ಕೇಕ್ ಕತ್ತರಿಸಿ ಸಂಭ್ರಮಿಸಿದ್ದಾರೆ. ಡಾರ್ಲಿಂಗ್ ಕೃಷ್ಣ ಅವರು ಮಗುವಿನ ಮುಖವನ್ನು ರಿವೀಲ್ ಮಾಡಿದ್ದಾರೆ. ಜೊತೆಗೆ 'ಪರಿ' ಎಂದು ಮಗಳಿಗೆ ಚೆಂದದ ಹೆಸರನ್ನು ಇಟ್ಟಿದ್ದಾರೆ. ಇನ್ನೂ ಹಿಂದಿ ಭಾಷೆಯಲ್ಲಿ 'ಪರಿ' ಅಂದರೆ ಅಪ್ಸರೆ ಎಂದರ್ಥವಾಗಿದೆ. ಒಟ್ನಲ್ಲಿ ಮಗುವಿನ ಮುಖ ನೋಡಿ ಫ್ಯಾನ್ಸ್ ಖುಷಿಪಟ್ಟಿದ್ದಾರೆ. ಮಗುವಿನ ಆಗಮನದ ಖುಷಿಯಲ್ಲಿರುವ ಜೋಡಿಗೆ ಅಭಿಮಾನಿಗಳು ಶುಭಕೋರಿದ್ದಾರೆ. ಅಂದಹಾಗೆ, ಕೃಷ್ಣ ಮತ್ತು ಮಿಲನಾ ಜೋಡಿ ಹಲವು ವರ್ಷಗಳ ಪ್ರೀತಿಗೆ 2021ರಲ್ಲಿ ಮದುವೆಯ ಮುದ್ರೆ ಒತ್ತಿದ್ದರು.

# ಶುಭ್‌ಮನ್ ಗಿಲ್ ಕೆಟ್ಟ ಬ್ಯಾಟ್ಸ್‌ಮನ್

## ಸರ್ಫರಾಜ್ ಖಾನ್ ಹೇಳಿದ್ದು ನಿಜವೇ

ಸೋಷಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿರುವ ವಿಡಯೋದಲ್ಲಿ ಭಾರತೀಯ ಕ್ರಿಕೆಟಿಗ ಸರ್ಫರಾಜ್ ಖಾನ್ ತನ್ನ ಸಹ ಆಟಗಾರ ಶುಭ್‌ಮನ್ ಗಿಲ್ ಅವರನ್ನು ಕೆಟ್ಟ ಆಟಗಾರ ಎಂದು ಕರೆದಿದ್ದಾರೆ ಎಂದು ಆರೋಪಿಸಲಾಗಿದೆ. ಈ ವೈರಲ್ ಸುದ್ದಿಯ ನಿಜಾಂಶ ಇಲ್ಲಿದೆ ಓದಿ. ಟೀಮ್ ಇಂಡಿಯಾದ ಯುವ ಸ್ಟಾರ್ ಆಟಗಾರ ಸರ್ಫರಾಜ್ ಖಾನ್ ಅವರ ವಿಡಿಯೋ ಒಂದು ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗುತ್ತಿದೆ. ಈ ವಿಡಿಯೋದಲ್ಲಿ ಅವರು ಸರ್ಫರಾಜ್ ಅವರು ಕ್ರಿಕೆಟ್ ಮೈದಾನದಲ್ಲಿ ಸಂದರ್ಶನ ನೀಡುತ್ತಿದ್ದಾರೆ. ಮಾತನಾಡುವ ವೇಳೆ ಖಾನ್ ಅವರು ಶುಭ್‌ಮನ್ ಗಿಲ್ ಅವರನ್ನು ಟೀಕಿಸಿದ್ದು, ಕೆಟ್ಟ ಬ್ಯಾಟ್ಸ್‌ಮನ್ ಎಂದು ಕರೆದು ಅಪಹಾಸ್ಯ ಮಾಡಿದ್ದಾರೆ. ಈ ಕುರಿತು ಅನೇಕ ಪೋಸ್ಟ್‌ಗಳು ಯೂಟ್ಯೂಬ್ ಮತ್ತು ಎಕ್ಸ್‌ನಲ್ಲಿ ಹರಿದಾಡುತ್ತಿದೆ. ಸ್ಪೋರ್ಟ್ಸ್ ವಿಥ್ ನವೀನ್ ಎಂಬ ಎಕ್ಸ್ ಬಳಕೆದಾರರು ಈ ವಿಡಿಯೋವನ್ನು ಹಂಚಿಕೊಂಡು ''ಸರ್ಫರಾಜ್ ಖಾನ್ ಅವರು ಗಿಲ್ ಮತ್ತು ರುತುರಾಜ್ ಗಾಯಕ್ವಾಡ್ ಬಗ್ಗೆ ಮಾತನಾಡಿರುವುದು'' ಎಂಬ ಶೀರ್ಷಿಕೆ ನೀಡಿದ್ದಾರೆ. ವೈರಲ್ ವಿಡಿಯೋದ ಸತ್ಯಾಸತ್ಯತೆಯನ್ನು ಪರಿಶೀಲಿಸಲು, ನಾವು ಸಂಬಂಧಿತ ಕೀವರ್ಡ್‌ಗಳನ್ನು ಬಳಸಿಕೊಂಡು ಗೂಗಲ್ ಸರ್ಚ್ ನಡೆಸಿದ್ದೇವೆ. ಆಗ 22 ಜನವರಿ 2023 ರಂದು ಅಪ್‌ಲೋಡ್ ಕ್ರೀಡಾ ಪತ್ರಕರ್ತ ವಿಮಲ್ ಕುಮಾರ್ ಅವರ ಅಧಿಕೃತ ಯೂಟ್ಯೂಬ್ ಚಾನೆಲ್‌ನಲ್ಲಿ ಇದೇ ವೀಡಿಯೊವನ್ನು ಕಂಡುಕೊಂಡಿದ್ದೇವೆ. 7.47 ನಿಮಿಷಗಳ ಈ ವಿಡಿಯೋದಲ್ಲಿ, ಪತ್ರಕರ್ತ ಸರ್ಫರಾಜ್ ಅವರ ಕಠಿಣ ಪರಿಶ್ರಮ ಮತ್ತು ಅವರ ಅನುಭವದ ಬಗ್ಗೆ ಕೇಳುತ್ತಾರೆ, ಹಾಗೆಯೆ ಸರ್ಫರಾಜ್ ಅವರ ವೃತ್ತಿಜೀವನದ ಬಗ್ಗೆ, ರಣಜಿ ಟ್ರೋಫಿ, ಐಪಿಎಲ್ ಮತ್ತು ದೇಶವನ್ನು ಪ್ರತಿನಿಧಿಸುವ ಬಗ್ಗೆ ಮಾತನಾಡಲಾಗಿದೆ. ಇದರಲ್ಲಿ ಎಲ್ಲಿಯೂ ಅವರು ಗಿಲ್ ಬಗ್ಗೆ ಯಾವುದೇ ಟೀಕೆಗಳನ್ನು ಮಾಡಿಲ್ಲ. ಅಲ್ಲದೆ, ವೈರಲ್ ವೀಡಿಯೊದಲ್ಲಿನ ಧ್ವನಿಯು ಸರ್ಫರಾಜ್ ಖಾನ್ ಅವರ ಧ್ವನಿಗಿಂತ ಭಿನ್ನವಾಗಿದೆ ಎಂದು ನಾವು ಕಂಡುಕೊಂಡಿದ್ದೇವೆ. ತನಿಖೆಯನ್ನು ಮುಂದುವರಿಸಿ, ನಾವು ವೈರಲ್ ವಿಡಿಯೋದಲ್ಲಿ ಬಳಸಲಾದ ಆಡಿಯೋವನ್ನು ಪರಿಶೀಲಿಸಿದ್ದೇವೆ. ಅಗ 'ರಿಯಾಕ್ಷನ್ YO21' ಹೆಸರಿನ ಯೂಟ್ಯೂಬ್ ಚಾನಲ್‌ನಲ್ಲಿ ನಾವು ಮೂಲ ವೀಡಿಯೊವನ್ನು ಕಂಡುಕೊಂಡಿದ್ದೇವೆ. ಆ ವೀಡಿಯೊದಲ್ಲಿ, ಯೂಟ್ಯೂಬರ್ ಸಾರ್ವಜನಿಕರಲ್ಲಿ 'ಟೀಮ್ ಇಂಡಿಯಾದ ಅಂಡರ್‌ರೇಟೆಡ್ ಯುವ ಆಟಗಾರ ಯಾರು' ಎಂಬ ಪ್ರಶ್ನೆ ಕೇಳುತ್ತಾರೆ. ಇದಕ್ಕೆ ಒಬ್ಬ ಹುಡುಗ ಶುಭ್‌ಮನ್ ಗಿಲ್ ಅವರನ್ನು ಉಲ್ಲೇಖಿಸಿ ಮಾತನಾಡುತ್ತಾರೆ. ಇದೇ ಆಡಿಯೋವನ್ನು ಸದ್ಯ ವೈರಲ್ ಆಗುತ್ತಿರುವ ವಿಡಿಯೋಕ್ಕೆ ಎಡಿಟ್ ಮಾಡಿ ಅಪ್ಲೋಡ್ ಮಾಡಲಾಗಿದೆ.


ಅಲ್ಲದೆ ನಾವು ಗೂಗಲ್‌ನಲ್ಲಿ ಸಂಬಂಧಿತ ಕೀವರ್ಡ್‌ಗಳನ್ನು ಬಳಸಿ ಸರ್ಫರಾಜ್ ಖಾನ್ ಅವರು ಗಿಲ್ ಅನ್ನು ಕೆಟ್ಟ ಬ್ಯಾಟ್ಸ್‌ಮನ್ ಎಂದು ಕರೆದಿರುವ ಬಗ್ಗೆ ಯಾವುದಾದರು ಸುದ್ದಿ ಪ್ರಕಟವಾಗಿದೆಯೆ ಎಂದು ಪರಿಶೀಲಿಸಿದ್ದೇವೆ. ಆದರೆ, ಯಾವುದೇ ವಿಶ್ವಾಸಾರ್ಹ ಸುದ್ದಿ ವರದಿ ಕಂಡುಬಂದಿಲ್ಲ. ಹೀಗಾಗಿ ಸರ್ಫರಾಜ್ ಖಾನ್ ಶುಭ್‌ಮನ್ ಗಿಲ್ ಅವರನ್ನು ಕೆಟ್ಟ ಬ್ಯಾಟರ್ ಎಂದು ಹೇಳುವ ವಿಡಿಯೋ ಸುಳ್ಳು ಎಂದು ಟಿವಿ9 ಕನ್ನಡ ತನಿಖೆಯಿಂದ ತಿಳಿದುಬಂದಿದೆ. ಇಲ್ಲಿ ಸರ್ಫರಾಜ್ ಅಂತಹ ಯಾವುದೇ ಹೇಳಿಕೆಯನ್ನು ನೀಡಿಲ್ಲ. ವಿಡಿಯೋವನ್ನು ಎಡಿಟ್ ಮಾಡಿ ಬೇರೆಯದೇ ಆಡಿಯೋವನ್ನು ಸೇರಿಸಲಾಗಿದೆ ಎಂದು ನಾವು ಖಚಿತವಾಗಿ ಹೇಳುತ್ತೇವೆ.




# ಕಾನ್ಪುರ ಟೆಸ್ಟ್‌ಗೆ ಮಳೆಯ ಜೊತೆಗೆ ಮಂಗಗಳ ಕಾಟ..!

## ಮೈದಾನದ ರಕ್ಷಣೆಗೆ ಸಿಬ್ಬಂದಿಗಳಿದ್ದರೂ, ಭದ್ರತೆಯನ್ನು ಮತ್ತಷ್ಟು ಬಲಪಡಿಸುವ ಸುಲವಾಗಿ ಲಂಗೂರ್‌ಗಳ ನಿಯೋಜನೆ

ಮುಳ್ಳನ್ನು ಮುಳ್ಳಿನಿಂದಲೇ ತೆಗೆದ ಆಡಳಿತ ಮಂಡಳಿ ಮೈದಾನಕ್ಕೆ ಬಂದ ಪ್ರೇಕ್ಷಕರಿಂದ ವಸ್ತುಗಳನ್ನು ಕಿತ್ತುಕೊಳ್ಳುವ ಕೋತಿಗಳ ಈ ದಾಳಿಯನ್ನು ತಡೆಯಲು ಕ್ರೀಡಾಂಗಣದ ಆಡಳಿತ ಮಂಡಳಿ ಲಂಗೂರ್‌ಗಳನ್ನು (ಉದ್ದನೆಯ ಬಾಲದ ಕಪ್ಪು ಕೋತಿಗಳು) ಮತ್ತು ಅವುಗಳ ನಿರ್ವಾಹಕರನ್ನು ನೇಮಿಸಿದೆ. ಮೈದಾನದ ರಕ್ಷಣೆಗೆ ಸಿಬ್ಬಂದಿಗಳಿದ್ದರೂ, ಭದ್ರತೆಯನ್ನು ಮತ್ತಷ್ಟು ಬಲಪಡಿಸುವ ಸುಲವಾಗಿ ಲಂಗೂರ್‌ಗಳನ್ನು ನಿಯೋಜಿಸಲಾಗಿದೆ. ಭಾರತ ಮತ್ತು ಬಾಂಗ್ಲಾದೇಶ ನಡುವಿನ ಎರಡನೇ ಮತ್ತು ಕೊನೆಯ ಟೆಸ್ಟ್ ಪಂದ್ಯ ಕಾನ್ಪುರದ ಗ್ರೀನ್ ಪಾರ್ಕ್ ಕ್ರೀಡಾಂಗಣದಲ್ಲಿ ನಡೆಯುತ್ತಿದೆ. ಪಂದ್ಯದ ಮೊದಲ ದಿನ ಮಳೆಯಿಂದಾಗಿ ಕೇವಲ 35 ಓವರ್‌ಗಳ ಆಟ ಮಾತ್ರ ನಡೆದಿತ್ತು. ಆದರೆ ಎರಡನೇ ದಿನ ಪರಿಸ್ಥಿತಿ ಇನ್ನಷ್ಟು ಹದಗೆಟ್ಟಿದ್ದು, ಒಂದೇ ಒಂದು ಎಸೆತವನ್ನು ಎಸೆಯಲು ಸಾಧ್ಯವಾಗದೆ ಎರಡನೇ ದಿನದಾಟವನ್ನು ರದ್ದುಗೊಳಿಸಲಾಗಿದೆ. ಈ ನಡುವೆ ಕಾನ್ಪುರ ಟೆಸ್ಟ್ ಸುಗಮವಾಗಿ ನಡೆಯುವ ಸಲುವಾಗಿ ಗ್ರೀನ್ ಪಾರ್ಕ್ ಕ್ರೀಡಾಂಗಣದ ಆಡಳಿತ ಮಂಡಳಿ ತೆಗೆದುಕೊಂಡ ನಿರ್ಧಾರ ಇದೀಗ ಭಾರಿ ಮೆಚ್ಚುಗೆಗೆ ಪಾತ್ರವಾಗಿರುವುದಲ್ಲದೆ, ಎಲ್ಲಾರಲ್ಲೂ ಅಚ್ಚರಿಯನ್ನು ಮೂಡಿಸಿದೆ. ವಾಸ್ತವವಾಗಿ ಕಾನ್ಪುರದ ಗ್ರೀನ್ ಪಾರ್ಕ್ ಕ್ರೀಡಾಂಗಣದಲ್ಲಿ ಪ್ರತಿ ಭಾರಿಯೂ ಪಂದ್ಯಗಳು ನಡೆಯುವ ಸಮಯದಲ್ಲಿ ಮಂಗಗಳ ಉಪಟಳ ಹೆಚ್ಚಾಗಿರುತ್ತಿತ್ತು.






### ಲಂಗೂರ್‌ಗಳ ನೇಮಕ

**ಇಂಡಿಯನ್ ಎಕ್ಸ್‌ಪ್ರೆಸ್ ವರದಿಯ ಪ್ರಕಾರ, ಮೈದಾನಕ್ಕೆ ಬಂದ ಪ್ರೇಕ್ಷಕರಿಂದ ವಸ್ತುಗಳನ್ನು ಕಿತ್ತುಕೊಳ್ಳುವ ಕೋತಿಗಳ ಈ ದಾಳಿಯನ್ನು ತಡೆಯಲು ಕ್ರೀಡಾಂಗಣದ ಆಡಳಿತ ಮಂಡಳಿ ಲಂಗೂರ್‌ಗಳನ್ನು (ಉದ್ದನೆಯ ಬಾಲದ ಕಪ್ಪು ಕೋತಿಗಳು) ಮತ್ತು ಅವುಗಳ ನಿರ್ವಾಹಕರನ್ನು ನೇಮಿಸಿದೆ. ಮೈದಾನದ ರಕ್ಷಣೆಗೆ ಸಿಬ್ಬಂದಿಗಳಿದ್ದರೂ, ಭದ್ರತೆಯನ್ನು ಮತ್ತಷ್ಟು ಬಲಪಡಿಸುವ ಸುಲವಾಗಿ ಲಂಗೂರ್‌ಗಳನ್ನು ನಿಯೋಜಿಸಲಾಗಿದೆ. ಇದರಿಂದಾಗಿ ಪಂದ್ಯ ನಡೆಯುವ ವೇಳಿ ಕೋತಿಗಳು ವೀಕ್ಷಕರ ಮೇಲೆ ದಾಳಿ ಮಾಡುವುದು ನಿಯಂತ್ರಣಕ್ಕೆ ಬಂದಿದೆ ಎಂದು ಕಾನ್ಪುರದ ಗ್ರೀನ್ ಪಾರ್ಕ್ ಸ್ಟೇಡಿಯಂನ ನಿರ್ದೇಶಕ ಸಂಜಯ್ ಕಪೂರ್ ಹೇಳಿದ್ದಾರೆ.**

ಈ ಕೋತಿಗಳು ಕ್ರೀಡಾಂಗಣಕ್ಕೆ ಬರುವ ಪ್ರೇಕ್ಷಕರಿಂದ ಆಹಾರ, ಪಾನೀಯಗಳಿಂದ ಹಿಡಿದು ಮೊಬೈಲ್ ಫೋನ್‌ಗಳವರೆಗೆ ಇತರ ವಸ್ತುಗಳನ್ನು ಕಸಿದುಕೊಂಡು ಹೋಗುತ್ತಿದ್ದವು. ಇದು ಮೈದಾನಕ್ಕೆ ಬರುವ ಅಭಿಮಾನಿಗಳಿಗೆ ಕಿರಿಕಿರಿಯನ್ನುಂಟು ಮಾಡುತ್ತಿತ್ತು. ಈ ಬಗ್ಗೆ ಈ ಹಿಂದೆ ದೂರುಗಳು ಸಹ ಕೇಳಿಬಂದಿದ್ದವು. ಆದರೀಗ ಈ ಸಮಸ್ಯೆಗೆ ಪರಿಹಾರ ಕಂಡುಕೊಂಡಿರುವ ಕ್ರೀಡಾಂಗಣದ ಆಡಳಿತ ಮಂಡಳಿ ಮುಳ್ಳನ್ನು ಮುಳ್ಳಿನಿಂದಲೇ ತೆಗೆಯುವ ಕೆಲಸ ಮಾಡಿದೆ.

**ಕಾನ್ಪುರದಲ್ಲಿ ನಾನಾ ಸಮಸ್ಯೆಗಳು**

ಕಾನ್ಪುರ ಟೆಸ್ಟ್‌ಗೆ ಪ್ರತಿ ದಿನ ಒಂದಿಲ್ಲೊಂದು ಸಮಸ್ಯೆಗಳು ಎದುರಾಗುತ್ತಿವೆ. ಟೆಸ್ಟ್ ಆರಂಭಕ್ಕೂ ಮುನ್ನ ಮಳೆಯಿಂದಾಗಿ ಉಭಯ ತಂಡಗಳಿಗೆ ಸರಿಯಾಗಿ ಅಭ್ಯಾಸ ನಡೆಸಲು ಸಾಧ್ಯವಾಗಲಿಲ್ಲ.

ಅಲ್ಲದೆ ಈ ಕ್ರೀಡಾಂಗಣದಲ್ಲಿ ಆಟಗಾರರಿಗೆ ಸರಿಯಾದ ಮೂಲಭೂತ ಸೌಲಭ್ಯಗಳಿಲ್ಲ ಎಂದು ದೂರಿ ಟೀಂ ಇಂಡಿಯಾ ಆಟಗಾರರೇ ಇಲ್ಲಿ ಪಂದ್ಯವನ್ನು ಆಡಲು ಹಿಂಜರಿದಿದ್ದರು. ಇದೆಲ್ಲದರ ಜೊತೆಗೆ ಕ್ರೀಡಾಂಗಣದ ಸಿ ಬ್ಲಾಕ್, ಪ್ರೇಕ್ಷಕರು ಕೂತು ಪಂದ್ಯವನ್ನು ವೀಕ್ಷಿಸಲು ಅಷ್ಟು ಸುರಕ್ಷಿತವಾಗಿಲ್ಲ ಎಂಬ ವರದಿ ಹೊರಬಿದ್ದಿತ್ತು.

ಆದ್ದರಿಂದ, ಮೊದಲ ದಿನದ ಆಟ ಪ್ರಾರಂಭವಾಗುವ ಮೊದಲು ಪ್ರೇಕ್ಷಕರಿಗೆ ಸಿ ಬ್ಲಾಕ್‌ನ ಟಿಕೆಟ್‌ಗಳನ್ನು ನೀಡುವುದನ್ನು ನಿಲ್ಲಿಸಲಾಯಿತು.

ಇದಲ್ಲದೇ ಪಂದ್ಯಕ್ಕೆ ಮಳೆ ಅಡ್ಡಿಪಡಿಸುತ್ತಿದ್ದು, ಇದರಿಂದಾಗಿ ಪಂದ್ಯದ ಮೊದಲ ದಿನ ಕೇವಲ 35 ಓವರ್‌ಗಳನ್ನು ಮಾತ್ರ ಆಡಲು ಸಾಧ್ಯವಾಯಿತು.ಇದೀಗ ಎರಡನೇ ದಿನದಾಟವೂ ಮಳೆಯಿಂದ ರದ್ದಾಗಿದೆ.

# ಕೂದಲೆಳೆ ಅಂತರದಲ್ಲಿ ಬದುಕುಳಿದ ಭಾರತದ ಕ್ರಿಕೆಟಿಗರಿವರು





ಕಾರು ಅಪಘಾತದಲ್ಲಿ ಗಾಯಗೊಂಡ ಟೀಂ ಇಂಡಿಯಾ ಆಟಗಾರರಲ್ಲಿ ಮುಶೀರ್ ಖಾನ್ ಮೊದಲಿಗರಲ್ಲ. ಅವರಿಗೂ ಮುನ್ನ ತಂಡದ ಸ್ಟಾರ್ ಕ್ರಿಕೆಟಿಗರು ಭೀಕರ ಕಾರು ಅಪಘಾತಕ್ಕೆ ತುತ್ತಾಗಿದ್ದಾರೆ. ಆದರೆ ಅದೃಷ್ಟವಶಾತ್ ಯಾರಿಗೂ ಪ್ರಾಣ ಹಾನಿಯಾಗಲಿಲ್ಲ ಎಂಬುದು ಸಮಾಧಾನಕರ ಸಂಗತಿಯಾಗಿದೆ. ಹಾಗಿದ್ದರೆ ಮುಶೀರ್‌ಗೂ ಮುನ್ನ ಅಪಘಾತಕ್ಕೀಡಾದ ಆಟಗಾರರು ಯಾರು ಎಂಬುದನ್ನು ನೋಡುವುದಾದರೆ. ಭಾರತದ ಯುವ ಬ್ಯಾಟ್ಸ್‌ಮನ್ ಮುಶೀರ್ ಖಾನ್ ರಸ್ತೆ ಅಪಘಾತದಲ್ಲಿ ಗಾಯಗೊಂಡಿದ್ದಾರೆ. ಈ ಘಟನೆಯಲ್ಲಿ ಮುಶೀರ್ ಅವರಿಗೆ ಗಂಭೀರ ಗಾಯಗಳಾಗಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಮುಶೀರ್ ತನ್ನ ತಂದೆ ನೌಶಾದ್ ಖಾನ್ ಅವರೊಂದಿಗೆ ಇರಾನಿ ಕಪ್ ಪಂದ್ಯಕ್ಕಾಗಿ ಕಾನ್ಪುರದಿಂದ ಲಖನೌಗೆ ಹೋಗುತ್ತಿದ್ದಾಗ ಈ ಅಪಘಾತ ಸಂಭವಿಸಿದೆ. ಮುಶೀರ್ ಖಾನ್ ಟೀಂ ಇಂಡಿಯಾ ಆಟಗಾರ ಸರ್ಫರಾಜ್ ಖಾನ್ ಅವರ ಕಿರಿಯ ಸಹೋದರನಾಗಿದ್ದು, ಅವರು ಮುಂಬೈ ತಂಡದ ಪರ ಇರಾನಿ ಕಪ್ ಪಂದ್ಯವನ್ನು ಆಡಬೇಕಾಗಿತ್ತು. ಆದರೆ ಇದೀಗ ಕಾರು ಅಪಘಾತದಲ್ಲಿ ಗಾಯಗೊಂಡಿರುವ ಮುಶೀರ್, ಪಂದ್ಯಕ್ಕೆ ಅಲಭ್ಯರಾಗಿದ್ದು, ಅವರು ಚೇತರಿಸಿಕೊಳ್ಳಲು ಕನಿಷ್ಟ ಪಕ್ಷ 16 ವಾರಗಳು ಬೇಕು ಎಂದು ಹೇಳಲಾಗುತ್ತಿದೆ. ಅಷ್ಟಕ್ಕೂ ಹೀಗೆ ಕಾರು ಅಪಘಾತದಲ್ಲಿ ಗಾಯಗೊಂಡ ಟೀಂ ಇಂಡಿಯಾ ಆಟಗಾರರಲ್ಲಿ ಮುಶೀರ್ ಖಾನ್ ಮೊದಲಿಗರಲ್ಲ. ಅವರಿಗೂ ಮುನ್ನ ತಂಡದ ಸ್ಟಾರ್ ಕ್ರಿಕೆಟಿಗರು ಭೀಕರ ಕಾರು ಅಪಘಾತಕ್ಕೆ ತುತ್ತಾಗಿದ್ದಾರೆ. ಆದರೆ ಅದೃಷ್ಟವಶಾತ್ ಯಾರಿಗೂ ಪ್ರಾಣ ಹಾನಿಯಾಗಲಿಲ್ಲ ಎಂಬುದು ಸಮಾಧಾನಕರ ಸಂಗತಿಯಾಗಿದೆ. ಹಾಗಿದ್ದರೆ ಮುಶೀರ್‌ಗೂ ಮುನ್ನ ಅಪಘಾತಕ್ಕೀಡಾದ ಆಟಗಾರರು ಯಾರು ಎಂಬುದನ್ನು ನೋಡುವುದಾದರೆ.. ಟೀಂ ಇಂಡಿಯಾದ ಮಾಜಿ ನಾಯಕ ಮನ್ಸೂರ್ ಅಲಿ ಖಾನ್ ಪಟೌಡಿ ಕೂಡ ತಮ್ಮ 20ನೇ ವಯಸ್ಸಿನಲ್ಲಿ ಭೀಕರ ಅಪಘಾತಕ್ಕೀಡಾಗಿದ್ದರು. ಈ ಅಪಘಾತದಲ್ಲಿ ಅವರ ಬಲಗಣ್ಣಿಗೆ ಹಾನಿಯಾಗಿತ್ತು.

# ಟೆಸ್ಟ್ ಸರಣಿಗೆ ಆಸೀಸ್ ಸ್ಟಾರ್ ಅನುಮಾನ

ಆಸ್ಟ್ರೇಲಿಯಾ ತಂಡದ ಸ್ಟಾರ್ ಆಲ್‌ರೌಂಡರ್ ಕ್ಯಾಮರೂನ್ ಗ್ರೀನ್ ಇಂಜುರಿಗೆ ತುತ್ತಾಗಿದ್ದಾರೆ. ಹೀಗಾಗಿ ಅವರು ಪ್ರಸ್ತುತ ನಡೆಯುತ್ತಿರುವ ಇಂಗ್ಲೆಂಡ್ ವಿರುದ್ಧದ ಏಕದಿನ ಸರಣಿಯನ್ನು ಮಧ್ಯಕ್ಕೆ ನಿಲ್ಲಿಸಿ ತಮ್ಮ ತವರಿಗೆ ವಾಪಸ್ಸಾಗಿದ್ದಾರೆ. ಬೆನ್ನು ನೋವಿನ ಸಮಸ್ಯೆಯಿಂದ ಬಳಲುತ್ತಿರುವ ಗ್ರೀನ್, ಆಸೀಸ್ ಕ್ರಿಕೆಟ್ ಮಂಡಳಿಯ ಆದೇಶದಂತೆ ಇದೀಗ ತವರಿಗೆ ವಾಪಸ್ಸಾಗಲಿದ್ದು, ಆ ನಂತರ ಚಿಕಿತ್ಸೆಗೆ ಒಳಗಾಗಲಿದ್ದಾರೆ.

ಭಾರತ ಮತ್ತು ಬಾಂಗ್ಲಾದೇಶ ನಡುವೆ ಟೆಸ್ಟ್ ಸರಣಿ ನಡೆಯುತ್ತಿದ್ದರೆ, ಇನ್ನೊಂದೆಡೆ ಇಂಗ್ಲೆಂಡ್ ಮತ್ತು ಆಸ್ಟ್ರೇಲಿಯಾ ನಡುವೆ ಏಕದಿನ ಸರಣಿ ನಡೆಯುತ್ತಿದೆ. ಭಾರತ ಹಾಗೂ ಆಸ್ಟ್ರೇಲಿಯಾ ತಂಡಗಳು ಇದೇ ನವೆಂಬರ್‌ನಿಂದ ನಡೆಯಲ್ಲಿರುವ 5 ಟೆಸ್ಟ್ ಪಂದ್ಯಗಳ ಬಾರ್ಡರ್-ಗವಾಸ್ಕರ್ ಟ್ರೋಫಿ ಟೆಸ್ಟ್ ಸರಣಿಯಲ್ಲಿ ಮುಖಾಮುಖಿಯಾಗಲಿವೆ. ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್‌ಗೇರಲು ಈ ಸರಣಿ ಗೆಲ್ಲುವುದು ಉಭಯ ತಂಡಗಳಿಗೂ ಬಹಳ ಮುಖ್ಯವಾಗಿದೆ. ಎರಡೂ ತಂಡಗಳು ಬಲಿಷ್ಠ ಪಡೆಯನ್ನು ಕಟ್ಟಿಕೊಂಡು ಅಖಾಡಕ್ಕಿಳಿಯಲು ಸಜ್ಜಾಗಿವೆ. ಈ ಸರಣಿ ಆರಂಭವಾಗಲು ಇನ್ನು ಸಾಕಷ್ಟು ಸಮಯವಿದ್ದರೂ, ಆಘಾತ ನೀಡುವ ಸುದ್ದಿಯೊಂದು ಹೊರಬಿದ್ದಿದೆ.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966